## ಒಂದನೇ ಪುಟದಿಂದ

# ಸಿಎಂಯಿಂದ ದಕ್ಷತೆಯ ಪಾಠ

ಬಗೆಹರಿಸಲಾಗಲಿಲ್ಲವಲ್ಲ ಎಂಬ ಕೊರಗು ತಮನ್ನು ಕಾಡುತ್ತಿದೆ ಎಂದು ಹೇಳಿದರು.

ಕಂದಾಯ ಸಚಿವ ಕೃಷ್ಣ ಭೈರೇಗೌಡ ಸುದೀರ್ಘವಾಗಿ ಮಾತನಾಡಿದ್ದಾರೆ. ಅದರ ಅರ್ಥ ಅವರು ಇಲಾಖೆಯನ್ನು ಚೆನ್ನಾಗಿ ಅರ್ಥೈಸಿಕೊಂಡಿದ್ದಾರೆ ಎಂಬುದಾಗಿದೆ. ಪ್ರತಿಯೊಬ್ಬ ಮಂತ್ರಿಯೂ ಇಲಾಖೆಯಲ್ಲಿ ಹಿಡಿತ ಸಾಧಿಸಿ ದಕ್ಷತೆ ತರಬೇಕಾದರೆ ಇಲಾಖೆಯನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಬೇಕು. ಕೈ ಬೆರಳ ತುದಿಯಲ್ಲಿ ಅಂಕಿಅಂಶಗಳಿರಬೇಕು. ಆಗ ಮಾತ್ರ ಸಮರ್ಥ ಆಡಳಿತ ಮತ್ತು ಜನರ ಸಮಸ್ಯೆಗಳಿಗೆ ಸ್ಪಂದಿಸಲು ಸಾಧ್ಯ ಎಂದರು.

ಸಚಿವರಾಗುವುದು ಮುಖ್ಯವಲ್ಲ. ಜನಪರ ಕಾಳಜಿ ಅಗತ್ಯ. ಕೃಷ್ಣ ಭೈರೇಗೌಡ ಸಚಿವರಾದ ಮೇಲೆ ಕಂದಾಯ ಇಲಾಖೆ ಉತ್ತಮವಾಗಿ ಕೆಲಸ ಮಾಡುತ್ತಿದೆ ಎಂದು ಪ್ರಶಂಸಿಸಿದರು.

ಕಂದಾಯ ಇಲಾಖೆ ಉತ್ತಮವಾಗಿ ಕೆಲಸ ಮಾಡುತ್ತಿದೆ. ಮತ್ತಷ್ಟು ಚೆನ್ನಾಗಿ ಕೆಲಸ ಮಾಡಬೇಕು ಎಂದ ಅವರು, ಸರ್ವೆ, ಪೋಡಿ ಕೆಲಸಗಳು ಕಾಲಮಿತಿಯಲ್ಲಿ ಸಮರ್ಪಕವಾಗಿ ನಡೆಯಬೇಕು. ಆಗ ಮಾತ್ರ ಸರ್ಕಾರದ ಆಸ್ತಿಗಳ ಸಂರಕ್ಷಣೆ ಸಾಧ್ಯವಾಗಲಿದೆ. ಆಧುನಿಕ ಸಲಕರಣೆಗಳು ಹಾಗೂ ತಂತ್ರಜ್ಞಾನಗಳನ್ನು ಬಳಕೆ ಮಾಡಿ ಸಮೀಕ್ಷೆಯನ್ನು ಸುಲಭವಾಗಿ ಮಾಡಲು ಅವಕಾಶವಿದೆ ಎಂದರು.

ಬೆಂಗಳೂರಿನ ಮೆಜೆಸ್ಟಿಕ್ ಪ್ರದೇಶ ಹಿಂದೆ ಕೆರೆಯಾಗಿತ್ತು. ಭೂದಾಖಲೆಗಳ ಇಲಾಖೆ ಸರಿಯಾಗಿ ನಿರ್ವಹಣೆ ಮಾಡದೇ ಇದ್ದಿದ್ದರಿಂದ ಈಗ ಆ ಪ್ರದೇಶ ಬಸ್ ಸ್ಟಾಂಡಾಗಿದೆ. ಮುಂದಿನ 2 ವರ್ಷದಲ್ಲಿ ಕರ್ನಾಟಕದಲ್ಲಿ ಸರ್ವೆ ಕಾರ್ಯಗಳು ಪೂರ್ಣಗೊಳ್ಳಬೇಕು. ಪೋಡಿ ಮುಕ್ತ ರಾಜ್ಯವಾಗಬೇಕು ಎಂದು ಸೂಚನೆ ನೀಡಿದರು.

ಇಲಾಖೆಗೆ ಬಲ ತುಂಬಲು 750 ಸರ್ವೆಯರ್‌ಗಳು ಹಾಗೂ 36 ಎಡಿಎಲ್‌ಆರ್‌ಗಳ ನೇಮಕಾತಿ ಪ್ರಗತಿಯಲ್ಲಿದೆ. 2 ತಿಂಗಳಲ್ಲಿ ಅವರಿಗೆ ನೇಮಕಾತಿ ಆದೇಶ ನೀಡಲಾಗುತ್ತದೆ. ನೇಮಕಾತಿ ಪಾರದರ್ಶಕವಾಗಿರಬೇಕು. ಮಧ್ಯವರ್ತಿಗಳ ಹಾವಳಿ ಇರಬಾರದು. ಯಾರು, ಯಾರಿಗೂ ಹಣ ನೀಡಬಾರದು. ಕಂದಾಯ ಇಲಾಖೆ ಅನ್ನದಾತ ರೈತನಿಗೆ ಸೇವೆ ಒದಗಿಸುತ್ತದೆ. ಮಧ್ಯವರ್ತಿಗಳಿಗೆ ಅವಕಾಶ ಇಲ್ಲದಂತೆ ಸುಲಭ ಸರಳವಾಗಿ ಸೇವೆ ನೀಡಬೇಕು ಎಂದರು.

1227 ಪರವಾನಗಿ ಪಡೆದ ಸರ್ವೆಯರ್‌ಗಳನ್ನು ಖಾಯಂಗೊಳಿಸುವ ಕುರಿತು ಗಂಭೀರವಾಗಿ ಪರಿಶೀಲನೆ ಮಾಡಲಾಗುವುದು ಎಂದು ತಿಳಿಸಿದರು.

ಕಂದಾಯ ಸಚಿವ ಕೃಷ್ಣಭೈರೇಗೌಡ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಾಕ್ಷರಿ, ಶಾಸಕರಾದ ಪಿ.ಎಂ.ಅಶೋಕ್, ವಿನಯ್ ಕುಲಕರ್ಣಿ, ಕಂದಾಯ ಇಲಾಖೆಯ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಏ.17 ರಂದು ಪ್ರತಿಭಟನೆ: ಡಿಕೆಶಿ

ಕುಲಕರ್ಣಿ ಅವರು ಪಶುಸಂಗೋಪನೆ ಮಾಡುತ್ತಿದ್ದಾರೆ. ಎಷ್ಟು ಖರ್ಚು ವೆಚ್ಚಗಳು ಹೆಚ್ಚಾಗಿವೆ ಎಂದು ಅವರನ್ನೇ ಕೇಳಬೇಕು. ಬಿಜೆಪಿಯವರು ಜಾನುವಾರುಗಳ ಬೂಸಾ, ಹಿಂಡಿ ಬೆಲೆಯನ್ನು ಏಕೆ ಕಡಿಮೆ ಮಾಡಿಸಲಿಲ್ಲ. ಹಾಲಿನ ದರ ನಮ್ಮ ರಾಜ್ಯದಲ್ಲಿ ಅತ್ಯಂತ ಕಡಿಮೆಯಿದೆ. ಕರ್ನಾಟಕದಲ್ಲಿ 42 ರೂಪಾಯಿ ಇದ್ದರೆ. ಕೇರಳ 52 ರೂ., ಗುಜರಾತ್ 53 ರೂ., ದೆಹಲಿ 55 ರೂ., ಮಹಾರಾಷ್ಟ್ರ 52 ರೂ., ತೆಲಂಗಾಣ 58 ರೂ., ಅಸ್ಸಾಂ 60 ರೂ., ಹರಿಯಾಣ 56 ರೂ., ರಾಜಸ್ಥಾನ 50 ರೂ., ಮಧ್ಯಪ್ರದೇಶ 52 ರೂ., ಪಂಜಾಬ್ 56 ರೂ., ಉತ್ತರ ಪ್ರದೇಶ 56 ರೂ. ಬೆಲೆಯಿದೆ ಎಂದು ವಿವರಿಸಿದರು.ನೀರಿನ ಬೆಲೆ ಏರಿಕೆಯನ್ನು ಅತ್ಯಂತ ಕಡಿಮೆ ಮಾಡಿದ್ದೇವೆ. ಕಸ ಸಂಗ್ರಹಣೆ ಶುಲ್ಕವನ್ನು ಈ ಹಿಂದಿನ ಬಿಜೆಪಿ ಸರ್ಕಾರ ನಿಗದಿ ಮಾಡಿದ್ದಕ್ಕಿಂತ ಕಡಿಮೆ ನಿಗದಿ ಮಾಡಿ ಬಡವರ ಪರವಾಗಿ ನಾವು ನಿರ್ಧಾರ ತೆಗೆದುಕೊಂಡಿದ್ದೇವೆ. ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದ ಜನರ ಬದುಕು ಹಸನಾಗಲಿ ಎಂದು ಗ್ಯಾರಂಟಿ ಯೋಜನೆ ಮೂಲಕ 52 ಸಾವಿರ ಕೋಟಿ ರೂ. ಮೀಸಲಿಟ್ಟಿದ್ದೇವೆ. ಯುಪಿಎ ಸರ್ಕಾರದ ಅವಧಿಯಲ್ಲಿ ಚಿನ್ನದ ಬೆಲೆ 28 ಸಾವಿರ ರೂ. ಇತ್ತು. ಈಗ 92 ಸಾವಿರ ರೂ. ಇದೆ. 10 ಸಾವಿರವಿದ್ದ ಮೊಬೈಲ್ ದರ 30 ಸಾವಿರಕ್ಕೆ ಏರಿಕೆಯಾಗಿದೆ. 13 ಸಾವಿರವಿದ್ದ 32 ಇಂಚಿನ ಟಿವಿ 36 ಸಾವಿರವಾಗಿದೆ. 1.5 ಟನ್ ಸಾಮರ್ಥ್ಯದ ಎಸಿ ಬೆಲೆ 25 ಸಾವಿರದಿಂದ 44 ಸಾವಿರಕ್ಕೆ ಏರಿಕೆಯಾಗಿದೆ. ಫ್ರಿಡ್ಜ್ ಬೆಲೆ 10 ಸಾವಿರದಿಂದ 25 ಸಾವಿರಕ್ಕೆ ಹೆಚ್ಚಾಗಿದೆ. ರೂಪಾಯಿ ಎದುರು 59 ಇದ್ದ ಡಾಲರ್ ಮೌಲ್ಯ ಈಗ 89 ರೂ. ಆಗಿದೆ. ಸಿಮೆಂಟ್ ಬೆಲೆ 268 ಇದ್ದಿದ್ದು, ಈಗ 410 ರೂ.ಗೆ ಹೆಚ್ಚಳವಾಗಿದೆ. ಈ ಬೆಲೆಯನ್ನೆಲ್ಲ ಯಾರೂ ನಿಯಂತ್ರಣ ಮಾಡುವವರು ಎಂದು ಪ್ರಶ್ನಿಸಿದರು.ಕಬ್ಬಿಣದ ಬೆಲೆ 16 ಸಾವಿರ, ಕಾರಿನ ಬೆಲೆಗಳಲ್ಲಿ ಊಹೆಗೂ ನಿಲುಕದ ಜಿಗತವಾಗಿದೆ. 1.5 ಲಕ್ಷಕ್ಕೆ ಸಿಗುತ್ತಿದ್ದ ಮಿನಿ ಟ್ರಾಕ್ಟರ್ ಬೆಲೆ 5 ಲಕ್ಷಕ್ಕೆ ಏರಿಕೆಯಾಗಿದೆ. ಫಾರ್ಚೂನರ್ ಕಾರಿನ ಬೆಲೆ 25 ಲಕ್ಷದಿಂದ 45 ಲಕ್ಷಕ್ಕೆ ಏರಿಕೆಯಾಗಿದೆ ಎಂದು ವಿವಿಧ ಅಗತ್ಯ ವಸ್ತುಗಳು ಹಾಗೂ ವಾಹನಗಳ ಬೆಲೆಯ ಪಟ್ಟಿಯನ್ನು ಡಿಸಿಎಂ ಮಾಧ್ಯಮಗಳ ಮುಂದಿಟ್ಟರು. 80 ರೂ. ಇದ್ದ ಹೆದ್ದಾರಿ ಟೋಲ್ ಬೆಲೆ 250 ರೂ.ಗೂ ಹೆಚ್ಚಾಗಿದೆ. ಇದೆಲ್ಲವೂ ಅಶೋಕ್ ಅವರಿಗೆ ಕಾಣಿಸುತ್ತಿಲ್ಲವೇ? ಹಾಲಿನ ದರ ಏರಿಕೆ ವಿರೋಧಿಸುವ ನೀವು ರೈತ ವಿರೋಧಿಗಳು. ಬ್ಯಾಂಕ್‌ಗಳಲ್ಲಿ ಹಣ ಕಟ್ಟಲು, ಬಿಡಿಸಲು, ಚೆಕ್‌ಬುಕ್ ತೆಗೆದುಕೊಳ್ಳಲು ಹೀಗೆ ಎಲ್ಲದಕ್ಕೂ ಶುಲ್ಕ ವಿಧಿಸಿ ಸುಲಿಗೆ ಮಾಡಲಾಗುತ್ತಿದೆ. ಇದು ದೊಡ್ಡ ಹಗರಣವಾಗಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಅವರು ಇತ್ತೀಚೆಗೆ ಹೇಳುತ್ತಿದ್ದರು ಎಂದರು.ಬಿಜೆಪಿಯವರು ಪ್ರತಿಭಟನಾ ಬ್ಯಾನರ್‌ನಲ್ಲಿ ನನ್ನ ಹಾಗೂ ಸಿದ್ದರಾಮಯ್ಯ ಅವರ ಫೋಟೋಗಳನ್ನು ಹಾಕುವ ಬದಲು ಕೇಂದ್ರ ನಾಯಕರ ಫೋಟೋ ಹಾಕಿಕೊಳ್ಳಿ, ನಮ್ಮ ಬೆಲೆ ಏರಿಕೆ ಬದಲು ಬಿಜೆಪಿ ಬೆಲೆ ಏರಿಕೆಯನ್ನು ಪ್ರಶ್ನಿಸಿ. ನಿಮ್ಮ ಆಕ್ರೋಶ ನಿಮ್ಮ ನಾಯಕರ ಮೇಲಿರಲಿ, ಇದ-ರಿಂದ ಜನರಿಗೆ, ಪಕ್ಷಕ್ಕೆ ಸೇರಿದಂತೆ ಎಲ್ಲರಿಗೂ ತೊಂದರೆಯಾಗುತ್ತಿದೆ ಎಂದು ವಿವರಿಸಬೇಕು. ಬಿಜೆಪಿಯವರ ಹೋರಾಟ ಗ್ಯಾರಂಟಿಗಳ ವಿರುದ್ಧ ನಡೆಯುತ್ತಿದೆ. 1 ಕೋಟಿ 22 ಲಕ್ಷ ಮಹಿಳೆಯರು ಗೃಹಲಕ್ಷ್ಮೀ ಲಾಭ ಪಡೆ-ಯುತ್ತಿದ್ದಾರೆ. ತೆಲಂಗಾಣದಲ್ಲಿ ನಮ್ಮ ಪಕ್ಷದ ಸರ್ಕಾರವಿದೆ. ಅಲ್ಲಿ 6 ಕೆಜಿ ಅಕ್ಕಿ ಕೊಡುತ್ತಿದ್ದೇವೆ. ನಮ್ಮಲ್ಲಿ 10 ಕೆಜಿ ನೀಡಲಾಗುತ್ತಿದೆ. ನಾವು ಇಷ್ಟರ ಮಟ್ಟಿಗೆ ಗ್ಯಾರಂಟಿಗಳನ್ನು ನೀಡಿ ಯಶಸ್ವಿಯಾಗುತ್ತೇವೆ ಎಂದು ಅವರು ಎಣಿಸಿರಲಿಲ್ಲ ಅದಕ್ಕೆ ಅವರಿಗೆ ಹೊಟ್ಟೆಯುರಿ. ಲೋಕದ ಡೊಂಕ ನೀವೇಕೆ ತಿದ್ದುವಿರಿ? ನಿಮ್ಮ ನಿಮ್ಮ ತನುವ ಸಂತೈಸಿಕೊಳ್ಳಿ, ನಿಮ್ಮ ಮನವ ಸಂತೈಸಿಕೊಳ್ಳಿ ಕೂಡಲಸಂಗಮದೇವ ಎಂದು ವಚನ ಉಲ್ಲೇಖಿಸಿದ ಡಿಸಿಎಂ ಆ ಪಕ್ಷದ ಎಲ್ಲರೂ ವೀರರು ಶೂರರು ಆಗಲು ಹೊರಟಿದ್ದಾರೆ. ಬಿಜೆಪಿಯವರ ಪಾತ್ರೆಗಳೆಲ್ಲ ತೂತಾಗಿ ಸೋರುತ್ತಿದೆ.

ಕೇಂದ್ರ ಬಿಜೆಪಿ ಸರ್ಕಾರದ ಜನಾಕ್ರೋಶ ಎಂದು ಬಿಹೆಪಿಯವರು ಯಾತ್ರೆ ಮುಂದುವರೆಸಬೇಕು. ಯಾವುದೇ ಕಾರಣಕ್ಕೂ ಇದನ್ನು ನಿಲ್ಲಿಸಬಾರದು. ಅಮೆರಿಕದ ಸುಂಕ ನೀತಿಯಿಂದ ದೇಶದ ಜನರಿಗೆ ಆಗಿರುವ ನಷ್ಟದ ಬಗ್ಗೆ ಏಕೆ ಯಾರೂ ಮಾತನಾಡುತ್ತಿಲ್ಲ. ಷೇರುಪೇಟೆ ಮುಳುಗಿ ಹೋಗಿದೆ. ಆದರೂ ಏಕೆ ಮಾತನಾಡುತ್ತಿಲ್ಲ ಎಂದು ತಿಳಿಸಿದರು.ನೀವು ಯಾವ ವಸ್ತುಗಳ ಬೆಲೆ ಕಡಿಮೆ ಮಾಡಲು ಹೋರಾಟ ಮಾಡುತ್ತೀರಿ ಎಂದು ಕೇಳಿದಾಗ, ಕೇಂದ್ರ ಸರ್ಕಾರ ಬೆಲೆ ಏರಿಕೆ ಮಾಡಿದ ಕಾರಣಕ್ಕೆ ನಮ್ಮಲ್ಲಿಯೂ ಬೆಲೆ ಏರಿಕೆಯಾಗಿದೆ.

# ಮನುಕುಲದ ಒಳಿತು ಬಯಸಿದ ಮಹಾವೀರ

ವಿಚಾರಗಳು ಸಹಜವಾಗಿದ್ದರೆ ಜೈನ ಧರ್ಮದ ವಿಚಾರಗಳು ಕಠಿಣ ವ್ರತಗಳಾಗಿದ್ದು ಸಲ್ಲೇಖನದಂತಹ ವ್ರತ ಅತಿ

ಕಠಿಣ ವ್ರತಗಳಲ್ಲಿ ಒಂದಾಗಿದೆ ಎಂದ ಭಾಂಡಗೆ, ಮಾನವ ಕುಲದ ಒಳಿತನ್ನು ಬಯಸಿದ ಮಹಾವೀರರ ತತ್ವಗಳನ್ನು ನಾವೆಲ್ಲರೂ ಪಾಲಿಸೋಣ ಎಂದರು. ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ಬುದ್ಧ, ಬಸವ, ಮಹಾವೀರ ನಮ್ಮ ದೇಶದ ಧರ್ಮ ಪರಂಪರೆಯನ್ನು ಜಾಗತಿಕ ಮಟ್ಟದಲ್ಲಿ ತಲುಪಿಸಿದ್ದರಿಂದ ಇಂದು ಭಾರತ ಜಾಗತಿಕ ಮನ್ನಣೆ ಪಡೆದುಕೊಂಡಿದೆ ಎಂದರು. ಭಗವಾನ ಮಹಾವೀರರ ಸಂದೇಶ ಹಾಗೂ ಸಹಾನುಭೂತಿ ಅವರು ಪ್ರಾಣಿ, ಪಕ್ಷಿಗಳಲ್ಲದೇ ಮನುಷ್ಯರಲ್ಲೂ ಕೂಡಾ ಹಿಂಸೆಯಾಗಬಾರದೆಂಬ ಸತ್ಯವನ್ನು ತೋರಿಸಿಕೊಟ್ಟಿದ್ದಾರೆ. ಜೈನ ಸಮುದಾಯ ಎಲ್ಲ ಧರ್ಮಗಳ ಆಚರಣೆಯಲ್ಲಿ ಪಾಲ್ಗೊಳುವುದಲ್ಲದೇ ಮಾನವೀಯ ಮೌಲ್ಯವನ್ನು ಅರಿತ ಧರ್ಮವಾಗಿದೆ ಎಂದರು.

ಉಪನ್ಯಾಸ ನೀಡಿದ ಬಸವೇಶ್ವರ ಕಲಾ ಮಹಾವಿದ್ಯಾಲಯದ ಉಪನ್ಯಾಸಕ ಎಸ್.ಡಿ.ಕೆಂಗಲಗುತ್ತಿ, ಭಾರತದಲ್ಲಿ ಕಾಲ-ಕಾಲಕ್ಕೆ ಧರ್ಮ ಅವನತಿಯ ಸಂದರ್ಭದಲ್ಲಿ ಒಟ್ಟು 24 ತೀರ್ಥಂಕರರು ಅವತರಿಸಿ ಇಲ್ಲಿಯ ನೆಲ-ಜಲ ಪಾವನ ಮಾಡಿದ್ದಾರೆ. ಅವರಲ್ಲಿ ಮಹಾವೀರ ಅಗ್ರಗಣ್ಯರಾಗಿದ್ದು ಜೈನ ಸಮುದಾಯದ ಆರಾಧ್ಯದೈವರಾಗಿದ್ದಾರೆ. ಪ್ರತಿಯೊಬ್ಬನು ಅರಿಷಡ್ವರ್ಗಗಳನ್ನು ನಿಗ್ರಹಿಸಿ ಹತೋಟಿಯಲ್ಲಿ ಇಟ್ಟುಕೊಳ್ಳುವುದೇ ಮಾನವ

ಜನ್ಮದ ಮೂಲ ಗುರಿಯಾಗಿದ್ದು ಆ ನಿಟ್ಟಿನಲ್ಲಿ ಭಗವಾನ ಮಹಾವೀರರು ಪಂಚತತ್ವಗಳನ್ನು ಬೋಧಿಸಿದರು ಎಂದು ಹೇಳಿದರು. ಅಪರ್ ಜಿಲ್ಲಾಧಿಕಾರಿ ಅಶೋಕ ತೇಲಿ ಹಾಗೂ ಸಮಾಜದ ಮುಖಂಡ ಬೇತಾಳ ಕಾರ್ಯಕ್ರಮದಲ್ಲಿ ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ

ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ್ ಸ್ವಾಗತಿಸಿದರು.

ಶಂಕರಲಿಂಗ ದೇಸಾಯಿ ನಿರೂಪಿಸಿದರು. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಶ್ರೀಶೈಲ ಕಂಕಣವಾಡಿ, ಪುಖರಾಜ ಬೇತಾಳ, ದಿನೇಶ, ಸೋನಿ ಬಾಬುರಾವ್ ಸೇರಿದಂತೆ ಸಮಾಜದ ಇತರರು ಇದ್ದರು.

# ಹೋರಾಟಕ್ಕೆ ಜನತಾ ದಳ ಸಜ್ಜು

ಹೋಗಿದ್ದಾರೆ. ಇನ್ನೆಷ್ಟು ದಿನ ಇದನ್ನು ಸಹಿಸಿಕೊಳ್ಳಬೇಕು. ಅದಕ್ಕೆ ನಾವು ಹೋರಾಟಕ್ಕೆ ಧುಮುಕಿದ್ದೇವೆ. ನಾವು 'ಸಾಕಪ್ಪ ಸಾಕು ಕಾಂಗ್ರೆಸ್ ಸರ್ಕಾರ ಸಾಕು' ಎಂಬ ಅಭಿಯಾನ ಶುರು ಮಾಡಿದ್ದೇವೆ ಎಂದು ಅವರು ತಿಳಿಸಿದರು. ಜೆಡಿಎಸ್ ಶನಿವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಿದೆ ಎಂದು ನಿಖಿಲ್ ಕುಮಾರಸ್ವಾಮಿ ಮಾಹಿತಿ ನೀಡಿದ್ದಾರೆ.

# ಗೆಲುವೇ ಖರ್ಗೆಗೆ : ಸಿಟಿ ರವಿ ಪ್ರಶ್ನೆ

ಹೇಳ ಹೊರಟಿರುವುದು ಏನು? ಎಂದು ವ್ಯಂಗ್ಯವಾಡಿದ್ದಾರೆ.

ನಿಮ್ಮ ಮಾತು ಕೇಳಿದಾಗ ಯದ್ಭಾವಂ ತದ್ಭವತಿ ಎಂಬ ನಾಣ್ನುಡಿ ನೆನಪಾಗುತ್ತದೆ. ಅಂದ ಹಾಗೆ, ನಿಮ್ಮ ಅಳಿಯ ರಾಧಾಕೃಷ್ಣ, ಕಾಂಗ್ರೆಸ್ಸಿನ ನವ ಅಧಿನಾಯಕಿ ಪ್ರಿಯಾಂಕಾ ರಾಬರ್ಟ್ ವಾದ್ರಾ, ನಿಮ್ಮ ಅಧಿನಾಯಕ ರಾಹುಲ್ ಗಾಂಧಿ ಇವರೆಲ್ಲರೂ ಇವಿಎಂಮೋಸದಿಂದಲೇ ಗೆದ್ದಿದ್ದಾರೆ ಎಂದೇ ತಮಿಳುನಾಡುನಲ್ಲಿ ಡಿಎಂಕೆ, ಕೇರಳದಲ್ಲಿ ಕಮ್ಯುನಿಸ್ಟರು, ಬಂಗಾಳದಲ್ಲಿ ತೃಣಮೂಲ ಕಾಂಗ್ರೆಸ್, ಕರ್ನಾಟಕದಲ್ಲಿ ಕಾಂಗ್ರೆಸ್ ಇವಿಎಂ ಕಾರಣದಿಂದ ಗೆದ್ದಿದ್ದಾರೆ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

# ಕಮಲನಗರ ಪೊಲೀಸ ಠಾಣೆಯಲ್ಲಿ ಮಹಾವೀರ ಜಯಂತಿ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.10:ಪಟ್ಟಣದ ಪೊಲೀಸಠಾಣೆಯಲ್ಲಿಗುರುವಾರ ಮಹಾವೀರಜಯಂತಿ ಪ್ರಯುಕ್ತ ಮಹಾವೀರರ ಭಾವಚಿತ್ರಕ್ಕೆ ಸಿ.ಪಿ.ಐ. ಅಮರಪ್ಪ ಶಿವಬಲ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು.

ನಂತರಮಾತನಾಡಿ,ಮಹಾವೀರ ಜಯಂತಿ ಜೈನಸಮುದಾಯದ ಪ್ರಮುಖ ಹಬ್ಬವಾಗಿದೆ. ಮಹಾವೀರ್ ಜಯಂತಿಯನ್ನು ದೇಶಾದ್ಯಂತ ಆಚರಿಸಲಾಗುತ್ತದೆ. ಭಗವಾನ್ ಮಹಾವೀರರು ಜೈನ ಧರ್ಮದ ಕೊನೆಯ ಅಧ್ಯಾತ್ಮಿಕ ನಾಯಕರಾಗಿದ್ದರು.ಇವರು ಶಾಂತಿಯಿಂದ ಸಮಾಜವನ್ನು ಪರಿವರ್ತನೆ ಮಾಡುವ ಪ್ರಯತ್ನ ಮಾಡಿದರು ಎಂದು ಹೇಳಿದರು.ಈ ಸಂದರ್ಭದಲ್ಲಿ ಪಿ.ಎಸ್.ಐ ಚಂದ್ರಶೇಖರ ನಿರ್ಣೆ ಮಾತನಾಡಿ,ಮಹಾವೀರಜಯಂತಿ ಜೈನ ಧರ್ಮದ ಪ್ರಮುಖ ಹಬ್ಬಗಳಲ್ಲಿ ಒಂದಾಗಿದೆ, ಇದು 24 ನೇ ತೀರ್ಥಂಕರರಾದ ಭಗವಾನ್ ಮಹಾವೀರರ ಜನ್ಮವನ್ನು ಸ್ಮರಿಸುತ್ತದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಡಿಗ್ಗಿ ಗ್ರಾಮದಲ್ಲಿ ಮಹಾದೇವರ ಅದ್ದೂರಿ ಲಗ್ನ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.10:ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಬಾರಸಿ ಹಬ್ಬದ ಪ್ರಯುಕ್ತ ಕಳೆದ 12 ದಿನಗಳ ಕಾಲ ಸತತವಾಗಿ ನಡೆದ ಭಜನೆ ಕಾರ್ಯಕ್ರಮ ಬುಧವಾರ ರಾತ್ರಿ ಮಹಾದೇವರ ಅದ್ದೂರಿಯಾಗಿ ಲಗ್ನದೊಂದಿಗೆ ತೆರೆಕಂಡಿತು.ಮಚ್ಚಿಂದ್ರ ಜಾಧವ ಮಾತನಾಡಿ,ಪ್ರತಿ ವರ್ಷ ನಮ್ಮ ಡಿಗ್ಗಿ ಗ್ರಾಮದಲ್ಲಿ ಬಾರಸಿ ಹಬ್ಬದ ಪ್ರಯುಕ್ತ ಮಲ್ಲಿಕಾರ್ಜುನ ಬಿರಾದಾರ ಮತ್ತು ಮಚ್ಚಿಂದ್ರ ಜಾಧವ ಇವರ ಮನೆಯಲ್ಲಿ ಮಹಾದೇವ ಮತ್ತು ಪಾರ್ವತಿ ಪ್ರತಿಷ್ಠಾಪನೆ ಮಾಡಲಾಗುವುದು,ಸತವಾಗಿ 12 ದಿನ ಭಜನೆ ಮತ್ತು ಭಜನೆ ಪದಗಳಿಗೆ ಹೆಜ್ಜೆಹಾಕಿ ವಿಜೃಂಭಣೆಯಿಂದ ಕಾರ್ಯಕ್ರಮ ನಡಸಿ ದೇವರನ್ನು ರಾಧನೆ ನಡೆಯುತ್ತದೆ,ಭಕ್ತರಿಗೆ ಪ್ರತಿದಿನ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು ಎಂದು ಹೇಳಿದರು.ಗ್ರಾಮದ



ಪ್ರಮುಖರಸ್ತೆಯಲ್ಲಿ ಮಹಾದೇವರ ಮೆರವಣಿ ಮಧ್ಯೆ ಭವ್ಯ ಕುಣಿತ ನಡೆಯಿತು.ಬಾರುಡ ಪದಗಳಿಗೆ "ಓಂ ನಮಃ ಶಿವಾಯ" "ಓಂ ನಮಃ ಶಿವಾಯ"ಮತ್ತು "ಹರ ಹರ ಮಹಾದೇವ"ಎಂದು ಹೇಳಿ ಉತ್ಸವ ತುಂಬಿದರು,ಯುವಕರು ಒಬ್ಬರಾದ ನಂತರ ಒಬ್ಬರು ಮಹಾದೇವರನ್ನು ಹೆಗಲ ಮೇಲೆ ಹೊತ್ತಿಕೊಂಡು ಕುಣಿತ ಸಂಭ್ರಮ ಪಟ್ಟರು ನೆರೆದಿದ ನೂರಾರು ಭಕ್ತರ ಇದಕ್ಕೆ ಸಾಕ್ಷಿ ಯಾದರು.


ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಶಿವಕುಮಾರ ರಾಂಪುರೆ, ವಿಜಯಕುಮಾರ ಪಾಟೀಲ, ಸಾಯಿನಾಥ ಬಿರಾದಾರ, ರಾಜರಾಮ ಜಾಧವ,ಬಾಲಾಜಿ ಬಿರಾದಾರ, ಬಾಬುರಾವ ಜಾಧವ,ಸುಭಾಸ ಬಿರಾದಾರ, ಅನಿಲ ರಾಂಪುರೆ,ಸಂಗಮನಾಥ ಬಿರಾದಾರ, ರಾಜಕುಮಾರ ಕುಂಬಾರಗಿರೆ,ವಿಜಯಕುಮಾರ ಪಂಚಾಳ,ಮಯೂರ ಕುಂಬಾರಗಿರೆ,ಬಸವರಾಜ ಬಿರಾದಾರ, ಪರಮೇಶ ರಾಂಪುರೆ,ಗಣೇಶ ಪಾಟೀಲ, ಸೇರಿದಂತೆ ಅಕ್ಕ'ನ ಬಳಗ ಹಾಗೂ ಅಣ್ಣ'ನ ಬಳಗದವರು ಇದ್ದರು. ಮಹಾದಯ್ಯ

ಸ್ವಾಮಿ ಮತ್ತು ಚಂದ್ರಕಾಂತ ಸ್ವಾಮಿ ಲಗ್ನ ಮಂತ್ರನುಡಿದರು.

" ಬಾರಸಿ ಹಬ್ಬದಂದು ಮಹಾದೇವರ ಲಗ್ನ ಮಾಡುವುದು ಬಹಳ ಹಳೆಯ ಪರಂಪರೆ, ಮಹಾದೇವ ಮದುವೆ ನಂತರ ಗ್ರಾಮದಲ್ಲಿ ಮದುವೆ ಸಮಾರಂಭಕ್ಕೆ ಚಾಲನೆ ಸಿಕ್ಕಂತೆ, ಎಲ್ಲಾ ಶುಭ ಕಾರ್ಯಗಳು ಚೆನ್ನಾಗಿ ನಡೆಯುತ್ತವೆ."

**-ಮಲ್ಲಿಕಾರ್ಜುನ ಬಿರಾದಾರ**
**ಡಿಗ್ಗಿ ಗ್ರಾಮದ ಹಿರಿಯರು.**

# ಸೇಡಂ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಾನಪದ ಉತ್ಸವ



ಸೇಡಂ. ಏ. 10: ತಾಲೂಕಿನ ಹೃದಯಭಾಗದಲ್ಲಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜು, ಸೇಡಂ ನಲ್ಲಿ ನಮ್ಮ ಸಂಸ್ಕೃತಿ ನಮ್ಮ ಹೆಮ್ಮೆ ಎಂಬ ನೇಲೆಗಟ್ಟಿನಲ್ಲಿ ಜಾನಪದ ಉತ್ಸವವನ್ನು ತುಂಬಾ ಅದ್ದು-ರಿಯಾಗಿ ಆಚರಿಸಲಾಯಿತು. ಎತ್ತಿನ ಬಂಡಿಯ ಮೂಲಕ ವಿವಿಧ ಜಾನಪದ ನೃತ್ಯವನ್ನು ಮಾಡುವ ಮೂಲಕ ಉತ್ಸವದ ಮೇರವಣಿಗೆ ಮಾಡಲಾಯಿತು. ಈ ಉತ್ಸವದ ಕಾರ್ಯಕ್ರಮದ ವೇದಿಕೆಯ ಮೇಲೆ ಸರಕಾರಿ ಪ್ರಥಮ ದರ್ಜೆ ಕಾಲೇಜು, ಸೇಡಂನ ಕಾಲೇಜು ಅಭಿವೃದ್ಧಿ ಮಾಜಿ ಸದಸ್ಯರಾದ ಶ್ರೀ ನಾಗೇಶ್ವರರಾವ್ ಮಾಲಿಪಾಟೀಲ ಉದ್ಘಾಟಕರಾಗಿ ಮತ್ತು ಮುಖ್ಯ ಅತಿಥಿಗಳಾಗಿ ಡಾ.ಲಿಂಗಾರೆಡ್ಡಿ ಶೇರಿ, ಡಾ. ಶೋಭಾದೇವಿ ಚಕ್ಕಿ ಕಾಲೇಜು ಅಭಿವೃದ್ಧಿ ಸದಸ್ಯರು ಸ.ಪ್ರ.ದ.ಕಾ.ಸೇಡಂ., ಕಾಲೇಜಿನ ಪ್ರಾಂಶುಪಾಲರಾದ ಡಾ.ಪಂಡಿತ ಬಿ.ಕೆ.ಅಧ್ಯಕ್ಷತೆಯನ್ನು ವಹಿಸಿದ್ದರು, ಐ.ಕ್ಯೂ.ಎ.ಸಿ. ಸಂಯೋಜಕರಾದ ಡಾ.ಶಾಕೇರಾ ತನ್ನೀರ್, ಜಾನಪದ ಉತ್ಸವದ ಸಂಯೋಜಕರಾದ ಶ್ರೀ.ಬಸವರಾಜ ಎಂ.ಕೊನೇರಿ ವಿದ್ಯಾರ್ಥಿ ಕಲ್ಯಾಣಾಧಿಕಾರಿಯಾದ ಡಾ.ವಿಷ್ಣುವರ್ಧನ, ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ.ಜೆ.ಎಸ್.ಪಟ್ಟಣಕರ್, ರಾ.ಸೇ.ಯೋಜನೇಯ ಕಾರ್ಯಕ್ರಮಾಧಿಕಾರಿಯಾದ ಮುಗಳಿ,ಡಾ.ವಿಲಾಸ ಸಾಳುಂಕೆ ವೇದಿಕೆಯ ಮೇಲೆ ಆಸಿನರಾಗಿದ್ದರು. ಡಾ.ಮಲ್ಲಿಕಾರ್ಜುನ ಈ ಜಾನಪದ ಉತ್ಸವದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಬಂಜಾರಾ ನೃತ್ಯ, ಎಲ್ಲಮ್ಮ ದೇವಿಯ ರೂಪ,ಅಲಾಯ ಕುಣಿತ, ಕೋಲ ಕೋಲನ ಕೋಲು ನೃತ್ಯ ಇಂತಹ ವಿವಿಧ ಜಾನಪದ ನೃತ್ಯಗಳು,ಹಾಡುಗಳು, ಹಳ್ಳಿಯ ಉಡುಗೆ-ತೋಡುಗೆಗಳ ಮೂಲಕ ಎಲ್ಲರ ಕಣ್ಮನಗಳನ್ನು ಸೇಳೆಯುವುದರ ಮೂಲಕ ಮೆಚ್ಚುಗೆಗೆ ಪಾತ್ರರಾದರು. ಜಾನಪದಕ್ಕೆ ಸಂಬಂಧಿಸಿದ ಪರಿಕರಗಳು ಉದಾ:ಬಿಸಾಕಲ್ಲು, ಒಳಕಲ್ಲು, ಓಣಕೆ ಯಂತಹ ಸಲಕರಣೆಗಳು,ಕೃಷಿ ಆಧಾರಿತ ನೆಗಲು, ಎತ್ತಿನ ಬಂಡಿ, ಕುಂಟೆ ಮುಂತಾದವುಗಳು ಆಕರ್ಷಣಿಯವಾಗಿದ್ದವು. ವಿದ್ಯಾರ್ಥಿಗಳು ಸಜ್ಜೆ ರೋಟ್ಟಿ, ಸೇಂಗಾ ಹೋಳಿಗೆ, ಬದನೆಕಾಯಿ, ಸುರಕುಂಬಾ, ಪುಂಡಿಪಲ್ಯಾದಂತಹ ರುಚಿಕರ ಅಡುಗೆಗಳನ್ನು ಮನೆಯಿಂದ ತಂದು ಎಲ್ಲರಿಗು ತುಂಬಾ ಖುಷಿಯಿಂದ ಉಣಿಸಿದರು. ಎಲ್ಲಾ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು, ಬೊಧಕೇತರ ಸಿಬ್ಬಂಧಿಗಳು ಜಾನಪದ ಉಡುಪುಗಳಾದ ಇರಕಲ ಸೀರೆ,ಧೋತಿ-ಕುರ್ತಾಗಳಿಂದ ಉತ್ಸವಕ್ಕೆ ಮೇರಗು ತಂದಿದ್ದರು. ಡಾ.ಕಪಿಲ ಚಕ್ರವರ್ತಿಯವರು ಕಾರ್ಯಕ್ರಮದ ನೀರೂಪಣೆಯನ್ನು ಮಾಡಿದರು. ಶ್ರೀ ಬಸವರಾಜ ಕೊನೇರಿ ಸ್ವಾಗತಿಸಿದರು, ಡಾ.ಮಲ್ಲಿಕಾರ್ಜುನ ಮುಗಳಿ ವಂದಿಸಿದರು.

# ಡೈಮಂಡ್ ದ್ವಿತೀಯ ಪಿ.ಯು.ಸಿ ಅದ್ಭುತ ಫಲಿತಾಂಶ-ರಾಜ್ಯಮಟ್ಟದಲ್ಲಿ ಮಿಂಚು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.10:ಡೈಮಂಡ್ ಗ್ರುಪ್ ಆಫ್ ಇನ್ಸಿ ಟ್ಯುಶನ್‌ನ 2024-25ನೇ ಸಾಲಿನ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯಲ್ಲಿ ಅಪ್ರತಿಮ ಸಾಧನೆಗೈದು ಬೀದರ ಜಿಲ್ಲೆಗೆ ಅಗ್ರಗಣ್ಯರೆನಿಸಿದ್ದಾರೆ.

ಭಾಲ್ಕಿ ತಾಲೂಕಿನ ಹಲವಾರು ವಿದ್ಯಾರ್ಥಿಗಳು ಗ್ರಾಮೀಣ ಭಾಗದಲ್ಲಿದ್ದು ಕನ್ನಡ, ಮರಾಠಿ, ಉರ್ದು ಮತ್ತು ಆಂಗ್ಲ ಮಾಧ್ಯಮದಲ್ಲಿ ಅಭ್ಯಾಸ ಮಾಡಿದರೂ ಕೂಡ ಅತ್ಯುತ್ತಮ ಫಲಿತಾಂಶವನ್ನು ತಂದುಕೊಟ್ಟಿದ್ದಾರೆ.

ಕಾಲೇಜಿನ ವಿಷಯವಾರು ಫಲಿತಾಂಶದ ವಿವರ ಕೆಳಗಿನಂತಿದೆ:

ಕನ್ನಡ, ಮರಾಠಿ, ಉರ್ದು ಮತ್ತು ಕಂಪ್ಯೂಟರ್ ಸೈನ್ಸ್ 100% , ಆಂಗ್ಲ ಭಾಷೆ 99.88, ಹಿಂದಿ 99.8, ಭೌತಶಾಸ್ತ್ರ 98.53, ಗಣಿತ 98.41, ಜೀವಶಾಸ್ತ್ರ 97.16 ಹಾಗೂ ರಸಾಯನಶಾಸ್ತ್ರ



97.8 ಇರುತ್ತದೆ.

ಮರಾಠಿ ಮಾಧ್ಯಮದ ವಿದ್ಯಾರ್ಥಿನಿ ಕೋಮಲ ಸುಭಾಷ ಹಾಗೂ ಕನ್ನಡ ಮಾಧ್ಯಮದ ವಿದ್ಯಾರ್ಥಿನಿ ಸಂಗೀತಾ ಶರಣಪ್ಪಾ ಇಬ್ಬರೂ ಸಹ 600ಕ್ಕೆ 582, 97.00% ಪಡೆದು ಕಾಲೇಜಿನ ಕೀರ್ತಿ ಪತಾಕೆಯನ್ನು ಎತ್ತರಕ್ಕೆ ಹಾರಿಸಿದ್ದಾರೆ.

ಕಾಲೇಜಿನ ವಿದ್ಯಾರ್ಥಿಗಳ ಫಲಿತಾಂಶದ ವಿವರ ಕೆಳಗಿನಂತಿದೆ:

ಸಿದ್ರಾಫಾತಿಮಾರಫಿಯುದ್ದೀನ್ 95.83,ರಾಜಲಕ್ಷ್ಮಿ ??ಹಣಮಂತ 94.67,ಸ್ಫೂರ್ತಿ ನಂದಕುಮಾರ ಜಾಧವ 94.17, ಭಾಗ್ಯಮ್ಮ ತಾನಾಜಿ 94.17, ಸಾಗರ ಶಿವರಾಜ ನಂದಗೆ 93.83, ಸೋಹಾ ಅಲಿ ಅಯುಬ ಅಲಿ 93.83, ಆದಿತ್ಯ ಶಿವಕುಮಾರ ಗಾಯಕವಾಡ 93.67, ಸಿದ್ದಾರೂಢ ಶಾಲಿವಾನ 93.67, ಭಾಗ್ಯಜ್ಯೋತಿ ತುಕಾರಾಮ 93.50, ಪ್ರೇಮಾ ಸಂತೋಷ 93.50, ಶಾರದಾ ವಿಶ್ವನಾಥ 93.50, ಶುಭಂ ಸಂತೋಷ 93.50,ದಿವ್ಯ ಸಂತೋಷ 93.17, ಮಮತಾ ಮಹಾದೇವ 93.17, ಅಕ್ಷತಾ ಶಿವಾಜಿ ಪಾಟೀಲ 93, ಲಕ್ಷ್ಮಿ ?? ಶರಣಪ್ಪ 93, ಪಾಯಲ ಮೋಹನ 93, ಆದಿತ್ಯ ಅನಿಲಕುಮಾರ 93, ಭಕ್ತಿ ಪಾಂಡುರಂಗ 93,ಶಂಕರ ಪ್ರಕಾಶ 92.83, ಸೈಯದ್ ಹೀನಾ ಕೌಸರ್ ಸೈಯದ್ ಜಹೀರ್ ಅಲಿ 92.83, ಮೇಘಾಶ್ರೀ ಪ್ರದೀಪ 92.50, ಪಲ್ಲವಿ ಜಗನ್ನಾಥ 92.33, ಪ್ರತೀಕ್ಷಾ ಬಾಬುರಾವ 92.33 ಮುಂತಾದವರು.

ಈ ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಮಸ್ತಾನವಲಿ, ಕಾರ್ಯದರ್ಶಿಗಳಾದ ವೈ. ಮಾಧವರಾವ, ಮುಖ್ಯ ಆಡಳಿತಾಧಿಕಾರಿ ಅಶ್ವಿನ ಭೋಸ್ಲೆ, ಆಡಳಿತಾಧಿಕಾರಿಗಳಾದ ಗಿರೀಶ ಭಂಡಾರಿ, ಮಂಜುನಾಥ ಜೋಳದಾಪಕೆ, ಜ್ಞಾನೇಶ್ವರ ಬಿರಾದಾರ, ಮಂಜುನಾಥ ನೀಲಂಗೆ,ರೆಹಮಾನ್,ಕರೀಮ, ರಾಜಶೇಖರ,ರಂಧೀರ ಜಾಧವ, ಶೇಖರ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ, ವಿದ್ಯಾರ್ಥಿಗಳಿಗೆ ಮತ್ತು ಪಾಲಕರಿಗೆ ಅಭಿನಂದನೆಯನ್ನು ಸಲ್ಲಿಸಿದ್ದಾರೆ. ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮವನ್ನು ಪ್ರೊ .ಕಣರ್ಂ ನಿರೂಪಣೆ ಮಾಡಿ ವಂದಿಸಿದರು.

# ಭಾಲ್ಕಿ ಅಕ್ಕಮಹಾದೇವಿ ಪಿಯು ಕಾಲೇಜಿಗೆ ಉತ್ತಮ ಫಲಿತಾಂಶ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಪಟ್ಟಣದ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಅಕ್ಕಮಹಾದೇವಿ ಕನ್ಯಾ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಅದ್ಭುತ ಸಾಧನೆ ಮಾಡಿ ಎಲ್ಲರ ಗಮನ ಸೆಳೆದಿದ್ದಾರೆ ಎಂದು ಪ್ರಾಚಾರ್ಯ ಧೊಂಡಿಬಾ ಎಸ್. ಭುಜಂಗೆ ಹೇಳುತ್ತಾರೆ.



ಕಲಾ ಮತ್ತು ವಾಣಿಜ್ಯ ವಿಭಾಗದಲ್ಲಿ ವಿದ್ಯಾರ್ಥಿಯರುಗರಿಷ್ಠಅಂಕಗಳೊಂದಿಗೆ ಉತ್ತೀರ್ಣರಾಗಿ ತಾಲೂಕಿಗೆ ಪ್ರಥಮ ಸ್ಥಾನಪಡೆದಿದ್ದು ಅತ್ಯಂತ ಸಂತೋಷದ ಸಂಗತಿ ಎನ್ನುತಾರೆ.

ಕಲಾ ವಿಭಾಗದಲ್ಲಿ ಸ್ವಾತಿ ಸಿದ್ರಾಮ 544 ಅಂಕ ಮತ್ತು ವಾಣಿಜ್ಯ ವಿಭಾಗದಲ್ಲಿ ಭಾಗ್ಯಶ್ರೀ ನರಸಿಂಗ 547 ಅಂಕ ಪಡೆದು ಕಾಲೇಜಿಗೆ ಟಾಪರ್ ಆಗಿದ್ದಾರೆ

ಕಲಾ ವಿಭಾಗದ ಆಗ್ರಶ್ರೇಣಿಯರು: ಅಂಜನಾ ವೆಂಕಟರಾವ (88.66), ಆಶಾರಾಣಿ ಅನೀಲ (85.83,) ಅಶ್ವಮೇರಿ ನಿವರ್ತಿ (85.16 ), ವಾಣಿಜ್ಯ ವಿಭಾಗದ ಆಗ್ರಶ್ರೇಣಿಯರು: ಸಂಗೀತಾ ಸೂರ್ಯಕಾಂತ (88.66) ,ಸೋನಿ ಜಗನ್ನಾಥ (88.00 ), ಭಾಗ್ಯವಂತಿ ವೆಂಕಟ (87.5 ), ಪ್ರೀಯಂಕಾ ದೌಲತ (86.8) , ಅಮುಲ್ಯಾ ರಾಜಕುಮಾರ (86.66), ಭುಮಿಕಾ ಮಾರುತಿ (85.16) .34 ವಿದ್ಯಾರ್ಥಿನಿಯರು ದ್ವಿತೀಯ ದರ್ಜೆಯಲ್ಲಿ ಮತ್ತು 04 ವಿದ್ಯಾರ್ಥಿನಿಯರು ತೃತೀಯ ದರ್ಜೆಯಲ್ಲಿಉತ್ತೀರ್ಣರಾಗಿರುತ್ತಾರೆ.

ಅಕ್ಕಮಹಾದೇವಿ ಕಾಲೇಜಿನ ವಿದ್ಯಾರ್ಥಿನಿಯರು ಪ್ರತಿ ವರ್ಷ ಉತ್ತಮ ಫಲಿತಾಂಶ ನೀಡುವಲ್ಲಿ ಯಶಸ್ವಿಯಾಗುವುದಕ್ಕೆ ಸಂಸ್ಥೆಯ ಅಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹಾಗೂ ಕಾರ್ಯದರ್ಶಿ ಮತ್ತು ಸಂಸದ ಸಾಗರ ಈ. ಖಂಡ್ರೆಯವರ ಮಾರ್ಗದರ್ಶನ ಮತ್ತು ಪ್ರೋತ್ಸಾಹವೇ ಕಾರಣ. ಜೊತೆಗೆ ಸಕಲ ಸಿಬ್ಬಂದಿಯವರ ಕಠೀಣ ಪರಿಶ್ರಮದಿಂದ ಕಾಲೇಜಿನ ಫಲಿತಾಂಶ ಉತ್ತಮವಾಗಿದೆ ಎಂದು ಎನ್ನುತ್ತಾರೆ ಎಸ್.ವ್ಹಿ. ಸಂಸ್ಥೆಯ ಆಡಳಿತಾಧಿಕಾರಿ ಪ್ರೊ. ಅಂಕುಶ ಡೋಲೆ.

ವಿದ್ಯಾರ್ಥಿನಿಯರ ಉತ್ತಮ ಸಾಧನೆಗೆ ಸಂಸ್ಥೆಯ ಅಧ್ಯಕ್ಷರು ಆದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ, ಕಾರ್ಯದರ್ಶಿಯೂ ಆದ ಸಂಸದರಾದ ಸಾಗರ ಈ. ಖಂಡ್ರೆ, ಆಡಳಿತಾಧಿಕಾರಿ ಅಂಕುಶ ಢೋಲೆ ಮತ್ತು ಕಾಲೇಜಿನ ಪ್ರಾಂಶುಪಾಲ ಧೊಂಡಿಬಾ ಎಸ್. ಭುಜಂಗೆ ಹಾಗು ಸಕಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿವರ್ಗದವರು ಹರ್ಷ ವ್ಯಕ್ತಪಡಿಸಿ, ಅಭಿನಂದಿಸಿದ್ದಾರೆ.

# ಅಪರಿಚಿತ ಲಾರಿ ಡಿಕ್ಕಿ: ಸ್ಥಳದಲ್ಲಿಯೇ ನಾಯಿ ಸಾವು





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ವಿಜಯಕುಮಾರ ರೆಡ್ಡಿ ಉದಗೀರೆ ರವರಿಗೆ ಸೇರಿದ ಸಾಕು ಪ್ರಾಣಿ ನಾಯಿವೊಂದು ಬೈಪಾಸ್ ರಸ್ತೆ ದಾಟುವ ಸಂದರ್ಭದಲ್ಲಿ ಅಪರಿಚಿತ ಲಾರಿ ಡಿಕ್ಕಿಹೊಡೆದ ಪರಿಣಾಮ ನಾಯಿ ಸ್ಥಳದಲ್ಲಿಯೇ ಸಾವನ್ನೊಪ್ಪಿದ ಘಟನೆ ಗುರುವಾರ ಬೆಳಿಗ್ಗೆ ಜರುಗಿದೆ. ವಿಷಯ ತಿಳಿಯುತ್ತಿದಂತೆ ಸ್ಥಳಕ್ಕೆ ಶಿವಪೂರ ಬಡಾವಣೆಯ ನಿವಾಸಿಗಳು ಆಗಮಿಸಿ ರಸ್ತೆಯ ಮೇಲೆ ಸಾವನ್ನಪ್ಪಿದ ನಾಯಿಯನ್ನು ವಿಧಿವಿಧಾನಗಳೊಂದಿಗೆ ಅಂತ್ಯ ಸಂಸ್ಕಾರ ಮಾಡಿ ಮಾನವೀಯತೆ ಮೇರೆದರು. ಈ ಸಂದರ್ಭದಲ್ಲಿ ಗೋವಿಂದ ರಾಯಚೂರಕರ್, ಭೀಮಶಾ, ನಾರಾಯಣ-ರೆಡ್ಡಿ ಮುನ್ನೂರ್, ಶಾಂತು ಗುಜರಾತ್, ಮಹೇಶರೆಡ್ಡಿ ಗರಲ್‌ಪಟ್ಟಿ, ಶ್ರೀನಿವಾಸ್ ರಾಯ ಚೂರಕರ್, ಪ್ರಭುರೆಡ್ಡಿ ಗರ್ಲಪಟಿ, ದಶರಥರೆಡ್ಡಿ ಮುನ್ನೂರ್, ಗೌತಮ್ಮ ಗುಜರಾತ್, ಜಗಮೋಹನರೆಡ್ಡಿ, ಅನೀಲನರಸಿಂಗ್‌ರೆಡ್ಡಿ ಮುನ್ನೂರ್, ವಿನಾಯಕರೆಡ್ಡಿ ಮುನ್ನೂರ, ವಿಜಯಕುಮಾರ ವಾಡೇಕರ್ ಇತರರು ಇದ್ದರು.

## ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಯಲ್ಲಿ ಕೊಪ್ಪಳ ಜಿಲ್ಲೆಗೆ 2 & 3ನೇ ಸ್ಥಾನ ಪಡೆದ ರೈತರ ಮಕ್ಕಳು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಯಲ್ಲಿ ಜಿಲ್ಲೆಗೆ 2 & 3ನೇ ಸ್ಥಾನ ಪಡೆದಕೊಂಡ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ.ದೇವರಾಜ ಅರಸು ಮೆಟ್ರಿಕ ನಂತರ ಬಾಲಕಿಯರ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ತಮ್ಮ ಕಛೇರಿಯಲ್ಲಿ ಬುಧವಾರ ಸನ್ಮಾನಿಸಿದರು.



ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕುಷ್ಟಗಿ ತಾಲೂಕಿನ ತಾವರಗೇರಾ ಡಿ.ದೇವರಾಜ ಅರಸು ಮೆಟ್ರಿಕ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿನಿ ಮರಿದೇವಿ 2024-25ನೇ ಸಾಲಿನ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಯ ಕಲಾ ವಿಭಾಗದಲ್ಲಿ 600 ಕ್ಕೆ 577 (ಶೇ.96.17) ಅಂಕ ಪಡೆಯುವ ಮೂಲಕ ಕೊಪ್ಪಳ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದು ಕೊಂಡಿದ್ದಾಳೆ ಮತ್ತು ಕುಕನೂರಿನ ಡಿ.ದೇವರಾಜ ಅರಸು ಮೆಟ್ರಿಕ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿನಿ ದೀಪಾ ಕಲಾ ವಿಭಾಗದಲ್ಲಿ 600 ಕ್ಕೆ 576 (ಶೇ.96) ಅಂಕ ಪಡೆಯುವ ಮೂಲಕ ಜಿಲ್ಲೆಗೆ ತೃತೀಯ ಸ್ಥಾನ ಪಡೆದು ಕೊಂಡಿದ್ದಾರೆ.

ಈ ಇಬ್ಬರು ವಿದ್ಯಾರ್ಥಿಗಳು ಬಡ ಕುಟುಂಬದಿಂದ ಬಂದಿದ್ದು, ಇವರ ಪಾಲಕರು ಕೃಷಿ ಮಾಡುತ್ತಿದ್ದಾರೆ. ಈ ವಿದ್ಯಾರ್ಥಿನಿಯರ ಮುಂದಿನ ಜೀವನ ಉಜ್ವಲವಾಗಲಿ ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಶುಭ ಹಾರೈಸಿ ಅಭಿನಂದಿಸಿದ್ದಾರೆ.

ಈ ಸಂದರ್ಭದಲ್ಲಿ ಕೊಪ್ಪಳ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ನಾಗಮಣಿ, ಯಲಬುರ್ಗಾ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಶಿವಶಂಕರ ಕರಡಕಲ್, ಕೊಪ್ಪಳ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯವಸ್ಥಾಪಕ ಬಸವರಾಜ ನೆಲಾಗಣಿ, ವಸತಿ ನಿಲಯ ಮೇಲ್ವಿಚಾರಕರು ಸೇರಿದಂತೆ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

## ನಿರ್ಣಾ; ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕೀರ್ತಿ ಹೆಚ್ಚಿಸಿದ ಸಾರಿಕ ಮತ್ತು ರಾಧಿಕಾ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ತಾಲೂಕಿನ ನಿರ್ಣಾ ಗ್ರಾಮದ ಸರ್ಕಾರಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ

ವಿದ್ಯಾರ್ಥಿನಿಯರು ಅಗ್ರ ಶ್ರೇಣಿಯಲ್ಲಿ 6, ಪ್ರಥಮ ಶ್ರೇಣಿಯಲ್ಲಿ 28, ದ್ವಿತೀಯ ಶ್ರೇಣಿಯಲ್ಲಿ 7, ತೃತೀಯ ಶ್ರೇಣಿಯಲ್ಲಿ4, ಒಟ್ಟು 70.31% ವಿದ್ಯಾರ್ಥಿಗಳು ಉತ್ತೀರ್ಣಗೊಂಡಿದ್ದಾರೆ. ಸಾರಿಕ ತಂದೆ ಕಂಟೇಪ್ಪ (547) 91.16% ಅಂಕ ಪಡೆದು-ಕೊಂಡು ಕಾಲೇಜಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾಳೆ. ರಾಧಿಕಾ ತಂದೆ ಅಶೋಕ (543) 90.50% ದ್ವಿತೀಯ ಸ್ಥಾನ ಪಡೆದುಕೊಂಡರೆ ವಿಜಯಲಕ್ಷ್ಮಿ (537) ಲಕ್ಷ್ಮಿ (525) ಐಶ್ವರ್ಯ (518) ಸರಸ್ವತಿ (512) ಅಂಕಗಳು ಪಡೆದುಕೊಂಡು ಅಗ್ರಶ್ರೇಣಿಯಲ್ಲಿ ಉತ್ತೀರ್ಣರಾಗಿ ಕಾಲೇಜು ಹೆಸರು ಹೆಚ್ಚಿಸಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲ ಶಿವರಾಜ್ ಬಿರಾದಾರ್ ತಿಳಿಸಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಪ್ರಾಚಾರ್ಯ ಶಿವರಾಜ್ ಬಿರಾದಾರ್, ಉಪನ್ಯಾಸಕ ಓಂಕಾರ ರೆಡ್ಡಿ ಸಲಗರ್, ಕಾಲೇಜ ಅಭಿವೃದ್ಧಿ ಸಮಿತಿಯ ಸದಸ್ಯರಾದ ಶಿವಶರಣಪ್ಪ ಪಾಟೀಲ್, ಗ್ರಾಮದ ಮುಖಂಡರಾದ ಸುಭಾಷ್ ಖಾಶೆಂಪುರ್, ರಾಜಶೇಖರ ಬನ್ನಳ್ಳಿ, ವೆಂಕಟ ರೆಡ್ಡಿ ಬನ್ನಳ್ಳಿ ಸೇರಿದಂತೆ ಗ್ರಾಮದ ಗಣ್ಯರು ಹಾಗು ಶಿಕ್ಷಣ ಪ್ರೇಮಿಗಳು, ಕಾಲೇಜಿನ ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಅವರ ಮುಂದಿನ ಭವಿಷ್ಯ ಉಜ್ವಲವಾಗಲೆಂದು ಶುಭ ಹಾರೈಸಿದರು.

## ವಚನಗಳ ತತ್ವ ಸಿದ್ಧಾಂತ ಕಾಲಾತೀತ: ಹುಲಸೂರ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಏ 10- ಜಗತ್ತಿನ ಎಲ್ಲರೂ ಕಾಲದ ಕಟ್ಟಳೆಯ ಕಬಂಧ ಬಾಹುಗಳ ಬಂಧನಕ್ಕೆ ಒಳಗಾಗಿದ್ದಾರೆ. ಆದರೆ, ಶರಣರ ವಚನಗಳ ತತ್ವ ಸಿದ್ಧಾಂತಗಳು ಕಾಲಾತೀತವಾಗಿವೆ ಎಂದು ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಶಿವಾನಂದ ಮಹಾಸ್ವಾಮಿಗಳು ಹೇಳಿದರು.

ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಶ್ರೀ ಬಸವೇಶ್ವರ ಜಾತ್ರಾ ಅಮೃತ ಮಹೋತ್ಸವ ಪ್ರಯುಕ್ತ ನಗರದ ಅಕ್ಕಮಹಾದೇವಿ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ಅಮೃತಾನಂದ ಮಹಾಸ್ವಾಮಿಗಳು ಆಧ್ಯಾತ್ಮಿಕ ಪ್ರವಚನ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಬಸವಾದಿ ಶರಣರ ವಿಚಾರಗಳು ಎಲ್ಲಾ ಕಾಲಕ್ಕೂ ಪ್ರಸ್ತುತವಾಗಿವೆ ಎಂದರು.

ಜ್ಞಾನವೇ ಮನುಷ್ಯನ ನಿಜವಾದ ಆಸ್ತಿ. ಉಳಿದ ಯಾವ ಸಂಪತ್ತು ಶಾಶ್ವತವಲ್ಲ. ಜ್ಞಾನದ ಜೊತೆಗೆ ಕಾಲ ಪ್ರಜ್ಞೆ ಮುಖ್ಯ. ಕಲ್ಮಶವಾದ ಮನಸ್ಸಿನ ಶುದ್ಧತೆಗೆ ಶರಣರ ಚಿಂತನೆಗಳು ಅಗತ್ಯ. ಅಮೃತಾನಂದ ಮಹಾಸ್ವಾಮಿಗಳ ಪ್ರವಚನದ ಮೂಲಕ ದಿವ್ಯಜ್ಞಾನ ಅರಿಯಬೇಕು ಎಂದರು.

ನೇತ್ರತ್ವ ವಹಿಸಿದ್ದ ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ಸ್ವಾಮಿಗಳು ಮಾತನಾಡಿ, ಯಾವುದೇ ಭೇದ ಭಾವಗಳಿಲ್ಲದೆ ಮಹಿಳೆಯರಿಗೆ ಸಮಾಜ ಎಲ್ಲರಿಗೆ ಸಮಾನತೆ ಸ್ವಾತಂತ್ರ್ಯ ನೀಡಿದ ಬಸವಾದಿ ಶರಣರ ತತ್ವ ಚಿಂತನೆ ತಿಳಿದುಕೊಳ್ಳುವ ಮೂಲಕ ಹೊಸ ವಿಚಾರಗಳನ್ನು ಕಂಡುಕೊಳ್ಳಬೇಕು ಎಂದರು.

ಕಲಬುರ್ಗಿಯ ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಡಾ. ಮಹೇಶ ಪಾಟೀಲ ಉದ್ಘಾಟಿಸಿ ಮಾತನಾಡಿ ಶರಣರು ದಯವಿರುವುದನ್ನೇ ಧರ್ಮ ಎಂಬ ಸಿದ್ಧಾಂತವನ್ನು ಪ್ರತಿಪಾದಿಸಿದ್ದಾರೆ. ಹನ್ನೆರಡನೇ ಶತಮಾನದಲ್ಲಿ ಶರಣರು ಮಾನವೀಯತೆಯನ್ನೇ ಧರ್ಮದ ಬಹುದೊಡ್ಡ ಮೌಲ್ಯವಾಗಿಸಿದ್ದರು. ಮಾನವೀಯತೆ ಮರೆತರೆ ಸಮಾಜಕ್ಕೆ ಗಂಡಾಂತರ ಎದುರಾಗಲಿದೆ. ಆಧ್ಯಾತ್ಮಿಕ ಪ್ರವಚನಗಳಿಂದ ಮೌಲ್ಯಗಳನ್ನು ಬಿತ್ತುವ ಕೆಲಸ ನಡೆಯುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಮಾತನಾಡಿ, ನಗರದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಬಸವೇಶ್ವರ ಜಾತ್ರಾ ಅಮೃತ ಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ಅಮೃತಾನಂದ ಮಹಾಸ್ವಾಮಿಗಳು ಆಧ್ಯಾತ್ಮಿಕ ಪ್ರವಚನಕ್ಕೆ ಬಸವಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರಲು ಕೋರುತ್ತೇನೆ. ಈ ವರ್ಷ ಜಾತ್ರೆ ಅತ್ಯಂತ ವಿಜೃಂಭಣೆಯಿಂದ ಮಾಡಲು ನಿರ್ಧರಿಸಲಾಗಿದೆ. ಎಲ್ಲರೂ ಸಹಕರಿಸಲು ಕೋರುತ್ತೇನೆ ಎಂದರು.

ನಿವೃತ್ತನ್ಯಾಯಾಧೀಶ ಸುಭಾಷಚಂದ್ರ ನಾಗರಾಳೆ ಮಾತನಾಡಿದರು. ಈ ಸಂದರ್ಭದಲ್ಲಿ

ಬಾಲಗಾವನ ಅಮೃತಾನಂದ ಮಹಾಸ್ವಾಮಿಗಳು,

ಬಿಡಿವಿಸಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ಶ್ರೀಕಾಂತ ಬಡದಾಳೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಮಲ್ಲಯ್ಯ ಸ್ವಾಮಿ ಹಿರೇಮಠ, ಕಾಶಪ್ಪ ಸಕ್ಕರಭಾವಿ, ಜಗನ್ನಾಥ ಖೂಬಾ, ಭದ್ರಿನಾಥ ಪಾಟೀಲ, ಅನಿಲಕುಮಾರ ರಗಟೆ, ಬಿಡಿವಿಸಿ ಉಪಾಧ್ಯಕ್ಷ ಡಾ. ಜಿ.ಎಸ್. ಭುರಾಳೆ, ಗದಿಗೆಪ್ಪ ಹಲಶೆಟ್ಟೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಿಡಿಪಿಸಿ ಸಹಕಾರ್ಯದರ್ಶಿ ವಿವೇಕಾನಂದ ಹೊದಲೂರೆ ಸ್ವಾಗತಿಸಿದರು. ಜ್ಯೋತಿ ತುಗಾವೆ ನಿರೂಪಿಸಿ ವಂದಿಸಿದರು.



ಬಸವಕಲ್ಯಾಣ :- ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು (ರಿ) ಕೇಂದ್ರ ಸಮಿತಿ ಹುಬ್ಬಳ್ಳಿ ಹಾಗೂ ಜಿಲ್ಲಾ ಘಟಕ. ಬೀದರ. ಸಹಕಾರ :ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ತಿಪುರಾಂತ ಸಹಯೋಗ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು. ಶ್ರೀ ಘನಲಿಂಗ ರುದ್ರಮುನಿ ಜಾತ್ರಾ ಮಹೋತ್ಸವ. ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದ ರಾಜ್ಯ ಮಟ್ಟದ 13 ನೇಯ ಕರ್ನಾಟಕ ಚುಟುಕು ಸಾಹಿತ್ಯ ಸಮ್ಮೇಳನ - 2025 ಗ್ರಂಥ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಜಯರಾಜ ಕಮ್ಮಾ ಹಣಮಂತವಾಡಿ (ಆರ್). ಇವರನ್ನು ಸಮ್ಮೇಳನದ ಸರ್ವಾಧ್ಯಕ್ಷರಾದ ಶ್ರೀ ನಿವಾಸ ಶರಡಗಿ ಪೂಜ್ಯ ಶ್ರೀ ಷ. ಬ್ರ. ಡಾ. ರೇವಣಸಿದ್ದ ಶಿವಾಚಾರ್ಯರು. ಸನ್ಮಾನಿಸಿದರು. ಖೇಳಗಿ ಪೂಜ್ಯರಾದ ಮ.ನಿ.ಪ್ರ ಶಿವಲಿಂಗೇಶ್ವರ ಮಹಾಸ್ವಾಮಿಜಿ. ಜಿಲ್ಲಾ ಅಧ್ಯಕ್ಷರಾದ ಸಂಗಮೇಶ ಜವಾದಿ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ )

# ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 10 ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು (ರಿ) ಕೇಂದ್ರ ಸಮಿತಿ ಹುಬ್ಬಳ್ಳಿ ಹಾಗೂ ಜಿಲ್ಲಾ ಘಟಕ. ಬೀದರ. ಸಹಕಾರ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ತಿಪುರಾಂತ ಸಹಯೋಗ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು. ಶ್ರೀ ಘನಲಿಂಗ ರುದ್ರಮುನಿ ಜಾತ್ರಾ ಮಹೋತ್ಸವ. ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದ ರಾಜ್ಯ ಮಟ್ಟದ 13 ನೇಯ ಕರ್ನಾಟಕ ಚುಟುಕು ಸಾಹಿತ್ಯ ಸಮ್ಮೇಳನ - 2025 ಗ್ರಂಥ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನವನ್ನು ಸಮಾರಂಭದಲ್ಲಿ ಪ್ರೊ. ಸೂರ್ಯಕಾಂತ ಶೀಲವಂತ. ಭ್ಯಾಂಕಿನ ನಿವೃತ್ತ ವ್ಯವಸ್ಥಾಪಕ ಬಸವರಾಜ ಸ್ವಾಮಿ. ದೇವೇಂದ್ರ ಕೊರಾಳೆ. ತಾಲ್ಲೂಕ ರಡ್ಡಿ ಸಮಾಜ ಅಧ್ಯಕ್ಷರಾದ ವಿಜಯಕುಮಾರ ರಡ್ಡಿ. ತಿಪುರಾಂತಿನ ವಿಜಯಕುಮಾರ ಮುಚಳಂಬೆ. ಇವರನ್ನು ನೀಡಿ ಸನ್ಮಾನಿಸಲಾಯಿತು. ಸಮ್ಮೇಳನಾಧ್ಯಕ್ಷರಾದ ಶ್ರೀ ನಿವಾಸ ಸರಡಗಿ ಪೂಜ್ಯ ಶ್ರೀ ಷ. ಬ್ರ. ಡಾ ರೇವಣಸಿದ್ದ ಶಿವಾಚಾರ್ಯರ ತಿಪುರಾಂತಿನ ಗವಿಮಠದ ಪೂಜ್ಯ ಶ್ರೀ ಡಾ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು. ಕಚುಸಾಪ ರಾಜ್ಯ ಸಮ್ಮೇಳನ ಸಂಚಾಲಕರಾದ ಕೃಷ್ಣ ಮೂರ್ತಿ ಕುಲಕರ್ಣಿ. ಅಫ್ಜಲ್ ಪುರದ ಪೂಜ್ಯ ಶ್ರೀ ಷ. ಬ್ರ. ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು. ಸಾಹಿತಿ ಡಾ. ನೀಲಾಂಬಿಕಾ ಪೋಲಿಸ್ ಪಾಟೀಲ. ಜಿಲ್ಲಾ ಅಧ್ಯಕ್ಷರಾದ ಸಂಗಮೇಶ ಜವಾದಿ. ಅರ್ಜುನ ಕನಕ. ವಂದನಾ ರಮೇಶ. ವಿಮಲಾಬಾಯಿ ಮಾಣಿಕಪ್ಪ ಬಿರಾದಾರ್. ರಾಕೇಶ್ ಪುರವಂತ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮಹಾವೀರರ ಬೋಧನೆಗಳು ಸದಾ ಪ್ರಸ್ತುತ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಏ.10- ಅಹಿಂಸೆಯೇ ಪರಮೋಧರ್ಮ ಎಂದು ವಿಶ್ವಕ್ಕೆ ಭಗವಾನ್ ಮಹಾವೀರರ ಬೋಧನೆಗಳು ಸದಾಕಾಲ ಪ್ರಸ್ತುತವಾಗಿವೆ ಎಂದು ಸೋಮು ಕುರಿಗಾರ ಹೇಳಿದರು. ತಾಲೂಕಿನ ಶಿರೂರ ಪಟ್ಟಣ ಪಂಚಾಯಿತಿಯಲ್ಲಿ ಗುರುವಾರ ಭಗವಾನ್ ಮಹಾವೀರರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ



ಮಾತನಾಡಿದ ಅವರು, ಮಹಾವೀರರು ತೋರಿದ ದಾರಿ, ನೀಡಿದ ಜ್ಞಾನದ ಬೆಳಕು ಮನುಕುಲಕ್ಕೆ ಒಳಿತನ್ನು ಸಾರಿವೆ ಎಂದರು. ಕುಮಾರಗೌಡ, ಎಚ್. ಐ.ಮ್ಯಾಗೇರಿ, ಈರಪ್ಪ ಗಿರಿಜಾ, ಅಣಯ್ಯ ಎಮ್ಮಿಮಠ, ರಂಗಪ್ಪ ಅಂಗಡಿ, ವಾದಿರಾಜ ಕಡಿವಾಲ ಸೇರಿ ಪಪಂ ಸಿಬ್ಬಂದಿ ಇದ್ದರು.

# ಕೆಯುಡಬ್ಲ್ಯುಜೆ ರಾಜ್ಯ ಘಟಕದಿಂದ ಐಡಿ ಕಾರ್ಡ್ ಹಸ್ತಾಂತರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.10:ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದ ವತಿಯಿಂದ ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ2025–26ನೇಸಾಲಿನ ಸಂಘದಗುರುತಿನಚೀಟಿಗಳನ್ನು ಹಸ್ತಾಂತರಿಸಲಾಯಿತು. ರಾಜ್ಯ ರಾಜ್ಯಧಾನಿ ಬೆಂಗಳೂರಿನ ಕೆಂಪೇಗೌಡ ರಸ್ತೆಯಲ್ಲಿರುವ ಕಂದಾಯ ಭವನದ ಮೂರನೇ ಮಹಡಿಯಲ್ಲಿರುವ ಕರ್ನಾಟಕ ಕಾರ್ಯನಿರತಪತ್ರಕರ್ತರಸಂಘದ ರಾಜ್ಯ ಕಾರ್ಯಾಲಯದಲ್ಲಿ ಬುಧವಾರಸಾಯಂಕಾಲಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ ಲೋಕೇಶ ಅವರು ಬೀದರ್ ಜಿಲ್ಲಾಕಾರ್ಯನಿರತಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿಯವರಿಗೆ ಗುರುತಿನ ಚೀಟಿ ಹಸ್ತಾಂತರಿಸಿದರು.

ನಂತರ ಮಾತನಾಡಿರುವ ರಾಜ್ಯಾಧ್ಯಕ್ಷರು, 1932 ರಲ್ಲಿ ಡಿ.ವಿ ಗುಂಡಪ್ಪನವರು ಹುಟ್ಟು ಹಾಕಿರುವ ಸುಮಾರು ರಾಜ್ಯದಲ್ಲಿ ಒಂಬತ್ತು ಸಾವಿರಕ್ಕೂ ಅಧಿಕ ಪತ್ರಕರ್ತರನ್ನು ಹೊಂದಿರುವ ಬೃಹತ್ ಪತ್ರಕರ್ತರ ಸಂಸ್ಥೆ ಇದಾಗಿದ್ದು,ಪ್ರತಿ ವರ್ಷ ಸಂಘದ ಸದಸ್ಯರಿಗೆ ಗುರುತಿನ ಚೀಟಿ ನೀಡುವ ಮೂಲಕ ಅವರನ್ನು ಗೌರವಯುತವಾಗಿಗುರುತಿಸುವ ಕಾರ್ಯ ಮಾಡಲಾಗುತ್ತಿದೆ. ಪತ್ರಕರ್ತರಿಗೆ ಬಸ್ ಪಾಸ್ ವ್ಯವಸ್ಥೆ, ಸರ್ಕಾರಿ ನೌಕರರ ಮಾದರಿಯಲ್ಲಿ ಆರೋಗ್ಯ ಸಂಜೀವಿನಿ ಯೋಜನೆ,ನಿವೃತ್ತ ಪತ್ರಕರ್ತರಿಗೆ 15 ಸಾವಿರ ರೂಪಾಯಿ ವರೆಗೆ ಮಾಶಾಸನ ಇತ್ಯಾದಿ ಯೋಜನೆಗಳು ಸರ್ಕಾರ ಜಾರಿಗೊಳಿಸಲು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮೂರು ದಶಕಗಳಿಗೂಅಧಿಕಹೋರಾಟದ ಪ್ರತಿಫಲವಾಗಿದ್ದು ನಾವು ಕೊಡುವ ಈ ಐಡಿ ಕಾರ್ಡ್ಗಳನ್ನು ತಮ್ಮ ವೃತ್ತಿ ಧರ್ಮಕ್ಕೆ ಮಾತ್ರ ಬಳಿಸುವ ಮೂಲಕ ಸಂಘದ ಮರ್ಯಾದೆಕಾಪಾಡಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬೀದರ್ ಜಿಲ್ಲಾಕಾರ್ಯನಿರತಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಈ ವರ್ಷದ ಸಂಘದ ಐಡಿ ಕಾರ್ಡ್ ಗಳು ಸ್ವೀಕರಿಸಿ ಮಾತನಾಡಿ, ತಾನು ಪ್ರಧಾನ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿಕೊಂಡ ಬಳಿಕ ಇದು ನಾಲ್ಕನೇ ಬಾರಿ ಐಡಿ ಕಾರ್ಡ್ ಗಳನ್ನು ಮಾಡಲಾಗಿದೆ. ವಿಶೇಷವಾಗಿ ಗ್ರಾಮೀಣ ಭಾಗದ ಉದಯೋನ್ಮುಖ ಬರಹಗಾರರನ್ನು, ನಮ್ಮ ಗಡಿ ಭಾಗದ ಅನ್ಯ ಭಾಷಿಕ ಪತ್ರಕರ್ತರು, ರಾಜ್ಯ ಮಟ್ಟದ, ಪ್ರಾದೇಶಿಕ, ಜಿಲ್ಲಾ ಮಟ್ಟದ ಪತ್ರಕರ್ತರು, ವಾರ ಪತ್ರಿಕೆ ಹಾಗೂ ಪಾಕ್ಷಿಕ ಪತ್ರಿಕೆ–ಯ ಪ್ರತಿನಿಧಿಗಳಿಗೂ ಐಡಿ ಕಾರ್ಡ್ ವಿತರಿಸಿ ಅವರ ವೃತ್ತಿ ಧರ್ಮಕ್ಕೆ ಗೌರವಿಸುವ ಕಾರ್ಯ ಮಾಡಲಾಗಿದೆ ಎಂದರು. ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ ಸಿ ಲೋಕೇಶ ಜೊತೆಗಿದ್ದರು.



ಗುರುಮಿಠಕಲ್: ತಾಲೂಕಿನ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ, ಭಗವಾನ ಮಹಾವಿರ ರವರ ಜಯಂತೋತ್ಸವ ಕಾರ್ಯಕ್ರಮವನ್ನು ಆಚರಣೆಮಾಡಲಾಯಿತು ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಉಪಸ್ಥಿತರಿದ್ದರು

# ಕ್ರೀಡಾಕೂಟ: ಕಾರಾಗೃಹ ಮುಖ್ಯ ವೀಕ್ಷಕಿ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 10 : ನಗರದಲ್ಲಿ ಈಚೆಗೆ ನಡೆದ ರಾಜ್ಯ ಸರ್ಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟದ ವೈಯಕ್ತಿಕ ಹಾಗೂ ಗುಂಪು ಸ್ಪರ್ಧೆಗಳಲ್ಲಿ ಇಲ್ಲಿಯ ಜಿಲ್ಲಾ ಕಾರಾಗೃಹದ ಮುಖ್ಯ ವೀಕ್ಷಕಿ ಮಮಿತಾಬಾಯಿ ಸಾಮ್ರಾಟ್ ಉತ್ತಮ ಸಾಧನೆ ತೋರಿದ್ದಾರೆ.

ವೈಯಕ್ತಿಕ ವಿಭಾಗದ 200 ಮೀ. ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ರಾಜ್ಯಮಟ್ಟಕ್ಕೆ ಆಯ್ಕೆಯಾದ 4*400 ಮೀಟರ್ ರಿಲೇ (ಪ್ರಥಮ), ವಾಲಿಬಾಲ್ (ಪ್ರಥಮ) ಹಾಗೂ ಕಬಡ್ಡಿ (ದ್ವಿತೀಯ)ತಂಡಗಳ ಸದಸ್ಯರೂ ಆಗಿದ್ದಾರೆ. ಮವಿತಾಬಾಯಿ ಅವರ ಸಾಧನೆಗೆ ಅನೇಕರು ಸಂತಸ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿದ್ದಾರೆ.

# ಗುರು ನಾನಕ ಪಿಯು ಕಾಲೇಜ್‌ಗೆ ಉತ್ತಮ ಫಲಿತಾಂಶ








ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 10 : ಗುರು ನಾನಕ ಸ್ವತಂತ್ರ ಪದವಿ ಪೂರ್ವ ಕಾಲೇಜ್ 2024–25ನೇ ಸಾಲಿನ ದ್ವಿತೀಯ ಪಿಯುಸಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗದಲ್ಲಿ ಉತ್ತಮ ಫಲಿತಾಂಶ ಪಡೆದು–ಕೊಂಡಿದೆ. ಕಾಲೇಜಿಗೆ 28 ವಿದ್ಯಾರ್ಥಿಗಳು ಅಗ್ರಶ್ರೇಣಿ, 186 ಪ್ರಥಮ ದರ್ಜೆಯಲ್ಲಿ ತೇರ್ಗಡೆ ಹೊಂದಿರುತ್ತಾರೆ.

ಸುಪ್ರಿಯಾ 94.33%, ಸ್ವಾತಿ 92.50%, ಭಾಗ್ಯವಂತಿ 92.17%, ಆಕಾಶ್ ಸಹಾನಿ 91.33%, ಅಭೀಲಾಶ್ ಜೆ. 90.5%, ಸುನೀತಾ 90.5%, ವೆಂಕಟೇಶ್ 90%, ಐಶ್ವರ್ಯಾ 89.66%, ಭವಾನಿ 89%, ಅನ್ಮೋಲ್ ಹೆಚ್. 88.5%, ಐಶ್ವರ್ಯಾ 88%, ಭುನೇಶ್ವರಿ 87.83%, ಗಾಯತ್ರಿ 87.33%, ಪದ್ಮಿನಿ ರಾಣಿ 87.33%, ಬಿ.ಮಧುಸುಧನ್ 87%, ರೋಹಿಣಿ 87%, ತನ್ಮಯ್ ಕುಲಕರ್ಣಿ 86.83%, ವೀರೇಶ್ 86.83%, ಪ್ರಜ್ವಲ್ 86.5%, ಅಂಜಲಿ 86%, ಸಾಯಿಕುಮಾರ 85.67%, ಶಹಬಾಜ್ ಸುಲ್ತಾನ್ 85.67%, ಐಶ್ವರ್ಯಾ 85.33%, ಶಿವಾನಂದ 85.33%, ಸೈಯದ್ ಜಿಹಾನ್ ಅಲಿ 85.17%, ಐಶ್ವರ್ಯಾ 86%, ಭವಾನಿ 85.5% ಮತ್ತು ಆದಿಶೇಶಿಕಾಂತ 85% ಪಡೆದು ಉತ್ತಮ ಸಾಧನೆ ತೋರಿದ್ದಾರೆ. ಈ ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷ ಡಾ॥ ಎಸ್. ಬಲಬೀರ ಸಿಂಗ್ ಉಪಾಧ್ಯಕ್ಷೆ ಡಾ॥



ರೇಷ್ಮಾ ಕೌರ್, ಅಕಾಡೆಮಿಕ್ ಡೀನರಾದ ಶ್ರೀಮತಿ ಜಸ್ಮಿನೀತ್ ಕೌರ್, ಪ್ರಾಂಶುಪಾಲರು, ಉಪನ್ಯಾಸಕ ವೃಂದದವರು ಹಾಗೂ ಸಿಬ್ಬಂದಿ ವರ್ಗದವರು ಮೆಚ್ಚುಗೆ ವ್ಯಕ್ತಪಡಿಸಿ ಅತ್ಯುತ್ತಮ ಸಾಧನೆ ಮಾಡುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಕ್ಕಾಗಿ ಹೃದಯಪೂರ್ವಕವಾಗಿ ಅಭಿನಂದಿಸಿದ್ದಾರೆ.

# ಅಕ್ಕ ಮಹಾದೇವಿ ಕಾಲೇಜು: ಸಂಭ್ರಮದ ವಾರ್ಷಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 10 : ನಗರದ ಅಕ್ಕ ಮಹಾದೇವಿ ಪದವಿ ಕಾಲೇಜಿನಲ್ಲಿ ಬುಧವಾರ ಸಂಭ್ರಮದಿಂದ ವಾರ್ಷಿಕೋತ್ಸವ ನಡೆಯಿತು.

ವಾರ್ಷಿಕೋತ್ಸವವು ವಿದ್ಯಾರ್ಥಿನಿಯರ ಪ್ರತಿಭೆ ಅನಾವರಣಕ್ಕೆ ವೇದಿಕೆ ಒದಗಿಸಿತು. ವಿದ್ಯಾರ್ಥಿನಿಯರ ನೃತ್ಯ, ಗಾಯನ, ಹಾಸ್ಯ, ನಾಟಕ ಪ್ರದರ್ಶನ ಮೊದಲಾದವು ಸಮಾರಂಭಕ್ಕೆ ವಿಶೇಷ ಮೆರುಗು ನೀಡಿದವು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿನಿಯರಿಗೆ ಬಹುಮಾನ ವಿತರಿಸಿ ಪ್ರೋತ್ಸಾಹಿಸಲಾಯಿತು.

ಗುರುವಿನ ಮೇಲೆ ಶ್ರದ್ಧೆ ಇರಲಿ:

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಕಾಲೇಜು ಪ್ರಾಚಾರ್ಯೆ ಡಾ. ರಂಜನಾ ಪಾಟೀಲ ಅವರು, ವಿದ್ಯಾರ್ಥಿಗಳು ಗುರುವಿನ ಮೇಲೆ ಶ್ರದ್ಧೆ ಇಡಬೇಕು ಎಂದು ಹೇಳಿದರು.

ಗುರುವಿನ ಮಾರ್ಗದರ್ಶನದಿಂದ ಭವಿಷ್ಯ ಉಜ್ವಲಗೊಳ್ಳುತ್ತದೆ. ಆದರ್ಶ ಬದುಕು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಉದ್ಘಾಟನೆ ನೆರವೇರಿಸಿದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಚಾರ್ಯ ಡಾ. ಮನೋಜಕುಮಾರ ಮಾತನಾಡಿ, ವಿದ್ಯಾರ್ಥಿಗಳು ದೊಡ್ಡ ಕನಸು ಕಾಣಬೇಕು ಎಂದು ಹೇಳಿದರು.

ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಗಂಗಾಂಬಿಕೆ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಅಕ್ಕ ಮಹಾದೇವಿ ಕಾಲೇಜು ಜಿಲ್ಲೆಯಲ್ಲಿ ಮಹಿಳಾ ಶಿಕ್ಷಣಕ್ಕೆ ಉತ್ತೇಜನ ನೀಡುತ್ತಿದೆ ಎಂದು ತಿಳಿಸಿದರು.

ಶಾಂತಿವರ್ಧಕ ಬಿ.ಎಡ್. ಕಾಲೇಜು ಪ್ರಾಚಾರ್ಯ ಸಂತೋಷಕುಮಾರ, ಅಕ್ಕ ಮಹಾದೇವಿ ಕನ್ಯಾ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಸತೀಶಕುಮಾರ ಉಪಸ್ಥಿತರಿದ್ದರು.

ಕಾಲೇಜಿನ ವಾಣಿಜ್ಯ ವಿಭಾಗದ ಮುಖ್ಯಸ್ಥೆ ಜ್ಯೋತಿ ಜೀರ್ಗೆ ವಾರ್ಷಿಕ ವರದಿ ವಾಚಿಸಿದರು. ರಾಜೇಶ್ವರಿ ಸ್ವಾಗತಿಸಿದರು. ಶ್ರೇಯಾ, ಶಿವಾನಿ ನಿರೂಪಿಸಿದರು. ಉಜ್ಮಾ ವಂದಿಸಿದರು.

# ಮಹಾತ್ಮಗಾಂಧಿ ನರೇಗಾ ಯೋಜನೆ ಪರಿಣಾಮಕಾರಿ ಅನುಷ್ಠಾನ ಎಲ್ಲರ ಜವಬ್ದಾರಿ:ಸಿಇಓ ಡಾ. ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಏ.10:ಮಹಾತ್ಮಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ಬಡಜನತೆಯ ಬದು–ಕಿಗೆ ಆಸರೆಯಾಗುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಈ ಯೋಜನೆಯಡಿ ತೊಡಗಿಸಿಕೊಂಡಿರುವ ಎಲ್ಲರೂ ಪರಿಣಾಮಕಾರಿ ಕೆಲಸ ಮಾಡುವುದು ನಿಮ್ಮ ಜವಬ್ದಾರಿಯಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಹೇಳಿದರು.

ಅವರು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ನರೇಗಾ ಯೋಜನೆಯ ಸಹಾಯಕ ನಿರ್ದೇಶಕರುಗಳೊಂದಿಗೆ ವಿಡಿಯೋ ಸಂವಾದ ಜರುಗಿಸಿ ಮಾತನಾಡಿದರು.

ಮಹಾತ್ಮಾಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ಬಡವರ ಬಾಳುಗಳಿಗೆ ಆಸರೆಯಾಗುವ ಯೋಜನೆಯಾಗಿದ್ದು, ಅದರಲ್ಲಿ ಎಲ್ಲರೂ ನಿಷ್ಠೆ, ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ದುಡಿಯಬೇಕು. ಬಡವರ ಬಾಳುಗಳಿಗೆ ಆಸರೆಯಾಗುವುದಕ್ಕಿಂತ ಮತ್ತೊಂದು ದೊಡ್ಡ ಪುಣ್ಯ ಕಾರ್ಯವಿಲ್ಲವೆಂದರು.

ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಜನತೆ ಮತ್ತು ಮಹಿಳೆಯರು ಕೂಲಿ ಕೆಲಸ ಮಾಡುತ್ತಾರೆ. ಈ ದುರ್ಬಲ ವರ್ಗಗಳಿಗೆ ಕೆಲಸ ನೀಡುವುದು ಯೋಜನೆಯಲ್ಲಿ ತೊಡಗಿಕೊಂಡಿರುವ ಎಲ್ಲರ ಜವಾಬ್ದಾರಿ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು ಮತ್ತು ಮಹಿಳಾ ಸಮುದಾಯದ ಬಾಳು ಕಟ್ಟಿಕೊಳ್ಳಲು ನೆರವಾಗುವ ಮನರೇಗಾ ಯೋಜನೆಯಡಿ ಎಲ್ಲರೂ ಇದು ಸಮಾಜದ ದುರ್ಬಲವರ್ಗಗಳಿಗೆ ನಮ್ಮ ಕೊಡುಗೆ ಎನ್ನುವ ಶ್ರದ್ಧಾ ಭಾವನೆಯಿಂದ ತೊಡಗಿಸಿಕೊಂಡು ದುಡಿಯಬೇಕು. ನರೇಗಾ ಯೋಜನೆ ಇದೆ ಎಂದೇ ನೆಮ್ಮದಿಯಾಗಿದ್ದೀರಿ. ನರೇಗಾ ಯೋಜನೆಯ ಕಾರಣದಿಂದ ಸರಕಾರಿ ಅಧಿಕಾರಿಗಳು, ಸಮಾಲೋಚಕರುಗಳಿಗೆ ಸಂಬಳ, ಸವಲತ್ತು, ಸೌಕರ್ಯಗಳು ಸಿಗುತ್ತಿವೆ. ನರೇಗಾ ಯೋಜನೆಯ ಕಾರಣದಿಂದ ಭದ್ರತೆಯನ್ನು ಅನುಭವಿಸುವವರು ಗ್ರಾಮೀಣ ಪ್ರದೇಶದ ಬಡವರ ಬದುಕುಗಳು ಅಭದ್ರರಾಗಲು ಕಾರಣರಾಗಬಾರದು' ಎಂದರು.

ಸರಕಾರಿ ರಜಾದಿನಗಳಾಗಿದ್ದರೂ ಯಾರೂ ರಜೆಯಲ್ಲಿ ತೆರಳದೆ ನರಗಾ ಯೋಜನೆಯ ಅನುಷ್ಠಾನದಲ್ಲಿ ತೊಡಗಿಕೊಂಡು ಪ್ರತಿ ಗ್ರಾಮ ಪಂಚಾಯತಿಯಲ್ಲಿ 200 ಜನ ಕೂಲಿಕಾರರಿಗೆ ಕೆಲಸ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ವಿಡಿಯೋ ಸಂವಾದದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಮತ್ತು ನರೇಗಾ ಜಿಲ್ಲಾ ನೋಡಲ್ ಅಧಿಕಾರಿ ಮುಕ್ಕಣ್ಣ ಕರಿಗಾರ, ಸಹಾಯಕ ಕಾರ್ಯದರ್ಶಿ ಬೀರೇಂದ್ರಸಿಂಗ್, ಎಡಿಪಿಸಿ ದೀಪಕ್, ಡಿಎಂಐಎಸ್ ಕೋಮಲಾ ಮತ್ತು ಡಿಐಇಸಿ ರಜನಿಕಾಂತ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಿಯು ಫಲಿತಾಂಶ: ಕೂಲಿ ಕಾರ್ಮಿಕನ ಮಗಳು ತಾಲ್ಲೂಕಿಗೆ ಪ್ರಥಮ



ಬೀದರ. ಏ. 10 : ಔರಾದ್ ತಾಲ್ಲೂಕಿನ ಗ್ರಾಮೀಣ ಭಾಗದ ಕೂಲಿ ಕಾರ್ಮಿಕನ ಪುತ್ರಿ ಸುಧಾರಾಣಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಮಸ್ಕಲ್ ಗ್ರಾಮದ ಕೂಲಿ ಕೆಲಸ ಮಾಡುವ ಸಂಗಪ್ಪ ಅವರ 3ನೇ ಪುತ್ರಿ ಸುಧಾರಾಣಿ ತಾಲ್ಲೂಕಿಗೆ ಪ್ರಥಮ ಬಂದಿದ್ದು, ಅವರ ಕುಟುಂಬಸ್ಥರಲ್ಲಿ ಹಾಗೂ ಗ್ರಾಮಸ್ಥರಲ್ಲಿ ಸಂತಸ ಮನೆ ಮಾಡಿದೆ.

ಸಂತಪುರ ಸಿದ್ಧರಾಮೇಶ್ವರ ಕಾಲೇಜಿನಲ್ಲಿ ಓದಿದ ಈ ವಿದ್ಯಾರ್ಥಿನಿ 581 ಅಂಕ (ಶೇ 96.83) ಪಡೆದು ಕಲಾ ವಿಭಾಗದಲ್ಲಿ ಜಿಲ್ಲೆಗೆ 3ನೇ ಸ್ಥಾನ ಪಡೆದಿದ್ದಾರೆ. ಇತಿಹಾಸ ವಿಷಯದಲ್ಲಿ 100ಕ್ಕೆ100 ಅಂಕ ಪಡೆಯುವ ಮೂಲಕ ಭಾಲ್ಕಿ ಹಿರೇಮಠ ಸಂಸ್ಥೆ ಹಾಗೂ ತಾಲ್ಲೂಕಿಗೆ ಹೆಸರು ಮಾಡಿದ್ದಾರೆ ಎಂದು ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಹರ್ಷ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿನಿ ಸುಧಾರಾಣಿ ಅವರಿಗೆ ಇಬ್ಬರು ಸಹೋದರರು. ಅವರಲ್ಲಿ ಒಬ್ಬರು ಪದವಿ, ಇನ್ನೊಬ್ಬರು ಎಂಜಿನಿಯರಿಂಗ್ ಓದುತ್ತಿದ್ದಾರೆ. ಇವರ ತಂದೆ ತಾಯಿ ಕೂಲಿ ಮಾಡಿ ಇವರನ್ನು ಓದಿಸುತ್ತಿದ್ದಾರೆ. 'ನಮಗೆ ಹೊಲ, ಆಸ್ತಿ ಏನು ಇಲ್ಲ. ನನ್ನ ಮಕ್ಕಳೇ ನನಗೆ ಆಸ್ತಿ' ಎನ್ನುತ್ತಾರೆ ಸುಧಾರಾಣಿ ಅವರ ತಂದೆ ಸಂಗಪ್ಪ.

'ನಾನು ಓದಿ ದೊಡ್ಡ ಹುದ್ದೆಯಲ್ಲಿ ಇರಬೇಕು ಎಂಬುದು ನನ್ನ ಪಾಲಕರ ಬಯಕೆ. ಹೀಗಾಗಿ ಪದವಿ ಓದಿ ಕೆಎಎಸ್ ಪರೀಕ್ಷೆ ಪಾಸು ಮಾಡುವ ಗುರಿ ಇದೆ. ಈ ಗುರಿ ತಲುಪಲು ನಾನು ಹಗಲಿರುಳು ಶ್ರಮಿಸುತ್ತೇನೆ' ಎಂದು ವಿದ್ಯಾರ್ಥಿನಿ ಸುಧಾರಾಣಿ ಹೇಳುತ್ತಾರೆ.

# ವಚನ ಜಾತ್ರೆ ಸಮಾರಂಭ ಯಶಸ್ವಿಗೊಳಿಸಿ:ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.10: ಪಟ್ಟಣದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಏ.21 ಮತ್ತು 22 ರಂದು ನಡೆಯಲಿರುವ ವಚನ ಜಾತ್ರೆ–2025, ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಸಮಾರಂಭದಲ್ಲಿ ಜಿಲ್ಲೆಯ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಐತಿಹಾಸಿಕವಾಗಿ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ, ಸ್ವಾಗತ ಸಮಿತಿ ಅಧ್ಯಕ್ಷ ಈಶ್ವರ ಖಂಡ್ರೆ ಮನವಿ ಮಾಡಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ವಚನ ಜಾತ್ರೆ–2025 ಮತ್ತು ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಸಮಾರಂಭದ ಕರಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ತಮ್ಮ ಬದುಕಿನುದ್ದಕ್ಕೂ ಬಸವತತ್ವ ಪ್ರಚಾರ ಪ್ರಸಾರದ ಜತೆಗೆ ಶೈಕ್ಷಣಿಕ, ಸಾಮಾಜಿಕ ಸೇವೆಗೈದು ಈ ಭಾಗಕ್ಕೆ ಅದ್ಭುತ ಕೊಡುಗೆ ನೀಡಿದ್ದಾರೆ.

ಪೂಜ್ಯರ ವಿಚಾರಧಾರೆಗಳನ್ನು ಜನಮಾಸಕ್ಕೆ ತಲುಪಿಸುವನಿಟ್ಟಿನಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ದಿವ್ಯ ಸಾನ್ನಿಧ್ಯದಲ್ಲಿ ಪ್ರತಿವರ್ಷ ಸ್ಮರಣೋತ್ಸವ, ವಚನ ಜಾತ್ರೆ ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರಲಾಗುತ್ತಿದೆ.

ಈ ವರ್ಷವೂ ಎರಡು ದಿವಸ ಅರ್ಥಪೂರ್ಣವಾಗಿ ವಚನ ಜಾತ್ರೆ, ಸ್ಮರಣೋತ್ಸವ ಆಚರಣೆಗೆ ಯೋಜನೆ ರೂಪಿಸಲಾಗಿದ್ದು, ಭರದ ಸಿದ್ಧತೆಗಳು ನಡೆಯುತ್ತಿವೆ.

ಜಿಲ್ಲೆಯ ಸದ್ಭಕ್ತರು ಸಹಸ್ರ ಸಂಖ್ಯೆಯಲ್ಲಿ ಭಾಗವಹಿಸಿ ಎರಡು ದಿನದ ಸಮಾರಂಭ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸಾನ್ನಿಧ್ಯವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಎರಡು ದಿನದ ಸಮಾರಂಭದ ಯಶಸ್ವಿಗೆ ವಿವಿಧ ಕಾರ್ಯಕ್ರಮಗಳು ಆಯೋಜಿಸುತ್ತಿದ್ದೇವೆ. ಪ್ರವಚನ, ವಚನ ಪಾರಾಯಣ, ಸಾಧಕರಿಗೆ ಪ್ರಶಸ್ತಿ ಪ್ರದಾನ, ಅನುಭಾವ ಗೋಷ್ಠಿ ಸೇರಿ ಮುಂತಾದ ಅರ್ಥಪೂರ್ಣ ಕಾರ್ಯಕ್ರಮ ನಡೆಯಲಿದ್ದು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆದು ಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಸಾಹಿತಿ ಕಲ್ಯಾಣರಾವ ಪಾಟೀಲ್, ಶಶಿಕಾಂತ ದುರ್ಗೆ, ಮುಖ್ಯಗುರು ಬಾಬು ಬೆಲ್ದಾಳ ಸೇರಿದಂತೆ ಹಲವರು ಇದ್ದರು.

ವಚನ ಜಾತ್ರೆ–2025, ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಸಮಾರಂಭದಲ್ಲಿ ಕರ್ನಾಟಕದ ರಾಜ್ಯಪಾಲರು ಸೇರಿದಂತೆ ನಾಡಿನ ಮಠಾಧೀಶರು, ರಾಜಕೀಯ ಗಣ್ಯರು ಭಾಗವಹಿಸಲಿದ್ದು, ಜಿಲ್ಲೆಯ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಸಮಾರಂಭಕ್ಕೆ ಸಾಕ್ಷಿಯಾಗಬೇಕು.

**– ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

ಗಡಿಭಾಗದಲ್ಲಿ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಕ್ಷೇತ್ರಗಳಲ್ಲಿ ಅದ್ಭುತ ಕ್ರಾಂತಿಯನ್ನು ಮಾಡಿದ್ದಾರೆ. ಪೂಜ್ಯರ ಚಿಂತನೆ, ಆದರ್ಶಗಳನ್ನು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ದಿವ್ಯ ಸಾನ್ನಿಧ್ಯದಲ್ಲಿ ಜನಮಾನಸಕ್ಕೆ ತಲುಪಿಸುವ ಪ್ರಯತ್ನ ಮಾಡಲಾಗುತ್ತಿದೆ.

**– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಜಿಲ್ಲಾಡಳಿತದಿಂದ ಭಗವಾನ್ ಮಹಾವೀರ ಜಯಂತಿ ಆಚರಣೆ

## ಮಹಾವೀರರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಿ ತಹಶೀಲ್ದಾರ್ ಸುರೇಶ್ ವರ್ಮ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ಏಪ್ರೀಲ್ 10-ಭಗವಾನ ಮಹಾವೀರರು ಅಹಿಂಸೆಯ ಪ್ರತಿಪಾದಕರಾಗಿದ್ದು, ವಿಶ್ವದಲ್ಲಿ ಶಾಂತಿ ಮತ್ತು ಅಹಿಂಸೆ ಬಯಸಿತ್ಯಾಗ,ತಪಸ್ಸುಮಾಡಿರುವರು. ಈ ಆಧುನೀಕತೆಯಲ್ಲಿ ನಾವೆಲ್ಲ ಮಹಾವೀರರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಅಹಿಂಸೆ ಮಾರ್ಗದಲ್ಲಿ ನಡೆಯಬೇಕಾಗಿದೆ ಎಂದುರಾಯಚೂರುತಹಶೀಲ್ದಾರ್ ಸುರೇಶವರ್ಮ ಅವರು ಹೇಳಿದರು.

ಏಪ್ರೀಲ್ 10ರಗುರುವಾರದಂದು ನಗರದಲ್ಲಿ ಪಂಡಿತ ಸಿದ್ಧರಾಮ ಜಂಬಲದಿನ್ನಿರಂಗಮಂದಿರದಲ್ಲಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವತಿಯಿಂದ ಭಗವಾನ್ ಮಹಾವೀರ ಜಯಂತಿಗೆ ಚಾಲನೆ ನೀಡಿ ಮಾತನಾಡಿದರು.

ಜೈನ ಧರ್ಮೀಯರು ಶಾಂತಿ ಪ್ರಿಯರು ಮತ್ತು ಅಹಿಂಸಾ ವಾದಿಗಳು. ಅವರ ನಡೆ-ನುಡಿ ಸಮಾಜಕ್ಕೆ ಮಾದರಿಯಾಗಿದೆ. ಆಧುನೀಕತೆಯಲ್ಲಿ ಶಾಂತಿ ಮತ್ತು ಅಹಿಂಸೆಯ ತತ್ವಗಳನ್ನು ಮುಂದುವರಿಸಿಕೊಂಡು ಹೋಗಬೇಕಾಗಿದೆ. ಹೀಗಾಗಿ ಮಹಾವೀರರ ತತ್ವಾದರ್ಶಗಳನ್ನು ನಾವೆಲ್ಲ ಪಾಲಿಸಬೇಕಾಗಿದೆ ಎಂದರು.

ವಿವಿಧಗಣ್ಯರಿಂದಮಾಲಾರ್ಪಣೆ: ಇದಕ್ಕೂ ಮುಂಚೆ ನಗರದ ಭಗವಾನ್ ಮಹಾವೀರ ಸರ್ಕಲ್ ಹತ್ತಿರ ಮಹಾವೀರ ಪುತ್ಥಳಿಗೆ ರಾಯಚೂರು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ ಎಸ್. ಪಾಟೀಲ್, ರಾಯಚೂರು ಮಹಾನಗರಪಾಲಿಕೆಯ ಅಧ್ಯಕ್ಷರಾದ ನರಸಮ್ಮನರಸಿಂಹಲು ಮಾಡಗಿರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ ಸೇರಿದಂತೆ ಇತರೆ ಗಣ್ಯವ್ಯಕ್ತಿಗಳಿಂದ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.

ಇದೇಸಂದರ್ಭದಲ್ಲಿಉಪನ್ಯಾಸಕರಾಗಿ ಶ್ರೀಮತಿ ಪ್ರೇಮಲತಾ ಸೇರಿದಂತೆ ಸಮಾಜದ ಮುಖಂಡರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಪೋಕ್ಸೊ ಪ್ರಕರಣ: ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ

## ದೌರ್ಜನ್ಯ ಪ್ರಕರಣದ ಆರೋಪಿಗೆ 20 ವರ್ಷಗಳ ಕಾರಾಗೃಹ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಏಪ್ರೀಲ್ 10-ಅಪ್ರಾಪ್ತಬಾಲಕಿಯರಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪಿಗೆ 20 ವರ್ಷಗಳ ಕಾರಾಗೃಹವಾಸ ಮತ್ತು 25,000 ರೂ.ದಂಡವನ್ನು ವಿಧಿಸಿ ಮತ್ತು ಸರ್ಕಾರದ ಸಂತ್ರಸ್ತರ ಪರಿಹಾರ ನಿಧಿಯಿಂದ ಬಾಧಿತ ಬಾಲಕಿಯರಿಗೆ ತಲಾ ಒಬ್ಬೊಬ್ಬರಿಗೆ 7 ಲಕ್ಷದ 50 ಸಾವಿರ ರೂಪಾಯಿಗಳನ್ನು ಪರಿಹಾರ ನೀಡಬೇಕೆಂದು ಸಿಂಧನೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರ (ಪೋ-ಕ್ಸೋ ವಿಶೇಷ) ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀ.ಬಿ.ಬಿ. ಜಕಾತಿ ಅವರು ಆದೇಶ ಹೊರಡಿಸಿದ್ದಾರೆ.

ಸಿಂಧನೂರು ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯ ಆರ್.ಹೆಚ್.ಕ್ಯಾಂಪ್ ನಂ.2ರಲ್ಲಿ ಆರೋಪಿತನಾದ ಅರುಣ್ ರಾಯ್ ತಂದೆ ಠಾಕೂರ್ ರಾಯ್ (ವಯಸ್ಸು 50) ಶಿಕ್ಷೆಗೆ ಗು-ರಿಯಾದ ಆರೋಪಿಯಾಗಿದ್ದಾನೆ.

ನೊಂದ ಅಪ್ರಾಪ್ತ ಬಾಲಕಿಯ ತಾಯಿ ನೀಡಿದ ದೂರಿನ ಮೇರೆಗೆ ಆರೋಪಿತನ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ ಅಂದಿನ ವೃತ್ತನಿರೀಕ್ಷಕರಾದ ಶ್ರೀ ಬಾಲಚಂದ್ರ ಡಿ. ಲಕ್ಕಂ ಅವರು ಆರೋಪಿತನ ವಿರುದ್ಧ ಮಾನ್ಯ ನ್ಯಾಯಾಲಯದಲ್ಲಿ ದೋಷಾರೋಪಣೆ ಪತ್ರವನ್ನು ಸಲ್ಲಿಸಿದ್ದು, ಈ ಪ್ರಕರಣದಲ್ಲಿ ಆರೋಪಿತನು ಇಬ್ಬರು ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ಲೈಂಗಿಕ ಅತ್ಯಾಚಾರ ವೆಸಗಿದ್ದು ಇರುತ್ತದೆ.

ಜಿಲ್ಲೆಯ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 2022ರ ಫೆಬ್ರವರಿ ತಿಂಗಳಲ್ಲಿ ನಡೆದ ಇಬ್ಬರು ಅಪ್ರಾಪ್ತವಯಸ್ಸಿನ ಬಾಲಕಿಯರ ಮೇಲಿನ ಈ ಲೈಂಗಿಕ ದೌರ್ಜನ್ಯ ಪ್ರಕರಣ-ಕ್ಕೆ ಸಂಬಂಧಿಸಿದಂತೆ ಮಾನ್ಯ ಸಿಂಧನೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರ(ಪೋಕ್ಸೋ ವಿಶೇಷ) ನ್ಯಾಯಾಲಯ ಪೀಠಾಸೀನವು ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷಿ ಪುರಾವೆಗಳನ್ನು ಆಧರಿಸಿ, ಆರೋಪಿತನು ಎಸಗಿರುವ ಆರೋಪವು ಸಾಭೀತಾಗಿದ್ದರಿಂದ ಆರೋಪಿತನಿಗೆ ಕಾರಾಗೃಹ ವಾಸ ಮತ್ತು ದಂಡವಿಧಿಸಿ ಮತ್ತು ಸರ್ಕಾರದ ಸಂತ್ರಸ್ತರ ಪರಿಹಾರ ನಿಧಿಯಿಂದ ಬಾಧಿತ ಬಾಲಕಿಯರಿಗೆ ಪರಿಹಾರವ ನೀಡಬೇಕೆಂದು ತೀರ್ಪು ನೀಡಿದೆ. ಮಾನ್ಯನ್ಯಾಯಾಲಯಕ್ಕೆ ಸರಿಯಾದ ಸಮಯಕ್ಕೆ ಸಾಕ್ಷಿದಾರರನ್ನು ಹಾಜರುಪಡಿಸುವಲ್ಲಿ ಪೇದೆ-ಯಾದ ಶ್ರೀ.ರವಿಕುಮಾರ್ ಪ್ರಮುಖ ಪಾತ್ರವಹಿಸಿರುತ್ತಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಶ್ರೀ ಎಂ.ಮಂಜುನಾಥ ಅವರು ವಾದ ಮಂಡಿಸಿದ್ದರು ಎಂದು ಸಿಂಧನೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರನ್ಯಾಯಾಲಯದ ವಿಶೇಷ ಸಾರ್ವಜನಿಕ ಅಭಿಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿನ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವೂ ಅತ್ಯವಶ್ಯಕ : ಗುರೂಜೀ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಪ್ರಸ್ತುತ ಸ್ಪರ್ಧಾತ್ಮಕ ಯುಗದಲ್ಲಿ ಪೋಷಕರು ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸುವ ಜೊತೆ-ಜೊತೆಗೆ ಉತ್ತಮ ಸಂಸ್ಕಾರ ನೀಡುವುದು ಅತ್ಯವಶ್ಯವಾಗಿದೆ ಎಂದು ಋಷಿಕೇಶದಿಂದ ಆಗಮಿಸಿದ ಖ್ಯಾತ ಯೋಗ ಗುರುಗಳಾದ ಜಿ. ಸುರೇಶ ಕುಮಾರ ಗುರೂಜಿ ನುಡಿದರು.

ಇಂದು ನಗರದ ವಿಶ್ವರಾಧ್ಯ ನಗರದ ಮಹರ್ಷಿ ವಾಲ್ಮೀಕಿ ಭವನದಲ್ಲಿ ಏ.13 ಭಾನುವಾರದಿಂದ ಪ್ರಾರಂಭವಾಗುವ ರುದ್ರಸಂಜೀವಿನಿ, ವ್ಯಕ್ತಿತ್ವ ವಿಕಸನ ಕಾರ್ಯಕ್ರಮದ ನಿಮಿತ್ಯ,ಮಕ್ಕಳ ಸಂಸ್ಕಾರ ಬೇಸಿಗೆ ಶಿಬಿರದ ಸತ್ಸಂಗ ಕಾರ್ಯಕ್ರಮದ ಅಂಗವಾಗಿ ಮಕ್ಕಳ ಶಿಕ್ಷಣ,ಸಂಸ್ಕಾರ ಮತ್ತು ಪೋಷಕರ ಜವಾಬ್ದಾರಿಗಳ ಕುರಿತು ಮಾತನಾಡಿದರು.

ಈ ಶಿಬಿರವೂ ಪ್ರತಿ ದಿನ 2 ಗಂಟೆಗಳ ಕಾಲ ಅಂದರೆ ಬೆಳಿಗ್ಗೆ 6 ರಿಂದ 8ರ ವರೆಗೆ ಇದ್ದು, 10 ದಿನಗಳ ತರಬೇತಿ ಶಿಬಿರ ಇರುತ್ತದೆ, 4 ರಿಂದ 10ನೇ ತರಗತಿ ಓದುತ್ತಿರುವ ಮಕ್ಕಳನ್ನು ಸೇರಿಸಬಹುದು, ವ್ಯಕ್ತಿತ್ವ ವಿಕಾಸ, ಯೋಗಾಸನ, ಪ್ರಾಣಾಯಾಮ,ಧ್ಯಾನ-ಜ್ಞಾನ, ಮಂತ್ರ ಪಠಣ, ಜವಾಬ್ದಾರಿ, ನಾಯಕತ್ವ ಗುಣ, ಸಕರಾತ್ಮಕ ದೃಷ್ಟಿಕೋನ, ಆತ್ಮ ವಿಶ್ವಾಸ, ವಿನೋದ ಕ್ರೀಡೆ ಹೀಗೆ ಹಲವೂ ವಿಚಾರಗಳನ್ನು ಒಳಗೊಂಡಿದೆ ಎಂದು ತಿಳಿಸಿದರು.

ಪೋಷಕರು ತಮ್ಮ ಮಕ್ಕಳಿಗೆ ಅವರ ಬುದ್ಧಿಮಟ್ಟ ಮತ್ತು ಆಸಕ್ತಿಗಯನ್ನು ಅರಿಯದೇ ಓದುವ ಯಂತ್ರಗಳನ್ನಾಗಿ ತಯಾರು ಮಾಡುತ್ತಿದ್ದಾರೆ, ಅದು ಮಕ್ಕಳ ಮೇಲೆ ಎಂತಹ ಪರಿಣಾಮ ಬೀರುತ್ತದೆ ಎಂಬುದು ಅವರಿಗೆ ತಿಳಿದಿರುವುದಿಲ್ಲ,ಕಾರಣ ವಿಶೇಷವಾಗಿ ಭಾರತೀಯ ಸಂಸ್ಕೃತಿ-ಸಂಪ್ರದಾಯದ ಪುರಾತನ ಸನಾತನ ಧರ್ಮದ ವಿಚಾರಗಳನ್ನೊಳಗೊಂಡ ಗುರುಕುಲ ಪದ್ಧತಿಯಂತೆ ನಡೆಯಲಿರುವ ಈ ಮಕ್ಕಳ ಸಂಸ್ಕಾರ ಬೇಸಿಗೆ ಶಿಬಿರಕ್ಕೆ ಸೇರಿಸಿ, ಮಕ್ಕಳನ್ನು ಸಂಸ್ಕಾರವಂತರನ್ನಾಗಿಸಿ, ತಮ್ಮ ಭವಿಷ್ಯವನ್ನು ತಾವೇ ರೂಪಿಸಿಕೊಳ್ಳಲು ಪ್ರೇರೇಪಿಸಿ ಎಂದು ಕರೆ ನೀಡಿದರು.

ನೋಂದಣಿಗಾಗಿ ಈ ಕೂಡಲೇ ಸಂಪರ್ಕಿಸಿ: 9964233272 / 9535828344

ಈ ಸಂದರ್ಭದಲ್ಲಿ ಬನ್ನಪ್ಪ ಸಜ್ಜನ್,ಸಾಯಿಬಣ್ಣ,ಲಚಮರಡ್ಡಿ, ಮಹಾಂತೇಶ ಭೋವಿ, ಸತೀಶ ದುಪ್ಪಲ್ಲಿ ಸೇರಿದಂತೆ ಶಿಬಿರಾರ್ಥಿಗಳು, ಮಕ್ಕಳು-ಪೋಷಕರು ಉಪಸ್ಥಿತರಿದ್ದರು.

## ಅನ್ನಭಾಗ್ಯ ಯೋಜನೆಯಡಿ ಹಣದ ಬದಲಾಗಿ ಹೆಚ್ಚುವರಿ 5ಕೆ.ಜಿ ಅಕ್ಕಿ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಏಪ್ರೀಲ್;10-ಇಲ್ಲಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಏಪ್ರಿಲ್ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ. ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ 2025ರ ಫೆಬ್ರವರಿ ಮಾಹೆಯಿಂದ ಜಾರಿಗೆ ಬರುವಂತೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಸರ್ಕಾರದ ಮಾರ್ಗಸೂಚಿಯಂತೆ ಏಕಸದಸ್ಯ, ದ್ವಿಸದಸ್ಯ ಮತ್ತು ತ್ರಿಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಏಪ್ರಿಲ್ 2025ರ ಮಾಹೆಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಮತ್ತು ಅನ್ನಭಾಗ್ಯ ಯೋಜನೆಯಡಿಯಲ್ಲಿ 01 ರಿಂದ 03 ಸದಸ್ಯರಿರುವ ಅಂತ್ಯೋದಯ (ಎಎವೈ) ಪಡಿತರದಾರರಿಗೆ 35 ಕೆ.ಜಿ ಅಕ್ಕಿ, 04 ಸದಸ್ಯರ ಕಾರ್ಡಿಗೆ 40 ಕೆ.ಜಿ, 05 ಸದಸ್ಯರಿರುವ ಕಾರ್ಡಿಗೆ 50 ಕೆ.ಜಿ ಅಕ್ಕಿ, 06 ಸದಸ್ಯರಿರುವ ಕಾರ್ಡಿಗೆ 60 ಕೆ.ಜಿ ಅಕ್ಕಿ, 07 ಸದಸ್ಯರಿರುವ ಕಾರ್ಡಿಗೆ 70 ಕೆ.ಜಿ ಅಕ್ಕಿ, 08 ಸದಸ್ಯರಿರುವ ಕಾರ್ಡಿಗೆ 80 ಕೆ.ಜಿ ಅಕ್ಕಿ, 09 ಸದಸ್ಯರಿರುವ ಕಾರ್ಡಿಗೆ 90 ಕೆ.ಜಿ ಅಕ್ಕಿ, 10 ಸದಸ್ಯರಿರುವ ಕಾರ್ಡಿಗೆ 100 ಕೆ.ಜಿ ಅಕ್ಕಿ, 11 ಸದಸ್ಯರಿರುವ ಕಾರ್ಡಿಗೆ 110 ಕೆ.ಜಿ ಅಕ್ಕಿ, 12 ಸದಸ್ಯರಿರುವ ಕಾರ್ಡಿಗೆ 120 ಕೆ.ಜಿ ಅಕ್ಕಿ, 13 ಸದಸ್ಯರಿರುವ ಕಾರ್ಡಿಗೆ 130 ಕೆ.ಜಿ ಅಕ್ಕಿ, 14 ಸದಸ್ಯರಿರುವ ಕಾರ್ಡಿಗೆ 140 ಕೆ.ಜಿ ಅಕ್ಕಿ ಮತ್ತು 15 ಸದಸ್ಯರಿರುವ ಕಾರ್ಡಿಗೆ 150 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಅದೇ ರೀತಿಯಾಗಿ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿಯೊಬ್ಬ ಸದಸ್ಯರಿಗೆ 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಡಲಾಗುತ್ತಿದ್ದು, ಅರ್ಹ ಪಡಿತರ ಚೀಟಿದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕಿಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿನಿ ಸುಧಾರಾಣಿಗೆ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಔರಾದ್..ಕಲಾ ವಿಭಾಗದ ಪ್ರತಿಭಾವಂತ ವಿದ್ಯಾರ್ಥಿನಿ ಸುಧಾರಾಣಿ ಸಂಗಪ್ಪ ದ್ವಿತೀಯ ಪಿಯುಸಿ 581 ಅಂಕ ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಹಾಗೂ ಜಿಲ್ಲೆಗೆ ತೃತೀಯ ಸ್ಥಾನ ಪಡೆದು ಕಾಲೇಜಿಗೆ ಹಾಗೂ ಹೆತ್ತ ತಂದೆ ತಾಯಿಯವರ ಕೀರ್ತಿ ಮಾಡಿದ್ದಾಳೆ ಎಂದು ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಶುಭ ಹಾರೈಸಿದರು.

ಸಂತಪುರ್ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗದವರು ಬುಧವಾರ ಪ್ರತಿಭಾವಂತ ವಿದ್ಯಾರ್ಥಿನಿ ಸುಧಾರಾಣಿ ಅವರ ಸ್ವಗ್ರಾಮ ಮನೆಗೆ ಭೇಟಿ ನೀಡಿ ಸಿಹಿ ತಿನ್ನಿಸಿ ಸನ್ಮಾನಿಸಿ ಶುಭ ಹಾರೈಸಿದರು.

ಬಡತನದಲ್ಲಿ ಅರಳಿದ ಪ್ರತಿಭೆ ಸುಧಾರಣೆಯವರು ಇನ್ನುಳಿದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದಾರೆ ಎಂದರು.

ವಿದ್ಯಾರ್ಥಿನಿಯ ಪಾಲಕರಾದ ತಾಯಿ ಬೇಬಾವತಿ,ತಂದೆ ಸಂಗಪ್ಪ, ಅಣ್ಣ ಕಲ್ಲಪ್ಪ ಉಪನ್ಯಾಸಕರಾದ ಸುಧಾ ಕೌಟಿಗೆ, ಮೀರಾತಾಯಿ ಕಾಂಬಳೆ,ಪ್ರಿಯಾಂಕಾ ಗುನ್ನಳ್ಳಿಕರ್, ವನದೇವಿ ಎಕ್ಕಳೆ,ರಾಜಕುಮಾರ ಹಳ್ಳಿಕರ್, ಶಿವಪುತ್ರ ಧರಣಿ ಗ್ರಾಮಸ್ಥರಾದ ಲಕ್ಷ್ಮಿಕಾಂತ್ ಮರ್ಕಲೆ ಹಾಗೂ ಇತರರು ಉಪಸ್ಥಿತರಿದ್ದರು.

ಸಿದ್ದರಾಮೇಶ್ವರ ಕಾಲೇಜಿನ ಸಾಧಕ ವಿದ್ಯಾರ್ಥಿಗಳು

ಸಂತಪುರ್ ಸಿದ್ದರಾಮೇಶ್ವರ ಪದವಿಪೂರ್ವ ಕಾಲೇಜು ಪ್ರಸ್ತುತ ವರ್ಷದಲ್ಲಿ ದ್ವಿತೀಯ ಪಿಯುಸಿ ಕಾಲೇಜಿನ ಫಲಿತಾಂಶ 98.80 ಪಡೆದಿದೆ. ಪರೀಕ್ಷೆಗೆ ಹಾಜರಾದ ಒಟ್ಟು ವಿದ್ಯಾರ್ಥಿಗಳು 83 ಉತ್ತೀರ್ಣರಾದ ವಿದ್ಯಾರ್ಥಿಗಳು 82. ಕಲಾ ವಿಭಾಗದಲ್ಲಿ 53 ವಿದ್ಯಾರ್ಥಿಗಳಲ್ಲಿ 52 ವಿದ್ಯಾರ್ಥಿಗಳು ಉತ್ತೀರ್ಣ ಆಗಿದ್ದಾರೆ. ಕಲಾ ವಿಭಾಗದ ಅಗ್ರಶ್ರೇಣಿ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳು ಸುಧಾರಾಣಿ ಸಂಗಪ್ಪ 581, ಕೀರ್ತನಾ ಅನಿಲಕುಮಾರ 577, ಆರತಿ ಶಿವರಾಜ 574, ಭಾಗ್ಯಲಕ್ಷ್ಮಿ ಭಕ್ತಿವಾನ 563, ಸೌಂದರ್ಯ ಬಸಪ್ಪ 562, ಶ್ರಾವಣಿ ಬಸವರಾಜ 556, ಅಂಕಿತಾ ರಾಜಕುಮಾರ 551, ಜಿತೇಂದ್ರ ರಘು 546, ಜೀನತ್ ಜಾವಿದ್ 543, ಖಂಡು ಶಿವಾಜಿ 543, ಭಾಗ್ಯವಂತಿ ರವಿ 536, ನಂದಿನಿ ಶರಣು 530, ಭಾಗ್ಯಲಕ್ಷ್ಮಿ ಶಶಿನಾಥ್ 529, ಪಾಯಲ್ ಶಿವರಾಜ್ 526, ಭಾಗ್ಯಶ್ರೀ ಶಿವಕುಮಾರ 525, ಸಂಜನಾ ಶಂಕರ 521, ಭಾಗ್ಯಲಕ್ಷ್ಮಿ ಬಸವರಾಜ್ 518, ಸವಿತಾ ಭೀಮಗೊಂಡ 515, ಅರ್ಚನಾ ನರಸಾರೆಡ್ಡಿ 510.

ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದ 30 ವಿದ್ಯಾರ್ಥಿಗಳಲ್ಲಿ 30 ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾ-ರೆ. ವಾಣಿಜ್ಯ ವಿಭಾಗದ ಪ್ರತಿಭಾವಂತ ವಿದ್ಯಾರ್ಥಿಗಳು ಅಂಬಿಕಾ ಚಂದ್ರಕಾಂತ 571, ಶ್ವೇತಾ ಬಸವರಾಜ್ 565, ವಿಜಯಲಕ್ಷ್ಮಿ ಸಂತೋಷ್ 556, ಆರತಿ ಬಸವರಾಜ್ 556, ಭಾಗ್ಯಶ್ರೀ ಮಲ್ಲಯ್ಯ 554, ಲಕ್ಷ್ಮಿ ಸಂಜುಕುಮಾರ 551, ಐಶ್ವರ್ಯ ಗುರುನಾಥ್ 548, ಕಾವ್ಯ ಶಿವಕುಮಾರ್ 547, ಪ್ರೀತಿ ಉಮಾಕಾಂತ್ 538, ಪ್ರತಿಕ ವಿನೋದ್ 535, ಐಶು ಶರಣಪ್ಪ 531, ಮಧು ಸಂಗಮೇಶ್ 531, ಭಾಗ್ಯಶ್ರೀ ಓಂಕಾರ್ 531, ಪೂಜಾ ನಾಗನಾಥ್ 523, ಲಕ್ಷ್ಮಿ ಬಸವರಾಜ್ 515, ಗಾಯತ್ರಿ ಸಿದ್ದಪ್ಪ 515, ಬಸವ ಜ್ಯೋತಿ ಸಂಗಮೇಶ್ 513

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಪೂಜ್ಯಶ್ರೀ ನಾಡೋಜ ಡಾ. ಬಸವಲಿಂಗ ಪಟ್ಟದೇವರು ಪೂಜ್ಯಶ್ರೀ ಗುರುಬಸವ ಪಟ್ಟದೇವರು, ಆಡಳಿತ ಅಧಿಕಾರಿ ಮೋಹನ ರೆಡ್ಡಿ, ಸ್ಥಾನಿಕಮಿಟಿ ಅಧ್ಯಕ್ಷರಾದ ಸಂಜುಕುಮಾರ ಜುಮ್ಮಾ, ಪ್ರಾಂಶುಪಾಲರಾದ ಬಸವರಾಜ್ ಮೋಳಕೇರೆ, ನವೀಲಕುಮಾರ ಉತ್ಕಾರ್, ಗುರುಪ್ರೀತ್ ಕೌರ್ ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದರು.

## ಶೇ.50ರ ರಿಯಾಯಿತಿ ದರದಲ್ಲಿ ಪುಸ್ತಕ ಮಾರಾಟ ಲಭ್ಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಪ್ರಯುಕ್ತ ಏಪ್ರಿಲ್ 30ರವರೆಗೆ ಶೇಕಡ 50ರ ರಿಯಾಯಿತಿಯ ದರದಲ್ಲಿ ಪುಸ್ತಕಗಳನ್ನು ಮಾರಾಟ ಲಭ್ಯವಿವೆ.

ಆನ್‌ಲೈನ್ ಮೂಲಕವೂ ಶೇ.50ರ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದೆ. ಓದುಗರು ವೆಬ್‌ಸೈಟ್ ವಿಳಾಸ: www.ku-vempubhashab-harathi ,kamataka. gov.in ಭೇಟಿ ನೀಡ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಪ್ರಾಧಿಕಾರದ ಪುಸ್ತಕ ಮಾರಾಟದ ಹಣವನ್ನು ಆಯಾ ತಿಂಗಳ ಕೊನೆಯ ದಿನಾಂಕದೊಳಗೆ ಪ್ರಾಧಿಕಾರದ

ಉಳಿತಾಯ ಖಾತೆ ಸಂಖ್ಯೆ :8693101155619 ಹಾಗೂ ಐಎಫ್‌ಎಸ್‌ಸಿ ನಂಬರ್: ಸಿಎನ್‌ಆರ್‌ಬಿ0008693 ಖಾತೆಗೆ ಜಮೆ ಮಾಡಬೇಕು.

ಹೆಚ್ಚಿನ ಮಾಹಿತಿಗಾಗಿ ರಿಜಿಸ್ಟ್ರಾರ್, ಕುವೆಂಪು ಭಾಷಾ ಭಾರತಿ ಪ್ರಾಧಿಕಾರ, ಬೆಂಗಳೂರು ಕೆನರಾ ಬ್ಯಾಂಕ್ ವೆಲ್‌ಫೇರ್ ಸೆಂಟ-ರ್ ಶಾಖೆ, ಬೆಂಗಳೂರು ಇವರನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇವೇಗೌಡರ ಬೆಳಗಾವಿ ಗರ್ಜನೆಗೆ 50 ವರ್ಷ



ಬೆಂಗಳೂರು,ಏ.10- ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂದು ಪ್ರತಿಪಾದಿಸಿ ವಿಧಾನಸಭೆಯಲ್ಲಿ ಸಿಂಹ ಗರ್ಜನೆ ಮಾಡಿದ್ದಕ್ಕೆ ಈಗ 50 ವರ್ಷ ತುಂಬಿದೆ.

1975ರ ಏ.7ರಂದು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದ ಎಚ್.ಡಿ.ದೇವೇಗೌಡರು, ಬೆಳಗಾವಿಯು ಕರ್ನಾಟಕದ ಅವಿಭಾಜ್ಯ ಅಂಗ ಎಂದು ಪ್ರತಿಪಾದಿಸಿದ್ದರು. ಬೆಳಗಾವಿ ವಿಚಾರದಲ್ಲಿ ಕೇಂದ್ರದ ನಾಯಕರು ಮಧ್ಯಪ್ರವೇಶ ಮಾಡಿದರೆ ಕರ್ನಾಟಕದಲ್ಲಿ ರಕ್ತಪಾತ ನಡೆಯಲಿದೆ ಎಂದು ಅವರು ವಿಧಾನಸಭೆಯಲ್ಲಿ ಸಿಂಹ ಘರ್ಜನೆ ಮಾಡಿದ್ದರು.

50 ವರ್ಷಗಳ ಹಿಂದೆ ದೇವೇಗೌಡರು ಬೆಳಗಾವಿಯ ಬಗ್ಗೆ ಸದನದಲ್ಲಿ ಪ್ರತಿಪಾದಿಸಿದ ವಿಚಾರವನ್ನು ಜೆಡಿಎಸ್ ತನ್ನ ಎಕ್ಸ್‌ಖಾತೆಯಲ್ಲಿ ಹಂಚಿಕೊಂಡಿದೆ.

ಸೂಚನೆ

ಪ್ರದೀಪ ಕುಲಕರ್ಣೀ ಮೊಬೈಲ್ ಸಂಖ್ಯೆ: 8618036447 ಆದ ತಾವು ಜುಲೈ 2023 ರಂದು ಗುಲ್ಬರ್ಗದ ದೇವಿ ನಗರ ಮನೆ ಸಂಖ್ಯೆ T-9-587/7/11 D ಮನೆ ಬಾಡಿಗೆಗೆ ಪಡೆದಿದ್ದು ಮನೆಗೆ ಬಿಗ ಹಾಕಿ ಕೊಂಡು ಹೋದವರು ಕರೆಂಟ ಬಿಲ್ಲು ಕಟ್ಟದೆ ಬಾಡಿಗೆಯು ಒತ್ತಾಯದ ಮೇರೆಗೆ ಆಗಿಷ್ಟು ಇಗಿಷ್ಟು ಕೊಟ್ಟು 7-11-24 ರಿಂದ ನಮ್ಮ ಫೋನ್ ಎತ್ತದೆ ಸ್ವಿಚ್ಚ ಆಫ್ ಮಾಡಿಕೊಂಡು ಎಲ್ಲಿ ಇದ್ದಿರೆಂಬುದು ಗೊತ್ತಾಗದ ಹಾಗೆ ಇರುವದರಿಂದ ಪೋಲಿಸ ಸ್ಟೇಷನಿಗೂ ತಿಳಿಸಿದರು ನೀವು ಯಾರ ಸಂಪರ್ಕದಲ್ಲೂ ಸಿಗುತ್ತಿಲ್ಲ.

ಆದುದರಿಂದ ಈ ಪತ್ರಿಕೆಯಲ್ಲಿ ಪ್ರಕಟಣೆ ನೀಡುತ್ತಿದ್ದು ಇದು ಮುದ್ರಣವಾದ 15 ದಿನಗಳ ಒಳಗಾಗಿ ಖುದ್ದಾಗಿ ಬಂದು ಇದುವರೆಗೂ ತಮ್ಮ ಪರವಾಗಿ ಕಟ್ಟಿರುವ ಕರೆಂಟ ಮೀಟರ ಬಿಲ್ಲು ಮತ್ತು ಬಾಕಿ ಮನೆ ಕಿರಾಯಿ ಕೊಟ್ಟು ಮನೆಯಲ್ಲಿ ನೀವು ಇಟ್ಟಿರುವ ಸಾಮಾನುಗಳನ್ನು ತೆಗೆದುಕೊಂಡು ಹೋಗಲು ತಿಳಿಸಲಾಗುತ್ತಿದೆ. ತಪ್ಪಿದಲ್ಲಿ ನಾಲ್ಕು ಜನರ ಮುಂದೆ ಬೀಗ ತೆಗೆದು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಬಾಬುರಾವ # ಯಲ್ಲಾಲಿಂಗ ನಿಲಯ
ದೇವಿನಗರ ,ಆಳಂದ ರಸ್ತೆ ಗುಲ್ಬರ್ಗ
ಮೊ.ಸಂಖ್ಯೆ: 984462393

ಬಳ್ಳಾರಿಯಲ್ಲಿ ಸಂಭ್ರಮದ ಮಹಾವೀರ ಜಯಂತ್ಯೋತ್ಸವ

# ಸರಳ ಮತ್ತು ಶಾಂತಿಯುತ ಜೀವನ ನಡೆಸಿ: ಮೇಯರ್ ಮುಲ್ಲಂಗಿ ನಂದೀಶ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.10–ಮಹಾವೀರ ಜಯಂತಿ ಕೇವಲ ಧಾರ್ಮಿಕ ಹಬ್ಬವಲ್ಲ, ಬದಲಾಗಿ ಕರುಣೆ, ನೈತಿಕತೆ ಮತ್ತು ಅಹಿಂಸೆಯನ್ನು ಪ್ರತಿಬಿಂಬಿಸುವ ದಿನವಾಗಿದ್ದು, ಸತ್ಯ,ಕ್ಷಮೆ ಮತ್ತು ಭೌತಿಕತೆಯಿಂದ ನಿರ್ಲಿಪ್ತತೆಯ ಮಾರ್ಗವನ್ನು ಅನುಸರಿಸುವ ಮೂಲಕ ಸರಳ ಮತ್ತು ಶಾಂತಿಯುತ ಜೀವನವನ್ನು ನಡೆಸಲು ಕಲಿಸುತ್ತದೆ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ತೇರುಬೀದಿ ರಸ್ತೆಯ ಶ್ರೀ ಪಾರ್ಶ್ವನಾಥ್ ಭವನ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ ಭಗವಾನ್ ಮಹಾವೀರ ಜಯಂತಿ ಕಾರ್ಯಕ್ರಮವನ್ನು ಮಹಾವೀರ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮಹಾವೀರರು ತಮ್ಮ 30 ನೇ ವಯಸ್ಸಿನಲ್ಲಿ ಜ್ಞಾನೋದಯವನ್ನು ಹುಡುಕುತ್ತಾ ತಮ್ಮ ಐಷರಾಮಿ ಜೀವನವನ್ನು ತ್ಯಜಿಸಿ 12 ವರ್ಷಗಳ ತೀವ್ರ ಧ್ಯಾನ ಮತ್ತು ತಪಸ್ಸಿನ ನಂತರ, ಅವರು ಕೇವಲ ಜ್ಞಾನ ಪಡೆದು ತಮ್ಮ ಜೀವನದ ಉಳಿದ ಭಾಗವನ್ನು ಅಹಿಂಸೆ, ಸತ್ಯ ಮತ್ತು ಸ್ವಯಂ-ಶಿಸ್ತಿನ ಬೋಧನೆಗಳನ್ನು ಹರಡಲು ಕಳೆದರು ಎಂದು ಮಹಾವೀರರ ಜೀವನದ ಬಗ್ಗೆ ಪರಿಚಯಿಸಿದರು.

ಸಾಧ್ವಜಿ ಶ್ರೀ ಸೂರ್ಯಪ್ರಭ ಶ್ರೀಜಿ ಅವರು ಕಾರ್ಯಕ್ರಮದ ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಜೈನ ಧರ್ಮದ ಇಪ್ಪತ್ತನಾಲ್ಕನೇ ತೀರ್ಥಂಕರರಾದ ಭಗವಾನ್ ಮಹಾವೀರರು ಚಿಕ್ಕ ವಯಸ್ಸಿನಲ್ಲಿಯೇ ಸನ್ಯಾಸ ಸ್ವೀಕರಿಸಿದವರು.ಸಹಾನುಭೂತಿಯ ಹೊಸ ಧರ್ಮವನ್ನು ಜಗತ್ತಿಗೆ ಪರಿಚಯಿಸಿದ್ದ ಭಗವಾನ್ ಮಹಾವೀರರು ಅಹಿಂಸೆ, ಪ್ರೀತಿ ಮತ್ತು ತಪಸ್ವಿಆಗಿದ್ದರು ಎಂದರು.

ಮಹಾವೀರ ಕ್ರಿ.ಪೂ 599 ರಲ್ಲಿ ಬಿಹಾರದ ಲಿಚ್ಛಾವಿ ರಾಜವಂಶದ ಮಹಾರಾಜ ಸಿದ್ಧಾರ್ಥ ಮತ್ತು ರಾಣಿ ತ್ರಿಶಾಲಾ ದಂಪತಿಗೆ ಜನಿಸಿದರು ಎಂದು ಇತಿಹಾಸದ ಪುಟಗಳು ಹೇಳುತ್ತವೆ. ಬಾಲ್ಯದಲ್ಲಿ ಮಹಾವೀರರ ಹೆಸರು ವರ್ಧಮಾನ್. ಮಹಾವೀರರು. ಸಮೃದ್ಧ ಜೀವನ ಮತ್ತು ಶಾಂತಿಯ ಮಾರ್ಗಕ್ಕಾಗಿ ಐದು ತತ್ವಗಳನ್ನು ನೀಡಿದ್ದಾರೆ. ಆ ತತ್ವಗಳೆಂದರೆ ಅಹಿಂಸೆ, ಸತ್ಯ, ಅಸ್ಥಿತ್ವ, ಬ್ರಹ್ಮಚರ್ಯ ಮತ್ತು ಭೌತಿಕವಲ್ಲದ ವಸ್ತುಗಳಿಂದ ದೂರವಿರುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಕೆ.ಸುಧಾ ತಂಡದಿಂದ ಭಗವಾನ್ ಮಹಾವೀರರ ಕುರಿತ ಭಕ್ತಿ ಗೀತೆಗಳನ್ನು ಪ್ರಸ್ತುತ ಪಡಿಸಿದರು ಮತ್ತು ಜೈನ ಸಮುದಾಯದ ಮಕ್ಕಳಿಂದ ಸಾಂಸ್ಕೃತಿಕ ನೃತ್ಯ ಪ್ರದರ್ಶನ ನಡೆಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸದಸ್ಯರಾದ ಗಾದೆಪ್ಪ.ಪಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಜೈನ್ ಸಂಘದ ಅಧ್ಯಕ್ಷ ಉತ್ಸವ್ ಲಾಲ್ ಜೀ ವರ್ಗೇಚ ಸೇರಿದಂತೆ ಸಮುದಾಯ ಮುಖಂಡರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಇತರರು ಉಪಸ್ಥಿತರಿದ್ದರು.

*ಸಂಭ್ರಮದ ಮೆರವಣಿಗೆ:*

ಮಹಾವೀರ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ವಿವಿಧ ಸಾಂಸ್ಕೃತಿಕ ಕಲಾ ತಂಡಗಳನ್ನೊಳಗೊಂಡು ನಗರದಲ್ಲಿ ಸಂಭ್ರಮದಿಂದ ನಡೆಯಿತು.

ಮೆರವಣಿಗೆಯು ನಗರದ ಶ್ರೀ ಪಾರ್ಶ್ವನಾಥ್ ಭವನದಿಂದ ಆರಂಭವಾಗಿ ತೇರು ಬೀದಿ, ಕಾಳಮ್ಮ ಬೀದಿ, ಬೆಂಗಳೂರು ರಸ್ತೆ, ಬ್ರೂಸ್ ಪೇಟೆ ಪೋಲಿಸ್ ಠಾಣೆ ರಸ್ತೆ ಮೂಲಕ ಶ್ರೀ ಪಾರ್ಶ್ವನಾಥ್ ಭವನ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ಬೆಲೆ ಏರಿಕೆ ಖಂಡಿಸಿ ಕೂಲಿಕಾರರ ಸಂಘದಿಂದ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರ ಸಂಘದ ಮಹಿಳಾ ಉಪಾಸಮಿತಿಯ ಸಮಾವೇಶವನ್ನು ಕೂಲಿಕಾರ್ ಸಂಘದ ಕಚೇರಿಯ ಶಹಪುರದಲ್ಲಿ ಆಯೋಜಿಸಲಾಗಿತ್ತು.

ಈ ಸಮಾವೇಶದ ಉದ್ಘಾಟನೆಯನ್ನು ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರ್ ಸಂಘದ ಮಹಿಳಾ ಉಪಸಮಿತಿಯ ರಾಜ್ಯ ಸಂಚಾಲಕಿಯಾದ ಕಾಂ/ ಮಲ್ಲಮ್ಮ ಕೊಡ್ಲಿ ಮಾತನಾಡುತ್ತಾ ಬಿಜೆಪಿ ಸರ್ಕಾರ ಜನ ವಿರೋಧಿ ಜೀವವಿರೋಧಿ ಬೆಲೆ ಏರಿಕೆಯಿಂದ ಜನ ತತ್ತರಿಸಿ ಹೋಗಿದ್ದಾರೆ, ಕೂಡಲೇ ಜೀವನಾವಶ್ಯಕ್ ವಸ್ತುಗಳ ಬೆಲೆಯನ್ನು ಕೂಡಲೇ ಇಳಿಸಬೇಕು ಮಹಿಳೆಯರಿಗೆ ಹೆರಿಗೆ ನೋವಿಗಿಂತ ತೆರಿಗೆ ನೋವನ್ನು ಹೆಚ್ಚು ಕೊಟ್ಟಿರುವನ್ ಕೇಂದ್ರ ಸರ್ಕಾರದ ನೀತಿ ವಿರುದ್ಧ ಜನ ಸಿಡಿದಿಳಬೇಕೆಂದು ಮಹಿಳೆಯರಿಗೆ ಹೋರಾಟಕ್ಕೆ ಕರೆ ನೀಡುತ್ತಾ. ಯಾದಗಿರಿ ಜಿಲ್ಲೆಯಲ್ಲಿ ಕೃಷಿ ಕೂಲಿಕಾರ ಮಹಿಳೆಯರು ಹೆಚ್ಚು ವಲಸೆ ಹೋಗುತ್ತಿರುವುದು ನಿಲ್ಲಿಸಲು ನರೇಗಾ ಯೋಜನೆಯನ್ನು ಸಮರ್ಪಕ ಜಾರಿ ಮಾಡಬೇಕು ಇಲ್ಲಿ ಮೌಢ್ಯ ಮೂಡನಂಬಿಕೆ ಅಂದಾಚಾರ ಕಂದಾಚಾರಗಳನ್ನು ಹೆಚ್ಚು ಇದ್ದು ನಿಧಿ ಆಸೆಗಾಗಿ ಮಕ್ಕಳನ್ನೇ ಬಲಿ ಕೊಟ್ಟಿರುವಂತಹ ಉದಾಹರಣೆ ಇದೇ ಜಿಲ್ಲೆಯಲ್ಲಿ ಇದ್ದು ಇಂತಹ ಮೌಲ್ಯಕ್ಕೆ ಜೀವ ಬಲಿಯಾಗುವುದನ್ನು ನಿಲ್ಲಿಸಲು ಜನ ಜಾಗೃತಿಯಾಗಿ ಮೌಢ್ಯ ವಿರೋಧಿಯಾಗಿ ಕೆಲಸ ಮಾಡಬೇಕಾಗಿದೆ ಎಂದು ಕರೆ ನೀಡಿದರು.

ಸಭೆಯ ಅಧ್ಯಕ್ಷತೆಯನ್ನು ರಂಗಮ್ಮ ಕಟ್ಟಿಮನಿ ವಹಿಸಿದ್ದರು ಅತಿಥಿಯಾಗಿ ಸಂಘದ ಜಿಲ್ಲಾಧ್ಯಕ್ಷ ದಾವಲ್ ಸಾಬ್ ನದಾಫ್ ಹಾಗೂ ಕರ್ನಾಟಕ ಪ್ರಾಂತ ರೈತ ಸಂಘದ ತಾಲೂಕ ಕಾರ್ಯದರ್ಶಿಯಾದ ಭೀಮರಾಯ ಪೂಜಾರಿ ಅತಿಥಿಗಳಾಗಿ ಭಾಗವಹಿಸಿದ್ದರು. ನೂರಾರು ಕೂಲಿಕಾರ ಮಹಿಳೆಯರು ಭಾಗವಹಿಸಿದ್ದರು.

ನಂತರ ಕೂಲಿಕಾರ ಮಹಿಳಾ ಉಪ ಸಮಿತಿಯ ಜಿಲ್ಲಾ ಸಂಚಾಲಕರಾಗಿ ಗೀತಾ ಹೊತಪೆಠ ಇವರನ್ನು ಸರ್ವಾನು ಮತದಿಂದ ಆಯ್ಕೆ ಮಾಡಲಾಯಿತು. ಗುಲ್ಬರ್ಗದಲ್ಲಿ ರಾಜ್ಯಮಟ್ಟದ ಮಹಿಳಾ ಉಪ ಸಮಿತಿಯ ಸಮಾವೇಶವನ್ನು 29.04.2025 ರಂದು ನಡೆಯಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಅದೇ ರೀತಿಯಾಗಿ ಮೇ 9 10 –2025 ರಂದು ಕೇರಳ ರಾಜ್ಯದ ಮಲ್ಲಾಪುರಂ ಜಿಲ್ಲೆಯಲ್ಲಿ ರಾಷ್ಟ ಸಮಾವೇಶ ನಡೆಯಲಿದೆ ಎಂದು ನಡೆಯಲಿದ್ದು ಎಲ್ಲರೂ ಮುನ್ನಡೆಯುವ ಎಂದು ಕರೆ ನೀಡಿದರು ಎಂದು ಪತ್ರಿಕ ಪ್ರಕಟಣೆಗೆ ಗೀತಾ ಪೆಟ್ ತಿಳಿಸಿದ್ದಾರೆ.

# 2 ಕೋಟಿ ಮೊತ್ತದ ರಸ್ತೆ ಕಾಮಗಾರಿಗೆ ಶಾಸಕ ರಾಜುಗೌಡ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಕ್ಷೇತ್ರದ ಅಭಿವೃದ್ಧಿ ಕಾರ್ಯಗಳನ್ನು ವೇಗವಾಗಿ ಮಾಡಲು ಅನುದಾನದ ತುಂಬಾ ತೊಂದರೆ ಇದೆ ಇದರ ಮಧ್ಯೆಯೂ ಶಕ್ತಿಮೀರಿ ಪ್ರಯತ್ನಿಸಿ ಅನುದಾನ ತಂದು ಕೆಲಸ ಮಾಡುತ್ತಿದ್ದೇನೆ, ಇದರಲ್ಲಿ ಕ್ಷೇತ್ರದ ಎಲ್ಲಾ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು,ಉತ್ತಮ ರಸ್ತೆ, ಸಮರ್ಪಕ ವಿದ್ಯುತ್, ಶಿಕ್ಷಣ ಹಾಗೂ ಆರೋಗ್ಯಕ್ಕೆ ಆದ್ಯತೆ ನೀಡಿ ಕೆಲಸ ಮಾಡಲಾಗುತ್ತಿದೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಇರಲಿ ಎಂದು ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ( ಕು.ಸಾಲವಾಡಗಿ) ಹೇಳಿದರು. ಗುರುವಾರ ತಾಲೂಕಿನ ಪೀರಾಪೂರ ಗ್ರಾಮದಲ್ಲಿ 2022– 23ನೇ ಸಾಲಿನ ಜಿಲ್ಲಾ ಪಂಚಾಯತ್ ನ 3054 ಲಮಸಮ್ ಯೋಜನೆ ಅಡಿಯಲ್ಲಿ,ಕೆ.ಆರ್.ಐ.ಡಿ.ಎಲ್. ಇಲಾಖೆ ವ್ಯಾಪ್ತಿಯ ರೂ.2 ಕೋಟಿ ಮೊತ್ತದ ಪೀರಾಪೂರ–ಅಮಲ್ಯಾಳ ಸಂಪರ್ಕ ರಸ್ತೆಯ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಈ ರಸ್ತೆ ಅಭಿವೃದ್ಧಿಪಡಿಸುವಂತೆ ಈ ಭಾಗದ ಜನರು ಬಹುದಿನಗಳ ಬೇಡಿಕೆಯಾಗಿತ್ತು, ಇಲ್ಲಿಂದ ಅಮಲ್ಯಾಳ ಗ್ರಾಮದಲ್ಲಿರುವ ತಾಳಿಕೋಟಿ ಖಾಸ್ಗತೇಶರ ಮಠದ ಶಾಖಾ ಮಠಕ್ಕೆ ಭಕ್ತರಿಗೆ ಹೋಗಲು ಅದರಲ್ಲೂ ಶಾಲಾ ಮಕ್ಕಳಿಗೆ ಇಲ್ಲಿಂದ ಹೋಗಲು ತುಂಬಾ ತೊಂದರೆಯಾಗುತ್ತಿತ್ತು, ಸಿದ್ದಲಿಂಗ ಶ್ರೀಗಳು ಇದರ ಕುರಿತು ತಿಳಿಸಿದ್ದರು ಇದೀಗ ಅವರ ಅಮೃತ ಹಸ್ತದಿಂದಲೇ ಈ ಕಾಮಗಾರಿಯ ಭೂಮಿ ಪೂಜೆ ನೆರವೇರಿದೆ ಇದು ನನ್ನ ಸೌಭಾಗ್ಯ ಎಂದು ಭಾವಿಸುತ್ತೇನೆ, ನನಗೆ ಅಧಿಕಾರ ಮುಖ್ಯವಲ್ಲ ನಿಮ್ಮೆಲ್ಲರ ಪ್ರೀತಿ ವಿಶ್ವಾಸ ಮುಖ್ಯ, ಕೆಲವರು ನನ್ನ ಕಾರ್ಯ ಕುರಿತು ಟೀಕಿಸುತ್ತಾರೆ ಅದಕ್ಕೆ ನಾನು ತಲೆಕೆಡಿಸಿಕೊಳ್ಳುವುದಿಲ್ಲ ನನಗೆ ನಿಮ್ಮ ವಿಶ್ವಾಸ ಮುಖ್ಯ. ಸದರಿ ರಸ್ತೆಯ ಕಾಮಗಾರಿ ಗುಣಮಟ್ಟದಾಗಿರುವಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು. ಜೆಡಿಎಸ್ ಜಿಲ್ಲಾಧ್ಯಕ್ಷ ಬಸನಗೌಡ ಮಾಡಗಿ,ಜಿಪಂ ಮಾಜಿ ಸದಸ್ಯ ಬಸನಗೌಡ ವಣಕಿಹಾಳ ಮಾತನಾಡಿ ಈ ಭಾಗದ ಜನರ ಬಹು ದಿನಗಳ ಬೇಡಿಕೆ ಇಂದು ಈಡೇರಿದೆ, ಇದಕ್ಕೆ ನಾವು ಗ್ರಾಮಸ್ಥರು ಪರವಾಗಿ ಶಾಸಕ ರಾಜುಗೌಡರಿಗೆ ಕೃತಜ್ಞತೆ ಸಲ್ಲಿಸುತ್ತೇವೆ. ಅವರೊಬ್ಬ ನುಡಿದಂತೆ ನಡೆಯುವ ವ್ಯಕ್ತಿ ಅನುದಾನದ ತೊಂದರೆಯ ಮಧ್ಯೆಯೂ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದಾರೆ ಇದಕ್ಕೆ ನಮ್ಮೆಲ್ಲರ ಸಹಕಾರ ಅವರಿಗೆ ಬೇಕು ಎಂದರು. ಸಾನಿಧ್ಯವಯಿಸಿ ತಮ್ಮ ಆಶೀರ್ವಚನದಲ್ಲಿ ಪೂಜ್ಯ ಸಿದ್ದಲಿಂಗ ದೇವರು ಶಾಸಕ ರಾಜುಗೌಡರು ನಾನು ಕಂಡ ಜನ ಪ್ರತಿನಿಧಿಗಳಲ್ಲಿಯೇ ಅತ್ಯಂತ ಸರಳ ಸಜ್ಜನ ವ್ಯಕ್ತಿ, ಅವರಿಗೆ ಅಧಿಕಾರದ ಯಾವುದೇ ಅಹಂ ಇಲ್ಲ, ಅಧಿಕಾರ ಇಲ್ಲದಾಗ ಹೇಗಿದ್ದರೋ ಈಗಲೂ ಹಾಗೆಯೇ ಇದ್ದಾರೆ ಇಂಥ ವ್ಯಕ್ತಿಗಳು ರಾಜಕಾರಣದಲ್ಲಿ ಸಿಗುವುದು ಅಪರೂಪ. ನಾನು ಈ ರಸ್ತೆ ಕುರಿತು ಕೇವಲ ಒಂದು ಬಾರಿ ಅವರಿಗೆ ವಿನಂತಿ ಮಾಡಿಕೊಂಡಿದ್ದೆ ನನ್ನ ಮಾತನ್ನು ಸಿರಸಾ ವಹಿಸಿ ಅನುಷ್ಠಾನ ಗೊಳಸಿದ್ದಾರೆ ಅದಕ್ಕೆ ಗ್ರಾಮಸ್ಥರ ಪರವಾಗಿ ಧನ್ಯವಾದಗಳನ್ನು ಹೇಳುತ್ತೇನೆ. ಅಧಿಕಾರ ಸಂಪತ್ತು ಯಾವುದು ಶಾಶ್ವತವಲ್ಲ ಎಲ್ಲವನ್ನು ಬಿಟ್ಟು ಒಂದು ದಿನ ನಮಗೆ ಈ ಜಗತ್ತನ್ನು ತೊರೆಯಬೇಕಾಗಿದೆ, ಭೂಮಿಯ ಮೇಲೆ ಇರುವಷ್ಟು ದಿನ ಸತ್ಕರ್ಮಗಳನ್ನು ಮಾಡಿ ಹೋಗಬೇಕಾಗಿದೆ,ಯಾರೊಂದಿಗೂ ದ್ವೇಷ,ಹಗೆತನ ಇಟ್ಟುಕೊಳ್ಳದೆ ಪ್ರೀತಿಯಿಂದ ಬದುಕಲು ಪ್ರಯತ್ನಿಸಿ ಎಂದು ಅವರು ಎರಡು ಕೋಟಿ ಮೊತ್ತದಲ್ಲಿ ಈ ರಸ್ತೆ ನಿರ್ಮಾಣವಾಗಲಿದೆ ಕಾಮಗಾರಿ ನಡೆಯುವಾಗ ಗ್ರಾಮಸ್ಥರು ಸಹಕರಿಸಿ,ರಸ್ತೆ ಆದ ನಂತರ ಕೆಡದಂತೆ ನೋಡಿಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಅಮಲ್ಯಾಳ ಗ್ರಾಮಸ್ಥರ ಪರವಾಗಿ ಪೂಜ್ಯ ಸಿದ್ದಲಿಂಗ ದೇವರು ಶಾಸಕ ರಾಜುಗೌಡರನ್ನು ಸನ್ಮಾನಿಸಿ ಆಶೀರ್ವಾದ ನೀಡಿದರು. ತಾಪಂ ಮಾಜಿ ಅಧ್ಯಕ್ಷ ರಾಜುಗೌಡ ಕೋಳೂರು,ಗ್ರಾಪಂ ಮಾಜಿ ಅಧ್ಯಕ್ಷ ಮಲ್ಲನಗೌಡ ಪೊಲೀಸ ಪಾಟೀಲ,ಸಿದ್ದನಗೌಡ ಅಮಲ್ಯಾಳ, ವಿಶ್ವನಾಥರೆಡ್ಡಿ ನಾಡಗೌಡ( ಶಳ್ಳಗಿ), ಜೆಡಿಎಸ್ ಅಧ್ಯಕ್ಷ ಮಡು ಸಾಹುಕಾರ ಬಿರಾದಾರ, ಪ್ರಭುಗೌಡ ಪಾಟೀಲ (ಲಕ್ಕುಂಡಿ),ರಸೂಲ್ ಸಾಬ ನೀರಲಗಿ,ಮೂಸಾ ಕು.ಸಾಲವಾಡಗಿ,ಅರವಿಂದ ಹಾಲಣ್ಣವರ,ಮಾಳಿಂಗರಾಯಾ ಹಾಲಣ್ಣವರ, ಸಿದ್ದನಗೌಡ ಪಾಟೀಲ ಲಕ್ಕುಂಡಿ,ಶಾಸಕರ ಆಪ್ತ ಸಹಾಯಕ ರಾಜಶೇಖರ ಪಾಟೀಲ ಹಾಗೂ ಪೀರಾಪೂರ ಅಮಲ್ಯಾಳ ಗ್ರಾಮದ ಗಣ್ಯರು ಹಿರಿಯರು ಇದ್ದರು.

# ಅಲ್ಪಸಂಖ್ಯಾತರ ಕಾಲೇಜಿಗೆ ಶೇ.75 ಫಲಿತಾಂಶ ಜಟ್ಟಪ್ಪ ಹರ್ಷಾ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಪ್ರಸಕ್ತಸಾಲಿನ ದ್ವಿತೀಯ ಪಿಯುಸಿ ಪ್ರಥಮ ಬಾರಿಗೆ ಪರೀಕ್ಷೆ ಬರೆದ ಶಹಾಪುರ ತಾಲೂಕಿನ ಸಗರ ಗ್ರಾಮದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪಿಯು ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಶೇ.75 ರಷ್ಟು ಫಲಿತಾಂಶ ನೀಡಿದ್ದಾರೆ. ಎಂದು ಕಾಲೇಜಿನ ಪ್ರಾಂಶುಪಾಲರಾದ ಜಟ್ಟಪ್ಪ ತಳವಾರ್ ಹೇಳಿದರು. ವಿಧ್ಯಾರ್ಥಿನಿ ಅಂಕಗಳನ್ನು ಪಡೆಯುವ ಮೂಲಕ ಕಾಲೇಜಿಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿನಿ ರೀಚಾ ತಂದೆ ಬನ್ನಪ್ಪ 81 ರಷ್ಟು ಫಲಿತಾಂಶ ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ ದ್ವಿತೀಯ ಸ್ಥಾನ 79 ರಷ್ಟು ಫಲಿತಾಂಶ ಪಡೆದು ದ್ವಿತೀಯ ಸ್ಥಾನ ಪಡೆದ ನಂದಿನಿ ತಂದೆ ಚಂದಪ್ಪ ವಿದ್ಯಾರ್ಥಿನಿ ಪಡೆದಿದ್ದಾಳೆ ತೃತೀಯ ಸ್ಥಾನ 75 ರಷ್ಟು ಫಲಿತಾಂಶ ಮಾಡಿದ ಗಿರಿಜಾಬಾಯಿ ತಂದೆ ಹಣಮಂತ ವಿದ್ಯಾರ್ಥಿನಿ ತೃತೀಯ ಸ್ಥಾನ ಪಡೆದಿದ್ದಾಳೆ ಒಟ್ಟು 19 ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿದ್ದರು ಅದರಲ್ಲಿ 14 ವಿದ್ಯಾರ್ಥಿನಿಯರು ಪ್ರಥಮ ದ್ವಿತೀಯ ಸ್ಥಾನದಲ್ಲಿ ತೇರ್ಗಡೆಯಾಗಿದ್ದಾರೆ ಉಳಿದ ಐದು ವಿದ್ಯಾರ್ಥಿನಿಯರು ಅನುತ್ತೀರ್ಣರಾಗಿದ್ದಾರೆ ಎಂದು ಜಟ್ಟಪ್ಪ ತಳವಾರ್ ಪ್ರಾಂಶುಪಾಲರು ಪತ್ರಿಕೆಗೆ ಹೇಳಿಕೆ ನೀಡಿದ್ದಾರೆ ಪ್ರಥಮವಾಗಿ ಪ್ರಾರಂಭವಾದ ಉನ್ನತಿ ಕರಿಸಿದ ಅಲ್ಪಸಂಖ್ಯಾತರ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಸತತವಾದ ಪ್ರಯತ್ನದಿಂದ ಈ ಸಾಧನೆ ಮಾಡಿದ್ದಾರೆ ಮುಂದಿನ ವರ್ಷ ನೂರಕ್ಕೆ ನೂರು ಫಲಿತಾಂಶ ಬರವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು ವಿದ್ಯಾರ್ಥಿಗಳ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ ಉಳಿದ ಐದು ವಿದ್ಯಾರ್ಥಿಗಳಿಗೂ ಬರುವ ಪರೀಕ್ಷೆಯಲ್ಲಿ ಅವರಿಗೂ ತೇರ್ಗಡೆಯಾಗುವ ಅವಕಾಶಗಳಿವೆ ಅದನ್ನು ಕೂಡ ನಾನು ನಮ್ಮ ಉಪನ್ಯಾಶಕರು ಸೇರಿಕೊಂಡು ಮರಳಿ ಪರೀಕ್ಷೆಗೆ ಕೂಡಿಸಿ ತೇರ್ಗಡೆಯಾಗಲು ಪ್ರಯತ್ನ ಮಾಡುತ್ತೇವೆ ಎಂದು ತಿಳಿಸಿದರು. ಪಡೆದುಕೊಂಡಿದ್ದಾರೆ. ಒಟ್ಟು ಕಾಲೇಜಿಗೆ ಶೇ.75 ಫಲಿತಾಂಶ ಲಭಿಸಿದೆ. ವಿದ್ಯಾರ್ಥಿಗಳ ಈ ಸಾಧನೆಗೆ ಪ್ರಾಂಶುಪಾಲರಾದ ಜಟ್ಟಪ್ಪ ತಳವಾರ್ ಉಪಪ್ರಾಂಶುಪಾಲರಾದ ರೇಣುಕಾ ಜಕ್ಕರಡ್ಡಿ ಶಾಲೆಯ ಎಲ್ಲಾ ಉಪನ್ಯಾಸಕರು ಹರ್ಷ ವ್ಯಕ್ತಪಡಿಸಿದ್ದಾರೆ.



# ಅಹಮದಾಬಾದ್‌ನಲ್ಲಿ ಎಐಸಿಸಿ ಅಧಿವೇಶನ ಆರಂಭ



ಮಲ್ಲಮ್ಮ ನುಡಿ ವಾರ್ತೆ

ಅಹಮದಾಬಾದ್,ಇಂದಿನಿಂದ ಎರಡು ದಿನಗಳ ಕಾಲ ಗುಜರಾತ್ ನ ಅಹಮದಾಬಾದ್‌ನಲ್ಲಿ ಎಐಸಿಸಿ ಮಹತ್ವದ ಸಭೆ ನಡೆಯುತ್ತಿದೆ. ಸಭೆಯಲ್ಲಿ ರಾಹುಲ್ ಗಾಂಧಿ, ಸೋನಿಯಾಗಾಂಧಿ,ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕಾ ಗಾಂಧಿ ಸೇರಿದಂತೆ ಸುಮಾರು 169 ನಾಯಕರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು. ಪಕ್ಷದ ಸಂಘಟನೆಯಲ್ಲಿ ಅಗತ್ಯ ಬದಲಾವಣೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ಜಿಲ್ಲಾಧ್ಯಕ್ಷರಿಗೆ ಹೆಚ್ಚಿನ ಅಧಿಕಾರ ನೀಡುವ ಮತ್ತು ಚುನಾವಣೆಯಲ್ಲಿ ಟಿಕೆಟ್ ಹಂಚಿಕೆಯಲ್ಲಿ ಅವರ ಪಾತ್ರವನ್ನು ನಿರ್ಧರಿಸುವ ಬಗ್ಗೆ ಚರ್ಚೆ ನಡೆಸಲಾಯಿತು.

# ಪಡಿತರ ಚೀಟಿ ಸದಸ್ಯರಿಂದ ಇ-ಕೆವೈಸಿ ಕಡ್ಡಾಯ: ಜಿಲ್ಲಾಧಿಕಾರಿ ನಿತೀಶ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್ 10 – ಇಲ್ಲಿನ ಆಹಾರ ನಾಗರಿಕ ಸರಬರಾಜು ಮತ್ತು ಗ್ರಹಾಕರ ವ್ಯವಹಾರಗಳ ಇಲಾಖೆಯಿಂದ ಜಿಲ್ಲೆಯ ಪಡಿತರ ಚೀಟಿ ಸದಸ್ಯರು ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದ್ದು, ಇ–ಕೆವೈಸಿ ಸದಸ್ಯರು ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿಗಳಲ್ಲಿ ಈ ತಿಂಗಳ ಅಂತ್ಯದವರೆಗೆ ಇ–ಕೆವೈಸಿಯನ್ನು ಕಡ್ಡಾಯವಾಗಿ ಮಾಡಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಇ–ಕೆವೈಸಿ ಮಾಡಿಸುವ ಸಮಯದಲ್ಲಿ ಎಸ್.ಸಿ/ಎಸ್.ಟಿ/ ಇತರೆ ಆಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಂಖ್ಯೆಯನ್ನು, ಅನಿಲ ಸಂಪರ್ಕ ಹೊಂದಿದ್ದಲ್ಲಿ ಗ್ರಾಹಕರ ಸಂಖ್ಯೆಯನ್ನು ಮತ್ತು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ಸಂಬಂಧ ಪಟ್ಟ ನ್ಯಾಯಬೆಲೆ ಅಂಗಡಿ ಡೀಲರರಿಗೆ ಸಲ್ಲಿಸಲು ತಿಳಿಸಲಾಗಿದೆ.

ಈ ಕಾರ್ಯಾಕ್ಕೆ ಪಡಿತರ ಚೀಟಿಯಲ್ಲಿನ ಸದಸ್ಯರು ಯಾವುದೇ ಹಣ ನೀಡುವಂತ್ತಿಲ್ಲ. ಇದು ಸಂಪೂರ್ಣ ಉಚಿತವಾಗಿದ್ದು, ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಹಣ ಕೇಳಿದ್ದಲ್ಲಿ ಮಾನ್ಯ ಆಯುಕ್ತರ ಕಚೇರಿಯ ಟ್ರೋಲ್ ಫ್ರೀ ದೂಡಿವಾಣಿ ಸಂಖ್ಯೆ: 1967ಗೆ ಅಥವಾ ಆಹಾರ ಇಲಾಖೆಯ ಉಪ ನಿರ್ದೇಶಕರ ಕಚೇರಿ,ಸಂಬಂಧಪಟ್ಟ ತಾಲ್ಲೂಕು ಆಹಾರ ಶಾಖೆ ಕಚೇರಿಗೆ ದೂರು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆ: 6ನೇ ತರಗತಿಗೆ ಪ್ರತಿಷ್ಠಿತ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್ 10–: ಸಮಾಜ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಮೇ.03ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ: ತಿತಿತಿ.ತಿ.ಇಾಚಿಡಿ.ಟಿಛಿ.ಎಟಿ ಗೆ ಭೇಟಿ ನೀಡಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ಜಿಲ್ಲೆಗೆ ತೃತೀಯ ರಾಂಕ್

# ಪಡೆದ ಹನುಮಂತರಾಯ ಗೋಗಿ ಪಿಯು ಕಾಲೇಜಿನ ಅತ್ಯುತ್ತಮ ಸಾಧನೆ








ಮಲ್ಲಮ್ಮ ನುಡಿ ವಾರ್ತೆ

ಶಹಪುರ್: ತಾಲೂಕಿನ ಗೋಗಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಶೇಕಡ 79 ರಷ್ಟು ಆಗಿರುತ್ತದೆ ಕುಮಾರ ಹನುಮಂತ ರಾಯ್ ಈತನು 576 ಅಂಕಗಳನ್ನು ಗಳಿಸಿ ಕಲಾ ವಿಭಾಗದಲ್ಲಿ ಜಿಲ್ಲೆಗೆ ತೃತೀಯ ಸ್ಥಾನ ಹಾಗೂ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿರುತ್ತಾನೆ. ಪ್ರಶಾಂತ್ 558 ಅಂಕಗಳು ಪಡೆದು ಕಾಲೇಜಿಗೆ ದ್ವಿತೀಯ ಸ್ಥಾನ ಪಡೆದಿರುತ್ತಾನೆ ಕುಮಾರ್ ರೇಖಾ 543 ಅಂಕ ಪಡೆದು ತೃತೀಯ ಸ್ಥಾನ ಪಡೆದಿರುವಳು ಕಾಲೇಜಿನ ಒಟ್ಟಾರೆ ಫಲಿತಾಂಶದಲ್ಲಿ 9 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ ಎಲ್ಲಿ ಪಾಸ್ ಆಗಿರುವರು 30 ಜನ ಫಸ್ಟ್ ಕ್ಲಾಸ್ 11 ಜನ ದ್ವಿತೀಯ ಶ್ರೇಣಿ ಪಾಸ್ ಆಗಿರುವರು.ವಿದ್ಯಾರ್ಥಿಗಳಿಗೆ ಸಾಧನೆಗೆ ಕಾಲೇಜಿನ ಪ್ರಾಚಾರ್ಯರಾದ ಶ್ರೀ ಗುರುಲಿಂಗಪ್ಪ ಸಾಗರ್.ಹಿರಿಯ ಉಪನ್ಯಾಸಕರಾದ ಶ್ರೀ ಕಾಮಣ್ಣ ಜೆ.ಕೆ.ಶ್ರೀ ಹೊನ್ನಪ್ಪ .ಎಮ್ .ಪಿ ಶ್ರೀಮತಿ ಮೆಹಬೂಬಿ , ಶ್ರೀ ಶರಣು ಹೊಸಮನಿ . ನಿಂಗಪ್ಪ.ಶ್ರೀಮತಿ ಕವಿತಾ ಹರ್ಷ ವ್ಯಕ್ತಪಡಿಸಿರುತ್ತಾರೆ

# ಗ್ಯಾಸ್ ಕಟರ್‌ನಿಂದ ಎಟಿಎಂ ಯಂತ್ರ ಕತ್ತರಿಸಿ 18 ಲಕ್ಷ ರೂ. ದೋಚಿದ ಖದೀಮರು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.9– ಎಟಿಎಂ ಯಂತ್ರವನ್ನು ಗ್ಯಾಸ್ ಕಟರ್‌ನಿಂದ ಕತ್ತರಿಸಿದ ಕಳ್ಳರು ಬರೋಬ್ಬರಿ 18 ಲಕ್ಷ ಹಣವನ್ನು ಕಳವು ಮಾಡಿಕೊಂಡು ಪರಾರಿಯಾಗಿರುವ ಘಟನೆ ಕಲಬುರಗಿಯ ಸಬ್‌ಅರ್ಬನ್ ಪೊಲೀಸ್‌ಠಾಣೆ ವ್ಯಾಪ್ತಿಯಲ್ಲಿ ಇಂದು ಬೆಳಗಿನ ಜಾವ ನಡೆದಿದೆ.

ಕಲಬುರಗಿಯ ಹುಮ್ನಾಬಾದ್– ಆಳಂದ ರಸ್ತೆಯ ಪೂಜಾರಿ ಚೌಕ ಸಮೀಪದ ರಾಮನಗರ ಕ್ರಾಸ್ ಬಳಿ ಎಸ್‌ಬಿಐ ಶಾಖೆಗೆ ಸೇರಿದ ಎಟಿಎಂ ಇದೆ.ಕಳ್ಳರು ಈ ಎಟಿಎಂ ನಲ್ಲಿ ಭದ್ರತಾ ಸಿಬ್ಬಂದಿ ಇಲ್ಲದಿರುವುದನ್ನು ಗಮಿಸಿದ್ದಾರೆ. ಸಮಯ ನೋಡಿಕೊಂಡು ಇಂದು ಬೆಳಗಿನ ಜಾವ 2 ರಿಂದ 3 ಗಂಟೆಯ ಅವಧಿಯಲ್ಲಿ ಎಟಿಎಂ ನಲ್ಲಿ ಹಣ ಕಳವು ಮಾಡಲು ಕಾರಿನಲ್ಲಿ ಬಂದಿದ್ದಾರೆ.

ಚೋರರು ಮೊದಲು ಚಹರೆ ಗೊತ್ತಾಗಬಾರದೆಂದು ಎಟಿಎಂ ಬಳಿ ಅಳವಡಿಸಿದ್ದ ಸಿಸಿ ಕ್ಯಾಮರಾಗೆ ಕಪ್ಪು ಬಣ್ಣ ಬಳಿದಿದ್ದಾರೆ. ನಂತರ ಗ್ಯಾಸ್ ಕಟರ್‌ನಿಂದ ಎಟಿಎಂ ಯಂತ್ರವನ್ನು ಕತ್ತರಿಸಿ ಅದರಲ್ಲಿದ್ದ 18 ಲಕ್ಷ ಹಣವನ್ನು ಬ್ಯಾಗ್‌ಗಳಲ್ಲಿ ತುಂಬಿಕೊಂಡು ಪರಾರಿಯಾಗಿದ್ದಾರೆ. ಕೆಲ ಸಮಯದ ಬಳಿಕ ರಾತ್ರಿ ಗಸ್ತು ಪೊಲೀಸರಿಗೆ ಗೊತ್ತಾಗಿದೆ. ಸುದ್ದಿ ತಿಳಿದು ಸಬ್ ಅರ್ಬನ್ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿದಾಗ ಎಟಿಎಂ ನಿಂದ ಹಣ ಕಳ್ಳತನವಾಗಿರುವುದು ಕಂಡುಬಂದಿದೆ.ಘಟನಾ ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಶರಣಪ್ಪ ಅವರು ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ.

ಕಳ್ಳರ ಬಂಧನಕ್ಕೆ ತಂಡ ರಚನೆ:

ಎಟಿಎಂ ಯಂತ್ರ ಕತ್ತರಿಸಿ ಹಣ ಕಳವು ಮಾಡಿ ಕಾರಿನಲ್ಲಿ ಪರಾರಿಯಾಗಿರುವ ಕಳ್ಳರ ಪತ್ತೆಗೆ ವಿಶೇಷ ತಂಡ ರಚಿಸಲಾಗಿದ್ದು, ಈ ತಂಡ ಈಗಾಗಲೇ ಕಾರ್ಯೋನ್ಮುಖವಾಗಿದ್ದು, ಪ್ರಮುಖ ರಸ್ತೆಗಳಲ್ಲಿರುವ ಸಿಸಿ ಕ್ಯಾಮರಾಗಳನ್ನು ಪರಿಶೀಲಿಸಿ ಕಳ್ಳರ ಪತ್ತೆಗೆ ಮುಂದಾಗಿದ್ದಾರೆ.

## ಉತ್ತಮ ಜೀವನಶೈಲಿಯಿಂದ ಆರೋಗ್ಯ ರಕ್ಷಣೆ-ಸಂಗಣ್ಣ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.10-ಉತ್ತಮ ಆಹಾರ ಸೇವನೆ ಹಾಗೂ ಜೀವನಶೈಲಿಯ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಂಗಣ್ಣ ಗೂಗ್ಯಾಳ ಹೇಳಿದರು.

ನಗರದ ವಿದ್ಯಾಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ, ತಾಲೂಕಾ ಆರೋಗ್ಯ ಇಲಾಖೆ ಮತ್ತು ಎನ್.ಎಸ್.ಎಸ್. ಘಟಕಗಳ ಜಂಟಿ ಆಶ್ರಯದಲ್ಲಿ 'ವಿಶ್ವಆರೋಗ್ಯ ದಿನಾಚರಣೆ' ಅಂಗವಾಗಿ ನಡೆದ 'ಆರೋಗ್ಯಅರಿವು' ಕಾರ್ಯಕ್ರಮದಲಿ ಅವರು ಮಾತನಾಡಿದರು.

ಬದಲಾದ ಸನ್ನಿವೇಶದಲ್ಲಿ ದೇಹಕ್ಕೆ ಬೇಡವಾದ ಆಹಾರವನ್ನು ಸೇವಿಸುತ್ತ ಹಲವು ಕಾಯಿಲೆಗಳಿಗೆ ನಾವೇ ಆಹ್ವಾನವನ್ನು ನೀಡುತ್ತಿದೇವೆ. ಮಾನಸಿಕ ಖಿನ್ನತೆಗೆ ಒಳಗಾಗುತ್ತಿದ್ದೇವೆ. ಇವುಗಳ ಬಗ್ಗೆ ಎಚ್ಚರಿಕೆಯನ್ನು ವಹಿಸಿಕೊಂಡು ಆರೋಗ್ಯ ರಕ್ಷಣೆಗೆ ಯುವಜನತೆ ಮುಂದಾಗಬೇಕು ಎಂದರು.

ಹಿರಿಯ ಪ್ರಾಥಮಿಕ ಆರೋಗ್ಯ ಸಂರಕ್ಷಣಾಧಿಕಾರಿ ಲೀಲಾವತಿ ಕರಜಗಿ ಮಾತನಾಡಿ, ಗುಟ್ಕಾ ಸೇವನೆಯಿಂದ ಕ್ಯಾನ್ಸರದಂತಹ ಮಾರಕರೋಗ ಬರಲಿದ್ದು ಯುವ ಸಮುದಾಯ ಇಂತಹ ದುಶ್ಚಟಗಳಿಂದ ದೂರವಿದ್ದು ಉತ್ತಮ ಆರೋಗ್ಯವನ್ನು ಹೊಂದಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ಉತ್ತಮ ದೈಹಿಕ ಹಾಗೂ ಮಾನಸಿಕ ಆರೋಗ್ಯವಿದ್ದಲ್ಲಿ ಜೀವನದಲ್ಲಿ ಸಾಧನೆಯನ್ನು ಮಾಡಬಹುದು. ದುಶ್ಚಟಗಳಿಗೆ ಬಲಿಯಾಗಿ ಆರೋಗ್ಯವನ್ನು ಹಾಳುಮಾಡಿಕೊಳ್ಳಬಾರದು ಎಂದು ಹೇಳಿದರು.

ತಾಲೂಕಾ ಆರೋಗ್ಯ ನಿರೀಕ್ಷಣಾಧಿಕಾರಿ ಆರ್.ಎಸ್.ಬಡ್ಡಿ, ಎನ್.ಎಸ್.ಎಸ್. ಅಧಿಕಾರಿಗಳಾದ ಎಸ್.ವಾಯ್. ಬೊಮ್ಮಣ್ಣವರ, ಎಸ್.ಎಂ.ಹಡಪದ ವೇದಿಕೆ ಮೇಲಿದ್ದರು.

ಸ್ವಪ್ನಾ ಗೌಡರ ಪ್ರಾರ್ಥಿಸಿದರು. ಸಂಯೋಜಕ ಪ್ರೊ.ಎಸ್.ಎಸ್. ಹಂಗರಗಿ ಸ್ವಾಗತಿಸಿದರು. ವಿದ್ಯಾರ್ಥಿ ಪ್ರಧಾನ ಕಾರ್ಯದರ್ಶಿ ಶ್ರವಣಾ ಸಿದ್ನಾಳ ವಂದಿಸಿದರು. ಉಪನ್ಯಾಸಕಿ ಎಸ್.ಎಂ.ಜೇವೂರ ನಿರೂಪಿಸಿದರು.

## ದೀನದಲಿತರ ಏಳಿಗೆಗೆ ಶ್ರಮಿಸಿದ ಡಾ.ಅಂಬೇಡ್ಕರ್ ರವರು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.10-ಡಾ.ಬಾಬಾಸಾಹೇಬ ಅಂಬೇಡ್ಕರ ದೀನ ದಲಿತರು, ತುಳಿತಕ್ಕೊಳಗಾದವರ ಏಳಿಗೆಗೆ ಶ್ರಮಿಸಿದವರು. ಅಸಮಾನತೆಯನ್ನು ತೊಡೆದು ಹಾಕುವುದು ಅವರ ಗುರಿಯಾಗಿತ್ತು ಎಂದು ಮುದ್ದೇಬಿಹಾಳದ ಪ್ರಾಧ್ಯಾಪಕ ರವಿ ಕಟ್ಟಿಮನಿ ಹೇಳಿದ್ದಾರೆ.

ತಾಲೂಕಿನ ರಾಂಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಚೆಗೆ ಏರ್ಪಡಿಸಿದ್ದ 'ಭಾರತ ಸಂವಿಧಾನ ರಚನೆಯಲ್ಲಿ ಡಾ. ಅಂಬೇಡ್ಕರ್ ಪಾತ್ರ' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರೊ. ಚನ್ನಮಲ್ಲಯ್ಯ ಹಿರೇಮಠ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಅಜೀತ ನಾಗರಾಳೆ, ಡಾ.ಅಂಬೇಡ್ಕರ ಅವರು ತಮ್ಮ ಜ್ಞಾನ, ದೂರದೃಷ್ಟಿಯ ಆಧಾರದ ಮೇಲೆ ಸಂವಿಧಾನ ರಚಿಸಿದರು ಎಂದರು. ಪ್ರೊ.ಆನಂದಕುಮಾರ, ಗೀತಾ ನಾಯಕ, ಗ್ಯಾನಪ್ಪ ಮುದ್ಗನ್ ಇದ್ದರು. ಶೈಲಾ ಕೊಣ್ಣೂರ ನಿರೂಪಿಸಿದರು.

## ಸಕ್ರಿ ಕಾಲೇಜು ವಿದ್ಯಾರ್ಥಿಗಳ ಸಾಧನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.10-ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಡಿ.ಹೆರಂಜಲ್ ಕಲಾ, ಎಸ್ ಸಕ್ರಿ ವಾಣಿಜ್ಯ ಹಾಗೂ ಆರ್ ದೊಡ್ಡಿಹಾಳ ವಿಜ್ಞಾನ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ. ಶ್ರೀನಿವಾಸ ಹೊಸಮನಿ ಪ್ರತಿಶತ 94.83 ಅಂಕ ಪಡೆದು ಪ್ರಥಮ, ನಿಂಗಮ್ಮ ಘಂಟಿ ಪ್ರತಿಶತ 93.16 ಅಂಕ ಗಳಿಸಿ ದ್ವಿತೀಯ, ಶಶಿಕಲಾ ಹುಣಸಿಕಟ್ಟಿ ಪ್ರತಿಶತ 89.16 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

6 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ದರ್ಜೆ, 24 ವಿದ್ಯಾರ್ಥಿಗಳು ಪ್ರಥಮ ದರ್ಜೆ, 23 ವಿದ್ಯಾರ್ಥಿಗಳು ದ್ವಿತೀಯ ಹಾಗೂ 17 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಪಾಸಾಗಿದ್ದಾರೆಂದು ಕಾಲೇಜಿನ ಪ್ರಾಚಾರ್ಯ ಅಶೋಕ ಕಂದಗಲ್ಲ ತಿಳಿಸಿದ್ದಾರೆ.

## ತೇಜಸ್ ಕಾಲೇಜ ಸಾಧನೆ-ಸೃಷ್ಟಿ ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.10-ನಗರದ ತೇಜಸ್ ಅಂತರಾಷ್ಟ್ರೀಯ ವಿಜ್ಞಾನ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶ ಉತ್ತಮವಾಗಿದ್ದು, ಸೃಷ್ಠಿ ಬಸವರಾಜ ನಂದ್ಯಾಳ ಪ್ರತಿಶತ 95.16 ಅಂಕ ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ.

ಸೃಷ್ಠಿ ನಂದ್ಯಾಳ ಜೀವಶಾಸ್ತ್ರ ಮತ್ತು ಕನ್ನಡ ವಿಷಯದಲ್ಲಿ ನೂರಕ್ಕೆ ನೂರು ಅಂಕ ಗಳಿಸಿ ಸಾಧನೆ ಮಾಡಿದ್ದರೆ, ಸಂಜನಾ ಆರ್.ನಾಗರಾಳ ಪ್ರತಿಶತ 92.5 ಅಂಕ ಗಳಿಸಿ ದ್ವಿತೀಯ, ದಾನೇಶ್ವರಿ ಗಂಗಯ್ಯ ಹಿರೇಮಠ ಮತ್ತು ಸ್ಫೂರ್ತಿ ಅಶೋಕ ಯಲಿಗಾರ ತಲಾ ಪ್ರತಿಶತ 91.5 ಅಂಕ ಗಳಿಸಿ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಕಾಲೇಜಿನ 19 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ಪಾಸಾಗಿದ್ದರೆ, 84 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ತೇಜಸ್ ಅಂತರಾಷ್ಟ್ರೀಯ ಸಮೂಹ ಸಂಸ್ಥೆಗಳ ಅಧ್ಯಕ್ಷೆ ಮಾಧುರಿ ಮುಧೋಳ ಹಾಗೂ ಪ್ರಾಚಾರ್ಯ ವಿಕ್ರಾಂತ ಉಪಾಸೆ ತಿಳಿಸಿದ್ದಾರೆ.

## ಮಹಿಳೆಯರು ಕೌಶಲ್ಯಾಭಿವೃದ್ಧಿ ತರಬೇತಿ ಪಡೆಯಬೇಕು-ಸಂಧ್ಯಾ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.10-ಮಹಿಳೆಯರು ಕೌಶಲ್ಯ ಅಭಿವೃದ್ಧಿ ತರಬೇತಿ ಪಡೆದು ಚಿಕ್ಕಪುಟ್ಟ ಉದ್ದಿಮೆ ಪ್ರಾರಂಭಿಸಿ ಸ್ವಾವಲಂಬಿಗಳಾಗಿ ಬದುಕಬೇಕು ಎಂದು ಸಮಾಜ ಸೇವಕಿ ಸಂಧ್ಯಾ ಮಾಸೂರಕರ ಹೇಳಿದರು.

ನಗರದ ಭಗಿನಿ ಸಮಾಜದ ಬರ್ಡ್ಸ ಸಂಸ್ಥೆಯ ಕಚೇರಿಯಲ್ಲಿ ಮಣಿಪಾಲದ ಭಾರತೀಯ ವಿಕಾಸ ಟ್ರಸ್ಟ್‌ವತಿಯಿಂದ ಹಮ್ಮಿಕೊಳ್ಳಲಾಗಿರುವ ಆರಿ ವರ್ಕ ತರಬೇತಿ ಶಿಬಿರವನ್ನು ಗುರುವಾರ ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದ ಅವರು, ಮನೆಗಳಲ್ಲಿ ಸಣ್ಣ ಪುಟ್ಟ ಅವಶ್ಯಕತೆಗಳಿಗೆ ಪುರುಷರನ್ನು ಹಣ ಕೇಳುವ ಬದಲಾಗಿ ಇಂತಹ ತರಬೇತಿ ಪಡೆದು ಸಣ್ಣ ಉದ್ದಿಮೆ ಪ್ರಾರಂಭಿಸಿ ಸಂಪಾದನೆ ಮಾಡಿದರೆ ಅನುಕೂಲವಾಗುತ್ತದೆ ಎಂದರು.

ಸರ್ಕಾರ ಹಾಗೂ ಸಂಘ ಸಂಸ್ಥೆಗಳು ಸಾಕಷ್ಟು ರೀತಿಯಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ. ಅವುಗಳ ಸದುಪಯೋಗವನ್ನು ಮಹಿಳೆಯರು ಮಾಡಿಕೊಳ್ಳಬೇಕು ಎಂದು ಮಾಸೂರಕರ ಹೇಳಿದರು. ಅತಿಥಿ ಶೆಲ್ಕೋ ಏರಿಯಾ ಮ್ಯಾನೇಜರ್ ಯಲ್ಲಾರಲಿಂಗ ಮಾತನಾಡಿ, ಮಹಿಳೆಯರು ಸ್ವಾವಲಂಬಿಗಳಾಗಲು ಅನೇಕ ಉದ್ಯೋಗ ಕೈಗೊಳ್ಳಲು ಶೆಲ್ಕೋ ಸಕಲ ರೀತಿ ಸಹಾಯ ಮಾಡುತ್ತದೆ ಎಂದರು.

ಮನೋಹರ ಕಟಗೇರಿ ಭಾರತೀಯ ವಿಕಾಸ ಟ್ರಸ್ಟ್‌ನ ಕೆಲಸ ಕಾರ್ಯಗಳ ಕುರಿತು ಮಾತನಾಡಿದರು. ಬರ್ಡ್ಸ ಸಂಸ್ಥಾಪಕ ಕಾರ್ಯದರ್ಶಿ ಮಹಾಂತೇಶ ಅಗಸಿಮುಂದಿನ ಸಂಸ್ಥೆಯ ಕಾರ್ಯ ಚಟುವಟಿಕೆಗಳ ಬಗ್ಗೆ ವಿವರಿಸಿದರು. ಬರ್ಡ್ಸ ಸಂಸ್ಥೆಯ ಅಧ್ಯಕ್ಷ ರಂಗನಗೌಡ ದಂಡಣ್ಣವರ ಅಧ್ಯಕ್ಷತೆ ವಹಿಸಿದ್ದರು. ತರಬೇತುದಾರರಾದ ಶಿವಾನಿ ಹಾಗೂ ಶಿವಕುಮಾರ ಇದ್ದರು.

## ರಾಜ್ಯ ಮಟ್ಟದ ಚುಟುಕು ಸಾಹಿತ್ಯ ಸಮ್ಮೇಳನದಲ್ಲಿ ಗ್ರಂಥ ಲೋಕಾರ್ಪಣೆ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 10 ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು (ರಿ) ಕೇಂದ್ರ ಸಮಿತಿ ಹುಬ್ಬಳ್ಳಿ ಹಾಗೂ ಜಿಲ್ಲಾ ಘಟಕ. ಬೀದರ. ಸಹಕಾರ :ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ತಿಪುರಾಂತ ಸಹಯೋಗ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು. ಶ್ರೀ ಘನಲಿಂಗ ರುದ್ರಮುನಿ ಜಾತ್ರಾ ಮಹೋತ್ಸವ. ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದ ರಾಜ್ಯ ಮಟ್ಟದ 13 ನೇಯ ಕರ್ನಾಟಕ ಚುಟುಕು ಸಾಹಿತ್ಯ ಸಮ್ಮೇಳನ - 2025 ಗ್ರಂಥ ಲೋಕಾರ್ಪಣೆ ಕಾರ್ಯಕ್ರಮಯನ್ನುಹುಮನಾಬಾದ ಶಾಸಕರಾದ ಸಿದ್ದು ಪಾಟೀಲ ನೇರೆವೆರಿಸಿದ್ದರು. ಗ್ರಂಥಲೇಖಕರಾದ ಶಿವಾನಂದ ಓಕಳಿ ಮಹಾಗಾಂವ. ಸಮ್ಮೇಳನಾಧ್ಯಕ್ಷರಾದ ಶ್ರೀ ನಿವಾಸ ಸರಡಗಿ ಪೂಜ್ಯ ಶ್ರೀ ಷ. ಬ್ರ. ಡಾ ರೇವಣಸಿದ್ಧ ಶಿವಾಚಾರ್ಯರ ತಿಪುರಾಂತಿನ ಗವಿಮಠದ ಪೂಜ್ಯ ಶ್ರೀ ಡಾ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು. ಕಚುಸಾಪ ರಾಜ್ಯ ಸಮ್ಮೇಳನ ಸಂಚಾಲಕರಾದ ಕೃಷ್ಣ ಮೂರ್ತಿ ಕುಲಕರ್ಣಿ. ಅಫ್ಜಲ್ ಪುರದ ಪೂಜ್ಯ ಶ್ರೀ ಷ. ಬ್ರ. ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು. ಸಾಹಿತಿ ಡಾ. ನೀಲಾಂಬಿಕಾ ಪೋಲಿಸ್ ಪಾಟೀಲ. ಜಿಲ್ಲಾ ಅಧ್ಯಕ್ಷರಾದ ಸಂಗಮೇಶ ಜವಾದಿ. ಅರ್ಜುನ ಕನಕ. ವಂದನಾ ರಮೇಶ. ವಿಮಲಾಬಾಯಿ ಮಾಣಿಕಪ್ಪ ಬಿರಾದಾರ್. ರಾಕೇಶ್ ಪುರವಂತ. ಶಿಕ್ಷಕರಾದ ಮಲ್ಲಿಕಾರ್ಜುನ ಆಲಗೂಡೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ಸೂಕ್ತ ಕ್ರಮ ಕೈಗೊಳ್ಳಿ: ನಲಿನ್ ಅತುಲ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ಜಿಲ್ಲೆಯ ಎಲ್ಲಾ ತಹಶೀಲ್ದಾರರು ಹಾಗೂ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿಗಳು ಮತ್ತು ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಸೂಚನೆ ನೀಡಿದ್ದಾರೆ.



"ಅಕ್ಷಯ ತೃತೀಯ ದಿನದಂದು" ಸಾಮೂಹಿಕ ವಿವಾಹಗಳು ಹಾಗೂ ವೈಯಕ್ತಿಕ ವಿವಾಹಗಳು ಅತೀ ಹೆಚ್ಚಾಗಿ ಆಯೋಜನೆಯಾಗುತ್ತಿದ್ದು, ಈ ಸಂದರ್ಭದಲ್ಲಿ ಅಪ್ರಾಪ್ತ ವಯಸ್ಸಿನ ಮಕ್ಕಳ ವಿವಾಹಗಳು ಜರುಗುವ ಸಾಧ್ಯತೆಗಳು ಅಧಿಕವಾಗಿರುವುದನ್ನು ಗಮನಿಸಲಾಗಿದೆ. ಈ ಹಿನ್ನಲೆಯಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಬಾಲ್ಯವಿವಾಹ ನಿಷೇಧ ಕಾಯ್ದೆ-2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ-2016ರ ಕಲಂ 13(4) ರಲ್ಲಿ "For the purpose of preventing solemnisation of mass child marriages on certain days such as "Akshaya Trutiya", The District Magistrate shall be deemed to be the Child Marriage Prohibition officer with all powers as are conferred on a Child Marriage Prohibition Officer by or under this Act" 13 (5)ರ "The District Magistrate shall also have additional powers to stop or prevent solemnization of child marriages and for this purpose, he may take all appropriate measures and use the minimum force required". ಎಂದು ಬಾಲ್ಯವಿವಾಹಗಳನ್ನು ತಡೆಗಟ್ಟಲು ಅಧಿಕಾರವನ್ನು ನೀಡಿದೆ.

ಮದುವೆಯ ಹೆಸರಿನಲ್ಲಿ ಮಕ್ಕಳ ಮೇಲಾಗುವ ದೌರ್ಜನ್ಯಗಳನ್ನು ತಡೆಗಟ್ಟಲು ಹಾಗೂ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲಾ ಹಂತಗಳಲ್ಲಿ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಬಾಲ್ಯವಿವಾಹ ತಡೆಗಟ್ಟಲು ಹಾಗೂ ಅರಿವು ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲು ಸಾಕಷ್ಟು ಪ್ರಯತ್ನಗಳನ್ನು ಮಾಡುತ್ತಿದ್ದಾಗಿಯೂ, ಇನ್ನೂ ಸಹ ಸಮುದಾಯಗಳಲ್ಲಿ ಸಾಕಷ್ಟು ಅಪ್ರಾಪ್ತ ವಯಸ್ಸಿನ ಮಕ್ಕಳ ವಿವಾಹವನ್ನು ಮಾಡುವುದು ಕಂಡುಬರುತ್ತಿದೆ.

ಏಪ್ರಿಲ್ 30ರಂದು "ಅಕ್ಷಯ ತೃತೀಯ" ದಿನ ಇದ್ದು, ಈ ದಿನದಂದು ಹಾಗೂ ಇತರೆ ದಿನಗಳಂದು ಸಾಮೂಹಿಕ ವಿವಾಹಗಳು ಹಾಗೂ ವೈಯಕ್ತಿಕ ವಿವಾಹಗಳು ಹೆಚ್ಚು ಆಯೋಜನೆಯಾಗಬಹುದಾಗಿದೆ. ಈ ಸಂದರ್ಭದಲ್ಲಿ ಬಾಲ್ಯವಿವಾಹಗಳು ನಡೆಯಬಹುದಾದ ಸಾಧ್ಯತೆ ಇರುವುದರಿಂದ ಜಿಲ್ಲಾ, ತಾಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದ ಬಾಲ್ಯ ವಿವಾಹ ನಿಷೇದಾಧಿಕಾರಿಗಳು ಕಡ್ಡಾಯವಾಗಿ ನಿಮ್ಮ ವ್ಯಾಪ್ತಿಯಲ್ಲಿ ನಡೆಯುವ ಸಾಮೂಹಿಕ ಹಾಗೂ ವೈಯಕ್ತಿಕ ವಿವಾಹಗಳಲ್ಲಿ ಯಾವುದೇ ಬಾಲ್ಯವಿವಾಹಗಳು ಜರುಗದಂತೆ ನಿಗಾವಹಿಸಿ ನಿಯಮಾನುಸಾರ ಕಾರ್ಯಪ್ರವೃತ್ತರಾಗಿ, ಸಾಮೂಹಿಕ ವಿವಾಹ ಆಯೋಜಕರಿಗೆ ಹಾಗೂ ಸಾರ್ವಜನಿಕರಿಗೆ ಬಾಲ್ಯವಿವಾಹ ನಿಷೇದ ಕಾಯ್ದೆಯ ಕುರಿತು ಅರಿವು ಮೂಡಿಸಲು ಕ್ರಮ ಕೈಗೊಳ್ಳಬೇಕು ಹಾಗೂ ಕೈಗೊಂಡ ಕ್ರಮದ ವರದಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ಅಧೀನದಲ್ಲಿ ಬರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕ-ಕ್ಕೆ ಕಡ್ಡಾಯವಾಗಿ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದ್ದಾರೆ.

## ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ಹೆಸರು ನೋಂದಣಿ ಮಾಡಿಕೊಂಡು ಉದ್ಯೋಗ ಸೌಲಭ್ಯ ಪಡೆದುಕೊಳ್ಳಲು ಸಲಹೆ -ಶ್ರೀ ಶರಣಬಸಪ್ಪ ಕೋಟೆಪ್ಪಗೋಳ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು ವತಿಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಯುವಜನತೆಗಾಗಿ ಕಲಬುರಿಗಿಯಲ್ಲಿ "ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳ-2025" ಅನ್ನು ಏಪ್ರಿಲ್-2025ರ ಮಾಹೆಯಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುತ್ತದೆ ಯಾದಗಿರಿ ಜಿಲ್ಲಾ ಕೌಶಲ್ಯ ಮಿಷನ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಹಾಗೂ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು ತಿಳಿಸಿದ್ದಾರೆ.

## ಧಾರ್ಮಿಕ ಕಾರ್ಯಕ್ರಮಗಳು ಭಾವೈಕ್ಯತೆಯ ಸಂಕೇತ : ಹನಮಗೌಡ ಪೊ.ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರು ನಮ್ಮ ಗ್ರಾಮೀಣ ಭಾಗದ ಜನರಿಗೆ ಜಾತ್ರೆ, ಉತ್ಸವ, ಮೋಹರಂ, ಧಾರ್ಮಿಕ ಕಾರ್ಯಕ್ರಮಗಳು ಭಾವೈಕ್ಯತೆ ಸಂಕೇತಗಳಾಗಿದ್ದು ಪ್ರತಿಯೊಬ್ಬರ ಮನೆಗಳಲ್ಲಿ ಹಾಗೂ ಮನಗಳಲ್ಲಿ ಇಂತಹ ಧಾರ್ಮಿಕ ಕಾರ್ಯಕ್ರಮಗಳನ್ನು ಗ್ರಾಮದವರೆಲ್ಲರೂ ಸೇರಿ ಆಚರಿಸುತ್ತಾ ಬಂದಿದ್ದೇವೆ ಎಂದು ದಳಪತಿ ಹನಮಗೌಡ ಪೋಲಿಸ್ ಪಾಟೀಲ್ ಹೇಳಿದರು.

ನಂತರ ಮಾತನಾಡಿದ ಮಂಜುನಾಥ ಗಟ್ಟೆಪ್ಪನವರ್ ಕುದರಿಮೋತಿ ಗ್ರಾಮದಲ್ಲಿ ಪ್ರತಿ ಮೂರು ವರ್ಷಕ್ಕೊಮ್ಮೆ ನಡೆಸುವ ದ್ಯಾಮಮ್ಮ ದೇವಿ ಪೂಜಾ ಕಾರ್ಯಕ್ರಮ ಉತ್ಸವದಲ್ಲಿ ಭಾಗಿಯಾಗಿ ಮಾತನಾಡಿ, ನಮ್ಮ ಗ್ರಾಮದಲ್ಲಿ ಮೂರು ವರ್ಷಕ್ಕೊಮ್ಮೆ ಈ ದ್ಯಾಮಮ್ಮ ದೇವಿಯ ಪೂಜೆಯನ್ನು ಸಲ್ಲಿಸಿ ಉತ್ಸವದೊಂದಿಗೆ ಗ್ರಾಮದ ಪ್ರತಿಯೊಂದು ಮನೆಗೆ ಹೋಗಿ ದ್ಯಾಮಮ್ಮ ದೇವಿಗೆ ಉಡಿ ತುಂಬಿಸಿಕೊಂಡು ಬರಲಾಗುತ್ತದೆ. ಈ ದೇವಿಯ ಉತ್ಸವವನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಹಿಳೆಯರ ಕಳಸ ಕನ್ನಡಿಗಳೊಂದಿಗೆ ಉತ್ಸವ ನಡೆಸಲಾಗುತ್ತದೆ ಎಂದರು.

ನಂತರ ಪ್ರಸಾದ ವಿತರಣೆ ಮಾಡಲಾಗುವುದು ಎಂದರು.

ನಮ್ಮ ಗ್ರಾಮದಲ್ಲಿ ಎಲ್ಲಾ ಸಮುದಾಯದವರು ಇದ್ದು ಇಲ್ಲಿ ಎಲ್ಲಾ ಹಬ್ಬ ಹರಿದಿನ, ಜಾತ್ರೆ, ಉತ್ಸವಗಳನ್ನು ಸರ್ವ ಸಮುದಾಯದವರು ಸಹೋದರ, ಸಹೋದರಿಯರು ಒಂದಾಗಿ ಅಚ್ಚುಕಟ್ಟಾಗಿ ಆಚರಿಸುವುದು ನಮ್ಮ ಗ್ರಾಮದ ವಿಶೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಬಸಪ್ಪ ದೊಡ್ಡಮನಿ, ಸುಭಾಷ್ ಈಡಿಗೇರ್, ವಿರುಪಣ್ಣ ಮೂಲಿಮನಿ, ಡಾ.ಬಾಷಾಸಾಬ ಮಕಾಂದರ್, ಮಾಜಿ ಗ್ರಾ.ಪಂ.ಅಧ್ಯಕ್ಷ ಮಹಾಂತಪ್ಪ ಸಿಡ್ನೇಳಿ, ಅಶೋಕ ಸಜ್ಜನ್, ರಾಮರಾವ್ ಕುಲಕರ್ಣಿ, ಸೇರಿದಂತೆ ಮಹಿಳೆಯರು, ಭಕ್ತಾಧಿಗಳು, ಯುವಕರು ಉಪಸ್ಥಿತರಿದ್ದರು.

## ಎ.14 ಅಂಬೇಡ್ಕರ 134ನೇ ಜನ್ಮದಿನೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.10-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಎಪ್ರೀಲ್ 14ರಂದು ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಮಹಾನ್ ಮಾನವತಾವಾದಿ, ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಾಬಾಸಾಹೇಬ ಅಂಬೇಡ್ಕರ ಅವರ 134ನೇ ಜನ್ಮದಿನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 8.30ಕ್ಕೆ ಸೆಕ್ಟರ ನಂ.45ರಲ್ಲಿರುವ ಶ್ರೀಮಾತೆ ರಮಾಬಾಯಿ ಅಂಬೇಡ್ಕರವರ ಸಮುದಾಯ ಭವನದಿಂದ ಅಂಬೇಡ್ಕರವರ ಭಾವಚಿತ್ರದ ಮೆರವಣೆಗೆಗೆ ಚಾಲನೆ ನೀಡಲಾಗುತ್ತಿದೆ. ಮೆರವಣಿಗೆ ಎಲ್.ಐ.ಸಿ ಸರ್ಕಲ್ ಮುಖಾಂತರ ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಳ್ಳಲಿದೆ.

ಬೆಳಿಗ್ಗೆ 10.30ಕ್ಕೆ ಜರಗುವ ವೇದಿಕೆ ಕಾರ್ಯಕ್ರಮವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಉದ್ಘಾಟಿಸುವರು. ಶಾಸಕ ಎಚ್.ವಾಯ್.ಮೇಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಹಂಪಿ ವಿದ್ಯಾರಣ್ಯ ಕನ್ನಡ ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕ ಪ್ರೊ.ಎನ್.ಚಿನ್ನಸ್ವಾಮಿ ಸೋಸಲೆ, ಹೊಳೆನರಸೀಪುರದ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ನ ಸಾಹಿತಿಗಳು ಹಾಗೂ ಮುಖ್ಯಸ್ಥ ಪ್ರೊ.ಎನ್.ಆರ್.ಶಿವರಾಂ, ರಾಜ್ಯ ದಲಿತ ಸಂಘರ್ಷ ಸಮಿತಿ ಬೆಳಗಾವಿ ವಿಭಾಗೀಯ ಅಧ್ಯಕ್ಷ ಮಹಾದೇವ ಹಾದಿಮನಿ ಅತಿಥಿ ಉಪನ್ಯಾಸಕರಾಗಿ ಆಗಮಿಸಲಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

### ಕವನ:

"ಕಣ್ಣಿನ ಮಸುರದಾಚೆಗೂ ನಿನ್ನ ನೋಡುವೆ...
ಹೃದಯದ ಬಡಿತದಲ್ಲೂ ನಿನ್ನ ಆಲಿಸುವೆ...
ಚರ್ಮದ ಮೆಲನಿನ್ನಲ್ಲು ನಿನ್ನ ಕಾಣುವೆ...
ರಕ್ತದ ಹಿಮೋಗ್ಲೋಬಿನ್ನಲ್ಲೂ ನಿನ್ನ ದೃಷ್ಟಿಕರಿಸುವೆ...
ಉಸಿರಾಟದ ಗಾಳಿಯಲ್ಲೂ ನಿನ್ನ ಆನಂದಿಸುವೆ...
ಮೆದುಳಿನ ಜ್ಞಾಪಕ ಶಕ್ತಿಯಲ್ಲೂ ನಿನ್ನ ಜ್ಞಾಪಿಸುವೆ...
ಕೋಪಕ್ಕೆ ಮೌನಿಯಾಗಿ ನಿನ್ನ ಕಾಯುವೆ...
ಮುಖಕ್ಕೆ ಮುಗುಳ್ನಗೆಯಾಗಿ ನಿನ್ನ ನಗಿಸುವೆ...
ಭಾವನೆಗೆ ಪ್ರೇಯಸಿಯಾಗಿ ನಿನ್ನ ಕಾಯುವೆ...
ಮನಸ್ಸಿಗೆ ಮನಸಾಕ್ಷಿಯಾಗಿ ನಿನ್ನ ಪ್ರೀತಿಸುವೆ...."

ಕವನ ಲೇಖನ:
ಅಂಬಿಕಾ ಕೋಸಂಬೆ,
ಭಾಲ್ಕಿ.

## ರಾಯಲ್ ಬಾಯ್ಸ್ ತಂಡ ವಾಲಿಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ನಗರದ ಗುಲ್ಬರ್ಗ ವಿಶ್ವವಿದ್ಯಾಲಯದ ಸಮಾಜ ಕಲ್ಯಾಣ ಇಲಾಖೆ ಸ್ನಾತಕೋತ್ತರ ಬಾಲಕರ ವಸತಿ ನಿಲಯದಲ್ಲಿ 134 ನೇ ಡಾ. ಬಿ ಆರ್ ಅಂಬೇಡ್ಕರ್ ರವರ ಜಯಂತೋತ್ಸವ ನಿಮಿತ್ತವಾಗಿ ಏರ್ಪಡಿಸಿದ್ದ 2025-26 ನೇ ಸಾಲಿನ ಕ್ರೀಡಾಕೂಟ ಸ್ಪರ್ಧೆಗಳಲ್ಲಿ ರಾಯಲ್ ಬಾಯ್ಸ್ ತಂಡವನ್ನು ವಾಲಿಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ವಿಜೇತರಾಗಿದ್ದು ರೆಡ್ ಬುಲ್ ತಂಡ ರನ್ನರ ಆಪ್ ಪಡೆದುಕೊಳ್ಳಲಾಯಿತು. ಈ ವೇಳೆ ವಸತಿ ನಿಲಯದ ಮೇಲ್ವಿಚಾರಕರಾದ ರಾಜಕುಮಾರ್, ವಸತಿ ನಿಲಯದ ಅಧ್ಯಕ್ಷ ರಾಕೇಶ್, ಉಪಾಧ್ಯಕ್ಷ ವೀರೇಶ್ ಜಾದವ್, ಆಡಗೆ ಸಹಾಯಕ ರಾಜಕುಮಾರ ಕಾಂಬಳೆ, ತಂಡದ ಆಟಗಾರರಾದ (ನಾಯಕ) ರಾಹುಲ್ ಮೇತ್ರೆ, (ಉಪ ನಾಯಕ) ನವೀನ್ ಪೋತೆ, ಅನೀಲ ಸಿಂಧೆ , ಆರುಣ್ ಬನಸೋಡೆ, ಆಕಾಶ ಅರ್ಥಗಾ, ಮಿಥುನ್ ಬನಸೋಡೆ, ಬೈಲಪ್ಪ ,ಶ್ರೀಕಾಂತ್ ವಿದ್ಯಾರ್ಥಿಗಳು ಸೇರಿದಂತೆ ಮತ್ತಿತರ ಉಪಸ್ಥಿತರಿದ್ದರು.

# ಏ.16 ರಂದು ಜಿಲ್ಲೆಗೆ ಸಿಎಂ ಮತ್ತು ಡಿಸಿಎಂ ಪ್ರವಾಸ:

## ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ-ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಏ.10: ಇದೇ ಏಪ್ರಿಲ್ 16 ರಂದು ಜಿಲ್ಲೆಗೆ ಸಿಎಂ ಮತ್ತು ಡಿಸಿಎಂ ಆಗಮಿಸಲಿದ್ದು, ಸಾವಿರ ಕೋಟಿಗೂ ಹೆಚ್ಚು ಮೊತ್ತದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಿದ್ಧತಾ ಸಭೆ ಉದ್ದೇಶಿಸಿ ಮಾತನಾಡಿದರು.

ನೀರಾವರಿ, ಕುಡಿಯುವ ನೀರು, ಜಿಲ್ಲಾಡಳಿತ ಸಂಕಿರಣ, ರಸ್ತೆ ಮತ್ತು ಒಳಚರಂಡಿ, ಶಾಲೆ ಹಾಗೂ ವಸತಿಶಾಲೆ, ಅರಣ್ಯ ಇಲಾಖೆಯ ಇಕೋ ಟೂರಿಸಂ ಪಾರ್ಕ್, ಬ್ರೀಮ್ಸನ ಕ್ಯಾತ್ ಲ್ಯಾಬ್, ಭಾಲ್ಕಿ ತಾಲೂಕು ಆಸ್ಪತ್ರೆ, ಭಾಲ್ಕಿ ಒಳ ಮತ್ತು ಹೊರ ಕ್ರೀಡಾಂಗಣ ಹಾಗೂ ವಿವಿಧ ಇಲಾಖೆಯ ಹತ್ತು ಹಲವಾರು ಯೋಜನೆ ಕಾಮಗಾರಿಗಳಿಗೆ, ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಚಿವ ಸಂಪುಟದ ವಿವಿಧ ಸಚಿವರು ಭಾಗಿಯಾಗಲಿದ್ದಾರೆ ಮತ್ತು ಜಿಲ್ಲೆಯ ವಿವಿಧ ಭಾಗಗಳಿಂದ ನಲವತ್ತರಿಂದ ಐವತ್ತು ಸಾವಿರ ಜನರು ಸೇರಲಿದ್ದಾರೆ ಎಂದು ತಿಳಿಸಿದರು.

ಈ ಸಭೆಯಲ್ಲಿ ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ. ಗಿರೀಶ ಬದೋಲೆ,

ಜಿಲ್ಲಾಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ್ ಗುಂಟಿ, ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಎಂ.ಎಂ,

ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಬೀದರ ಹಾಗೂ ಬಸವಕಲ್ಯಾಣ ಸಹಾಯಕ ಆಯುಕ್ತರು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಹಿಂಸಾ ಪರಮೋಧರ್ಮ ಸಾರಿದ ಭಗವಾನ್ ಮಹಾವೀರರು:ಪ್ರೊ.ಬಿ.ಎಸ್.ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಏ.10: ಈ ಜಗತ್ತಿನಲ್ಲಿ ಅಹಿಂಸೆಗಿಂತ ಮಿಗಿಲಾದ ಧರ್ಮ ಮತ್ತೊಂದಿಲ್ಲ, ಸಕಲ ಜೀವರುಗಳಲ್ಲಿ ಕರುಣೆ, ಪ್ರೀತಿ, ವಾತ್ಸಲ್ಯದಿಂದ ಗೌರವಿಸಿದಾಗ ಮಾತ್ರ ಪ್ರತಿಯೊಂದು ಧರ್ಮ ಶ್ರೇಷ್ಠವಾಗುತ್ತದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರರವರು ನುಡಿದರು. ಅವರು ಇಂದು ಬೀದರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಭಗವಾನ್ ಮಹಾವೀರರ ಜಯಂತಿ ಕಾರ್ಯಕ್ರಮ ನೆರವೇರಿಸಿ ಮಾತನಾಡುತ್ತಿದ್ದರು.

ಮಹಾವೀರರು ಅಹಿಂಸೆ, ಸತ್ಯ, ಮಾನವೀಯತೆಗಾಗಿಯೇ ಜೀವನವನ್ನು ಮುಡುಪಾಗಿಟ್ಟ ಮಹನೀಯರು. ನಮ್ಮ ಜೀವನವೂ ಸಹ ಅವರ ಸಂದೇಶಗಳಂತೆ ಒಳ್ಳೆಯದಕ್ಕಾಗಿ ಮೀಸಲಿಡಬೇಕು. 6ನೇ ಶತಮಾನದಲ್ಲಿ ಜೈನಧರ್ಮದ 24ನೇ ತೀರ್ಥಂಕರರಾಗಿದ್ದ ಮಹಾವೀರರು ಸುಖ, ಸಂಪತ್ತಿನ ಜೀವನವನ್ನು ತ್ಯಜಿಸಿ, ಅಲೌಕಿಕ ಬದುಕಿನೆಡೆಗೆ ದಾಪುಗಾಲು ಹಾಕಿ, ಸಕಲ ಪ್ರಾಣಿಗಳ ಲೇಸು ಬಯಸುತ್ತಾ ಮರುಜನ್ಮದಲ್ಲಿ ನಂಬಿಕೆ ಇಟ್ಟು ಸಾಂಸಾರಿಕ ಸುಖವನ್ನು ತ್ಯಜಿಸಿದರು. ಅವರ ಜೀವನ ಸಂದೇಶ ಪ್ರಸ್ತುತ ಸಮಾಜದಲ್ಲಿ ಆಧ್ಯಾತ್ಮಿಕ ನೆಲೆಯನ್ನು ಕಟ್ಟಿಕೊಳ್ಳುವಲ್ಲಿ ಪ್ರೇರಣೆಯಾಗಿದೆ ಎಂದು ಹೇಳಿದರು. ನಾವೆಲ್ಲರೂ ಅವರ ಮಾರ್ಗದರ್ಶನದ ಧ್ಯೇಯಗಳನ್ನು ಅಳವಡಿಸಿಕೊಂಡು ಉತ್ತಮ ಸಮಾಜವನ್ನು ಕಟ್ಟೋಣವೆಂಬ ಸಂದೇಶವನ್ನು ಕುಲಪತಿಗಳು ನೀಡಿದರು.

ಬೀದರ ವಿಶ್ವವಿದ್ಯಾಲಯದ ಕುಲಸಚಿರು ಆಡಳಿತ ಸುರೇಖಾ ಕೆ.ಎ.ಎಸ್. ಸರ್ವರನ್ನು ಸ್ವಾಗತಿಸಿ ಮಹಾವೀರರ ಸಂದೇಶಗಳು ಸಾರ್ವಕಾಲಿಕ ಸತ್ಯ ಹಾಗೂ ಪ್ರಸ್ತುತವೆನಿಸುತ್ತವೆ. ಮನುಷ್ಯರು ಅವರ ಉಪದೇಶಗಳನ್ನು, ತತ್ವಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಪಾವನವಾಗುತ್ತದೆ ಎಂದು ತಿಳಿಸುತ್ತಾ ಸರ್ವರನ್ನು ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಡಾ.ತುಕಾರಾಮ ಮೇತ್ರೆ, ಶಿವಶಂಕರ, ಸುರೇಶ.ಎಂ.ರವರು ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರ್ ಜಯಂತಿ:

## ಸಚಿವರಿಂದ ಭಿತ್ತಿಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 10 : ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯು ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮಸ್ಥಳ ಮಧ್ಯಪ್ರದೇಶದ ಮೋವ್‌ನಲ್ಲಿ ಏ.14 ರಂದು ಆಯೋಜಿಸಿರುವ ಡಾ. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ಭಿತ್ತಿಪತ್ರವನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ನಗರದ ಅಕ್ಕ ಮಹಾದೇವಿ ಕಾಲೇಜಿನಲ್ಲಿ ಗುರುವಾರ ಬಿಡುಗಡೆ ಮಾಡಿದರು.

ಸಮಿತಿ ಪ್ರತಿ ವರ್ಷ ಒಂದೊಂದು ಸ್ಥಳದಲ್ಲಿ ಡಾ. ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮ ಏರ್ಪಡಿಸುತ್ತ ಬಂದಿದೆ. ಈಗಾಗಲೇ ನವದೆಹಲಿ, ಮುಂಬೈ, ಬೆಂಗಳೂರು, ಹೈದರಾಬಾದ್, ಚಂಡಿಗಢ್ ಮತ್ತಿತರ ಕಡೆ ಜಯಂತಿ ಆಚರಿಸಲಾಗಿದೆ. ಈ ಬಾರಿ ಅವರ ಜನ್ಮಸ್ಥಳದಲ್ಲೇ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜೈ ಭಾರತ ಮಾತಾ ರಾಷ್ಟ್ರೀಯ ಸೇವಾ ಸಮಿತಿಯ ಭಾಲ್ಕಿ ತಾಲ್ಲೂಕು ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ತಿಳಿಸಿದರು.

ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜರ ನೇತೃತ್ವದಲ್ಲಿ ಮೋವ್‌ನ ಅಂಬೇಡ್ಕರ್ ನಗರದಲ್ಲಿ ಅದ್ದೂರಿ ಹಾಗೂ ಅರ್ಥಪೂರ್ಣ ಜಯಂತಿ ಆಚರಣೆಗೆ ಈಗಾಗಲೇ ಭರದ ಸಿದ್ಧತೆಗಳು ನಡೆದಿವೆ ಎಂದು ಹೇಳಿದರು.

ಜಯಂತಿ ಅಂಗವಾಗಿ ಸಮಿತಿಯ ಕಾರ್ಯಕರ್ತರು ಹವಾ ಮಲ್ಲಿನಾಥ ಮಹಾರಾಜರ ಮುಂದಾಳತ್ವದಲ್ಲಿ ಏಪ್ರಿಲ್ 11 ರಂದು ಬೆಳಿಗ್ಗೆ 11ಕ್ಕೆ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಲಾಡಚಿಂಚೋಳಿ ಬಳಿಯ ಭಾರತ ಮಾತಾ ಮಂದಿರದಿಂದ ನೂರಾರು ವಾಹನಗಳಲ್ಲಿ ಮೋವ್‌ಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕರ್ತರು ಸೋಲಾಪುರ, ಬಿಗವಾನ್, ದೌಂಡ್, ಸಂಭಾಜಿನಗರ, ಧುಳೆ ಮಾರ್ಗವಾಗಿ ಏಪ್ರಿಲ್ 14 ರಂದು ಮಧ್ಯಪ್ರದೇಶದ ಇಂದೋರ್ ಜಿಲ್ಲೆಯ ಮೋವ್‌ಗೆ ತಲುಪಲಿದ್ದಾರೆ. ಅಂದು ಬೆಳಿಗ್ಗೆ 11ಕ್ಕೆ ಕಾರ್ಯಕ್ರಮ ಜರುಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಖ್ಯಾತ ವಾಗ್ಮಿಗಳು ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನ ಮತ್ತು ಸಾಧನೆ ಕುರಿತು ಉಪನ್ಯಾಸ ನೀಡಲಿದ್ದಾರೆ. ವಿವಿಧ ಕ್ಷೇತ್ರಗಳ ಸಾಧಕರ ಸನ್ಮಾನ ನಡೆಯಲಿದೆ. ದೇಶದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಹಿಸಬೇಕು ಎಂದು ಮನವಿ ಮಾಡಿದರು.

ಪ್ರಮುಖರಾದ ಸಂಗಮೇಶ ಚಂದಾಪುರೆ, ನಂದೇಶ್ ಪಾಟೀಲ, ಬಲವೀರ್ ಪಾಟೀಲ, ಮಾಣಿಕ, ಸತೀಶ್, ಈಶ್ವರ, ಶಿವಕುಮಾರ, ಪ್ರಶಾಂತ, ರಾಹುಲ್, ಸಚಿನ್, ಆನಂದ ರಾಂಪುರೆ ಇದ್ದರು.

# ಭಗವಾನ್ ಮಹಾವೀರ ಮನುಕುಲದ ಉದ್ಧಾರಕರು: ಎಸ್.ಪಿ.ಪೃಥ್ವಿಕ್ ಶಂಕರ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:10: ಭಗವಾನ್ ಮಹಾವೀರರು ಮನುಕುಲವನ್ನು ಉದ್ಧಾರ ಮಾಡಿದ ಮಹಾನ್ ಚೇತನ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಹೇಳಿದರು.

ನಗರದ ಚಕ್ರಕಟ್ಟಾ ರಸ್ತೆಯ ಮಹಾವೀರ ಭವನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಪಂ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಜಯಂತ್ಯೋತ್ಸವ ಸಮಿತಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಭಗವಾನ ಮಹಾವೀರರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಾವೀರರ ವಿಚಾರಧಾರೆಗಳು ಸರ್ವರಿಗೂ ಸಮಬಾಳು, ಸಮಪಾಲು ನೀಡುವ ಸರ್ವೋದಯದ ಧರ್ಮತೀರ್ಥದಂತಿತ್ತು ಎಂದರು.

ಹುಟ್ಟಿನಿಂದ ಯಾರು ಮೇಲಲ್ಲ, ಕೀಳಲ್ಲ. ತನ್ನ ಕಾಯಕದಿಂದ ಉತ್ತಮ ಅಥವಾ ಕನಿಷ್ಠನಾಗುತ್ತಾನೆಂಬ ಮಾತಿನಂತೆಯೇ ಮನಸ್ಸು, ವಚನ, ಕಾಯಕ ಶುದ್ಧಿಯಿಂದ ಆತ್ಮ ಸುಸಂಕೃತವಾಗುವುದೆಂಬ ದಿವ್ಯ ಮಂತ್ರ ಹೇಳಿಕೊಟ್ಟ ಮಾನವ ಸಮಾಜ ಮಹಾಬೆಳಕಾಗಿದ್ದಾರೆ ಎಂದು ಹೇಳಿದರು.

'ತತ್ವಜ್ಞಾನವಿಹಿನಾನಮ್ ದುಃಖ್ಯಮೇವ ಶಾಶ್ವತಮ್' ಅಂದರೇ ಪರಿಪೂರ್ಣವಾದ ಜ್ಞಾನವು ಆತ್ಮವನ್ನು ಸುಖಿಯನ್ನಾಗಿ ಇಡಬಲ್ಲದು ಎಂಬುವುದನ್ನು ಸಿದ್ದ ಭಗವಂತರಾಗಿ ಅಮರ ಸಂದೇಶ ನೀಡಿದ ಭಗವಾನ್ ಮಹಾವೀರರ ತತ್ವಗಳನ್ನು ಪಾಲಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಹೇಳಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಶಾಂತಿ, ಸಹನೆ, ತಾಳ್ಮೆ ಜೀವನದ ಮಂತ್ರಗಳಾಗಬೇಕು. ಆ ಮೂಲಕ ಪರೋಪಕಾರ ಜೀವನ ಸಾಗಿಸಬೇಕೆಂಬ ಸಂದೇಶವನ್ನು ಭಗವಾನ್ ಮಹಾವೀರರು ನೀಡಿದ್ದಾರೆ. ಕಾರಣ ಎಲ್ಲರೂ ಅವರ ಬದುಕಿನ ಆದರ್ಶಗಳನ್ನು ಪಾಲಿಸೋಣ ಎಂದರು. ವಿಶೇಷ ಉಪನ್ಯಾಸ ನೀಡಿದ ಉಪನ್ಯಾಸಕ ರಮೇಶ ಬಡಿಗೇರ ಅವರು ಧರ್ಮಸಂಕಷ್ಟದಿಂದ ಪಾರು ಮಾಡಲು ಆಗಾಗ ಈ ಭೂಮಿಗೆ ಧರ್ಮಾತ್ಮರು ಅವತರಿಸಿ ಬರುತ್ತಾರೆ ಎಂಬ ವಾಣಿಯಂತೆಯೇ ಭಗವಾನ ಮಹಾವೀರರು ಹುಟ್ಟಿ ಬಂದು ಜನರನ್ನು ಸನ್ಮಾರ್ಗದಲ್ಲಿ ಕರೆದುಕೊಂಡು ಹೋಗುವ ಮೂಲಕ ಮಾನವ ಸಮಾಜದ ಬೆಳಕಾಗಿದ್ದಾರೆಂದರು. ಬಿಹಾರ ರಾಜ್ಯದ ವೈಶಾಲಿ ನಗರದ ಕುಂಡ ಗ್ರಾಮದಲ್ಲಿ ರಾಜಸಿದ್ಧಾರ್ಥ ಮತ್ತು ತ್ರಿಶಾಲೆ ದಂಪತಿ ಮಗನಾಗಿ ಜನಸಿದ ಇವರಿಗೆ ವರ್ಧಮಾನ ಎಂಬ ಹೆಸರು ನಾಮಕರಣ ಮಾಡುತ್ತಾರೆ. ಬಾಲಕನಿದ್ದಾಗಲೇ ಆಟ, ಪಾಠಗಳಲ್ಲಿ ಬುದ್ದಿವಂತರಾಗಿದ್ದರು, ಜೀವಿಗಳು ಕಷ್ಟ ಪಡಲು ಕಾರಣ ಹುಡುಕುವ ದಾರ್ಶನಿಕರಾಗಿ, ಒಬ್ಬರಿಗೊಬ್ಬರು ಸಹಕಾರ ಮಾಡುವುದು ಮಾನವರ ಕರ್ತವ್ಯವಾಗಬೇಕೆಂಬ ಸಂದೇಶ ಸಾರಿದರೆಂದು ಬಡಿಗೇರ ಹೇಳಿದರು.

ಜೈನ ಸಮಾಜದ ಸನ್ಯಾಸತ್ವ ಸ್ವೀಕಾರ ಮಾಡಲಿರುವ ನಿಕಿತಾ ಗಾಂಧಿ ಮಾತನಾಡಿ, ಭಗವಾನ ಮಹಾವೀರರು ಅಮೂಲ್ಯವಾದ ಜೀವನ ಮೌಲ್ಯಗಳನ್ನು ಕೊಟ್ಟಿದ್ದಾ-ರೆ. ಅವರ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕೆಂದರು.

ಕಾರ್ಯಕ್ರಮದಲ್ಲಿ ಡಿವೈಎಸ್ ಪಿ ಅರುಣ ಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ, ಜೈನಸಮಾಜದ ಮುಖಂಡರಾದ ಮಾರಾಸಮಲ್ ಜೈನ್, ಬಾಬು ದೋಖಾ, ಗೌತಮಚಂದ ದೋಖಾ, ಕಾಂತಿಲಾಲ ದೋಖಾ, ವಿನೋದ ಬಭಂಡಾರಿ, ಸುರೇಶ ಜೈನ್, ಗೌತಮ್ ಚಿಂದಿ ಜೈನ್, ಉಪಸ್ಥಿತರಿದ್ದರು. ಗುರುಪ್ರಸಾದ್ ವೈದ್ಯ ಕಾರ್ಯಕ್ರಮ ನಿರ್ವಹಿಸಿ ಕೊನೆಯಲ್ಲಿ ವಂದಿಸಿದರು.



2025–26ನೇ ಸಾಲಿಗೆ ಡಾ.ಬಿ.ಆರ್ ಅಂಬೇಡ್ಕರ್ ಪ್ರಶಸ್ತಿಗೆ ಭಾಜನರಾದ ದತ್ತಾತ್ರೇಯ ಇಕ್ಕಳಕಿ ಅವರ ಮನೆಗೆ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಅಲ್ಲಾಭಕ್ಷ ಹಾಗೂ ಸಹಾಯಕ ನಿರ್ದೇಶಕ ಗಿರೀಶ ರಂಜೋಳಕರ್ ಅವರು ತೆರಳಿ ಆತ್ಮೀಯವಾಗಿ ಅಭಿನಂದಿಸಿದರು

# ಜೈನ ಮಂದಿರಕ್ಕೆ ಶೀಘ್ರ ನೀರಿನ ವ್ಯವಸ್ಥೆ : ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಏ.10: ನಗರದ ಜೈನ ಬಡಾವಣೆಯಲ್ಲಿರುವ ಜೈನ ಮಂದಿರಕ್ಕೆ ನೀರಿನ ವ್ಯವಸ್ಥೆ ಕಲ್ಪಿಸಬೇಕೆಂದು ದೇವಸ್ಥಾನದ ಅಡಳಿತ ಮಂಡಳಿಯವರು ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲರವರಿಗೆ ಮನವಿ ಮಾಡಿರುವ ಹಿನ್ನಲೆಯಲ್ಲಿ ಅವರು ಆದಷ್ಟು ಬೇಗ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದೆಂದು ಡಾ. ಚಂದ್ರಶೇಖರ ಪಾಟೀಲರು ಭರವಸೆ ನೀಡಿದರು. ಮಹಾವೀರ ಜಯಂತಿ ನಿಮಿತ್ಯ ಜೈನ ಮಂದಿರಕ್ಕೆ ಭೇಟಿ ನೀಡಿ ದರುಶನ ಪಡೆದು ಮಾತನಾಡಿದರು. ಈ ಸಂದರ್ಭದಲ್ಲಿ ಶ್ರೀ ಮೋಹನಲಾಲ್ ಜೈನ್, ಶ್ರೀಮತಿ ಪೂಜಾ ಜೈನ, ಶ್ರೀ ಧನ್ಯಕುಮಾರ ಜೈನ, ಶ್ರೀಮತಿ ಪಲ್ಲವಿ ಜೈನ, ಶ್ರೀ ಮನೋಜ ಜೈನ, ಶ್ರೀ ದೀಪಕ ಕಟಂಬಲೆ, ಶ್ರೀಮತಿ ಗೀತಾ ಜೈನ, ಡಾ. ಇಂದ್ರಜೀತ್ ಶಹಾ ಹಾಗೂ ಅಡಳಿತ ಮಂಡಳಿಯ ಪದಾಧಿಕಾರಿಗಳಿದ್ದರು.

# ಪಿ.ಯು.ಸಿ. ಟಾಪರ್ಸ್ ಗಳಿಗೆ ಡಿ.ಸಿ. ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.10 ಕಳೆದ 2024–2025ನೇ ಸಾಲಿನ ಪಿ.ಯು.ಸಿ ಪರೀಕ್ಷೆ–1ರ ಫಲಿತಾಂಶ ಪ್ರಕಟವಾಗಿದ್ದು, ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಷಯಗಳಲ್ಲಿ ಜಿಲ್ಲೆಗೆ ಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಬುಧವಾರ ತಮ್ಮ ಕಚೇರಿಯಲ್ಲಿ ಸನ್ಮಾನಿಸಿದರು. ಕಲಾ ವಿಭಾಗದಲ್ಲಿ 600ಕ್ಕೆ 589 ಅಂಕಗಳನ್ನು ಗಳಿಸಿದ ಚಿತ್ತಾಪೂರ ನಾಗಾವಿ ಇ.ಎಸ್. ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ನಾಗರತ್ನ ತಂದೆ ಶರಣಬಸಪ್ಪ,

ವಾಣಿಜ್ಯ ವಿಭಾಗದಲ್ಲಿ 600ಕ್ಕೆ 596 ಅಂಕ ಗಳಿಸಿರುವ ಕಲಬುರಗಿಯ ಗುರುಕುಲ್ ಪಿಯು ಕಾಲೇಜು ವಿದ್ಯಾರ್ಥಿ ಸೀಯಾ ತಂದೆ ಆನಂದ ತೋಷ್ನಿವಾಲ್ ಹಾಗೂ ವಿಜ್ಞಾನ ವಿಭಾಗದಲ್ಲಿ 600 ಅಂಕಗಳಿಗೆ 592 ಅಂಕಗಳನ್ನು ಗಳಿಸಿರುವ ಕಲಬುರಗಿಯ ಬಾಲಕಿಯರ ಪಿಯು ಕಾಲೇಜಿನ ವಿದ್ಯಾರ್ಥಿ ಬಿ.ಬಿ.ಸಫಯಾ ಅವರನ್ನು ಸನ್ಮಾನಿಸಿ ವಿದ್ಯಾರ್ಥಿಗಳ ಸಾಧನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಉಪನಿರ್ದೇಶಕ ಅಶೋಕ ಶಾಸ್ತ್ರಿ ಸೇರಿದಂತೆ ಇನ್ನಿತರು ಇದ್ದರು.

# ರಾಣಾ ನಮ್ಮವನಲ್ಲ:ಪಾಕ್ ಹೇಳಿಕೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.10: ಅಮೆರಿಕದಿಂದ ಗಡಿಪಾರಾಗಿ ಭಾರತಕ್ಕೆ ಬಂದಿರುವ 26/11 ಮುಂಬೈ ದಾಳಿ ರೂವಾರಿ ತಹವ್ವೂರ್ ಹುಸೇನ್ ರಾಣಾ ಪಾಕಿಸ್ತಾನಿ ಪ್ರಜೆಯಲ್ಲ. ಆತ ಕೆನಡಾ ಪ್ರಜೆ ಎಂದು ಪಾಕಿಸ್ತಾನ ಸರ್ಕಾರ ಹೇಳಿದೆ.

ನೂರಾರು ಮಂದಿಯ ಸಾವಿಗೆ ಕಾರಣವಾದ 26/11 ಮುಂಬೈ ದಾಳಿ ಪ್ರಕರಣದ ಪ್ರಮುಖ ರೂವಾರಿಯಾಗಿರುವ ಆರೋಪಿ ತಹವ್ವೂರ್ ರಾಣಾ ಪಾಕಿಸ್ತಾನ ಮೂಲದವನೇ ಆಗಿದ್ದರೂ ಆತ ಕೆನಡಾ ಪ್ರಜೆ ಎಂದು ಹೇಳುವ ಮೂಲಕ ಪ್ರಕರಣದಿಂದ ಪಾಕಿಸ್ತಾನ ಅಂತರ ಕಾಯ್ದುಕೊಂಡಿದೆ.

ಭಾರತದ ಮೇಲೆ ನಡೆದ ಅತ್ಯಂತ ಭಯಾನಕ ಭಯೋತ್ಪಾದಕ ದಾಳಿಗಳಲ್ಲಿ ಒಂದಾದ ಮುಂಬೈ ದಾಳಿ ಪ್ರಕರಣದ ಪ್ರಮುಖ ಆರೋಪಿ ತಹವ್ವೂರ್ ರಾಣಾನನ್ನು ಅಮೆರಿಕ ಭಾರತಕ್ಕೆ ಗಡಿಪಾರು ಮಾಡಿದೆ. ಇದೇ ವಿಚಾರವಾಗಿ ಮೊದಲ ಬಾರಿಗೆ ಪಾಕಿಸ್ತಾನ ವಿದೇಶಾಂಗ ಇಲಾಖೆ ಪ್ರತಿಕ್ರಿಯೆ ನೀಡಿದೆ.

ತಹವ್ವೂರ್ ರಾಣಾ ಪಾಕಿಸ್ತಾನದವನಲ್ಲ. ಆತ ಕೆನಡಾ ಪ್ರಜೆಯಾಗಿದ್ದಾನೆ. ಆತನಿಗೆ ಕೆನಡಾ ಪೌರತ್ವ ಇದೆ. ಕಳೆದ ಎರಡು ದಶಕಗಳಿಂದ ತಹವ್ವೂರ್ ರಾಣಾ ತನ್ನ ಪಾಕಿಸ್ತಾನಿ ದಾಖಲೆಗಳನ್ನು ನವೀಕರಿಸಿಲ್ಲ. ಹೀಗಾಗಿ ಆತ ಪಾಕಿಸ್ತಾನದ ಪ್ರಜೆಯಲ್ಲ. ಕೆನಡಾದ ಪ್ರಜೆಯಾಗಿದ್ದಾನೆ ಎಂದು ಹೇಳಿದೆ.

ರಾಣಾ ಪಾಕಿಸ್ತಾನದವನು.. ಮುಂಬೈ ದಾಳಿಗೆ ಪಾಕಿಸ್ತಾನವೇ ನೇರ ಹೊಣೆ

ಇನ್ನು ಅತ್ತ ಪಾಕಿಸ್ತಾನ ವಿದೇಶಾಂಗ ಇಲಾಖೆ ತಹವ್ವೂರ್ ರಾಣಾ ಪಾಕಿಸ್ತಾನದವನಲ್ಲ ಎಂದು ಹೇಳುತ್ತಿದ್ದರೂ ಇತ್ತ ಪ್ರಕರಣದ ತನಿಖೆ ನಡೆಸುತ್ತಿರುವ ಭಾರತೀಯ ಅಧಿಕಾರಿಗಳು ಮಾತ್ರ ತಹವ್ವೂರ್ ರಾಣಾ ಪಾಕಿಸ್ತಾನದವನೇ.. ಮುಂಬೈ ದಾಳಿ ಪ್ರಕರಣದಲ್ಲಿ ಪಾಕಿಸ್ತಾನದ ನೇರ ಕೈವಾಡವಿದೆ.

ಅಕ್ಟೋಬರ್ 2009ರಲ್ಲಿ ಮತ್ತೊಂದು ಸಂಚುಕೋರ ಡೇವಿಡ್ ಕೋಲ್ಮನ್ ಹೆಡ್ಲಿಯೊಂದಿಗೆ ಸೇರಿ ತಹವ್ವೂರ್ ರಾಣಾ ಭೀಕರ ಉಗ್ರ ದಾಳಿ ನಡೆಸಿದ್ದ ಎಂದು ಆರೋಪಿಸಿದೆ. ಅಲ್ಲದೆ ಮುಂಬೈ ದಾಳಿ ಪ್ರಕರಣ ಪ್ರಮುಖ ರೂವಾರಿ ಈತನೇ ಆಗಿದ್ದು, ಈತ ಪಾಕಿಸ್ತಾನದ ಸೇನೆ ಮತ್ತು ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎ???ನೊಂದಿಗೆ ಸಂಪರ್ಕ ಹೊಂದಿದ್ದ. ಹೀಗಾಗಿ 26/11 ಮುಂಬೈ ದಾಳಿಯಲ್ಲಿ ಪಾಕಿಸ್ತಾನದ ನೇರ ಕೈವಾಡವಿದೆ ಎಂದು ಹೇಳಿದ್ದಾರೆ.

ಪಾಕಿಸ್ತಾನಕ್ಕೆ ಸಿಕ್ಕಿ ಬೀಳುವ ಭೀತಿ

ಇನ್ನು ಅಮೆರಿಕದಿಂದ ಗಡಿಪಾರಾಗಿ ಭಾರತಕ್ಕೆ ಬಂದಿರುವ ಉಗ್ರದಾಳಿ ರೂವಾರಿ ತಹವ್ವೂರ್ ರಾಣಾನನ್ನು ಭಾರತೀಯ ಅಧಿಕಾರಿಗಳು ತೀವ್ರ ವಿಚಾರಣೆಗೊಳಪಡಿಸುವ ಸಾಧ್ಯತೆ ಇದೆ. ವಿಚಾರಣೆ ವೇಳೆ ಆತ ಪಾಕಿಸ್ತಾನದ ಕೈವಾಡದ ಬಗ್ಗೆ ಮಾಹಿತಿ ನೀಡುವ ಸಾಧ್ಯತೆ ಇದೆ. ಇದೇ ಕಾರಣಕ್ಕೆ ತಹವ್ವೂರ್ ರಾಣಾನಿಂದ ಪಾಕಿಸ್ತಾನ ಅಂತರ ಕಾಯ್ದುಕೊಳ್ಳುತ್ತಿದೆ ಎಂದು ಹೇಳಲಾಗಿದೆ.

ಪಾಕಿಸ್ತಾನಿ–ಕೆನಡಾದ ವೈದ್ಯ ತಹವೂರ್ ರಾಣಾ ಚಿಕಾಗೋದಲ್ಲಿ ಟ್ರಾವೆಲ್ ಏಜೆನ್ಸಿಯನ್ನು ಹೊಂದಿದ್ದ. ಇದೇ ಸಂಸ್ಥೆಯನ್ನು ಮುಂಬೈ ದಾಳಿಯ ಮಾಸ್ಟರ್‌ಮೈಂಡ್‌ಗಳಲ್ಲಿ ಒಬ್ಬನಾದ ಡೇವಿಡ್ ಕೋಲ್ಮನ್ ಹೆಡ್ಲಿ ದಾಳಿಗೆ ಮೊದಲು ಭಾರತ ಪ್ರಯಾಣಕ್ಕಾಗಿ ಬಳಸಿಕೊಂಡಿದ್ದ ಎಂದು ಹೇಳಲಾಗಿದೆ.

# ಹಾಸನದಲ್ಲಿ ಏ.12, 13ಕ್ಕೆ ಪತ್ರಕರ್ತರ ರಾಜ್ಯ ಮಟ್ಟದ ಕ್ರಿಕೆಟ್ ಟೂರ್ನಮೆಂಟ್



ಬೆಂಗಳೂರು:ಏ.10: ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ)ವು ಈ ಬಾರಿ ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಿಂದ ಇದೇ ಏ.12 ಮತ್ತು 13ರಂದು ಕ್ರಿಕೆಟ್ ಕ್ರೀಡಾಕೂಟವನ್ನು ಏರ್ಪಡಿಸಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದರು.

ಪ್ರೆಸ್ ಕ್ಲಬ್ನಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಕ್ರಿಕೆಟ್ ಪಂದ್ಯಾವಳಿಯ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿದರು.

ಮಲೆನಾಡು, ಅರೆ ಮಲೆನಾಡು, ಬಯಲು ಸೀಮೆ ಸಮ್ಮಿಳನ ಹೊಂದಿರುವ ಹಾಸನ ಹೊಯ್ಸಳ ಶಿಲ್ಪಕಲೆಗೆ ತವರೂರು, ಗೊಮ್ಮಟನ ನೆಲೆಬೀಡಾಗಿದೆ. ಇದೇ ಮೊದಲ ಬಾರಿಗೆ ಹಾಸನದಲ್ಲಿ ರಾಜ್ಯ ಮಟ್ಟದ ಪತ್ರಕರ್ತರ ಕ್ರಿಕೆಟ್ ಕ್ರೀಡಾಕೂಟ ಏರ್ಪಡಿಸಲಾಗಿದೆ ಎಂದರು.

ಟೂರ್ನಮೆಂಟಿನಲ್ಲಿ ಪ್ರತಿ ಜಿಲ್ಲೆಯ ತಂಡಗಳು ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದು, ಎರಡು ದಿನ ಹಾಸನದಲ್ಲಿ ಪತ್ರಕರ್ತರ ಕ್ರಿಕೆಟ್ ಕ್ರೀಡಾ ಹಬ್ಬ ನಡೆಯಲಿದ್ದು, ಅದಕ್ಕಾಗಿ ಅಂತಿಮ ಹಂತದ ಸಿದ್ಧತೆ ನಡೆ–ಯುತ್ತಿದೆ ಎಂದರು.

ಸ್ಪೀಕರ್ ಯು.ಟಿ.ಖಾದರ್ ಅವರ ಘನ ಉಪಸ್ಥಿತಿಯಲ್ಲಿ ಸಹಕಾರ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ಈ ಪಂದ್ಯಾವಳಿ ಉದ್ಘಾಟನೆ ಮಾಡಲಿದ್ದಾರೆ. ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಪಂದ್ಯಾವಳಿ ಬಗ್ಗೆ ಆಶಯ ನುಡಿಗಳನ್ನಾಡಲಿದ್ದಾರೆ.

ಪ್ರಸ್ತಾವಿಕವಾಗಿ ರಾಜ್ಯ ಸಮಿತಿ ಸದಸ್ಯ ಎಚ್.ಬಿ.ಮದನಗೌಡರು ಮಾತನಾಡಲಿದ್ದು, ಸಂಸದರಾದ ಶ್ರೇಯಸ್ ಪಟೇಲ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಲಿದ್ದಾರೆ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ವಹಿಸುವರು. ಹಾಸನ ಪತ್ರಕರ್ತರ ಸಂಘದ ಅಧ್ಯಕ್ಷ ರಾದ ವೇಣುಕುಮಾರ್ ಮತ್ತಿತರರು ಭಾಗವಹಿಸಲಿದ್ದಾರೆ.

ಸಮಾರೋಪ ಸಮಾರಂಭದಲ್ಲಿ ಮಾಜಿ ಸಚಿವ ಎಚ್.ಡಿ.ರೇವಣ್ಣ ಮತ್ತಿತರರು

ಭಾಗವಹಿಸಲಿದ್ದಾರೆ. ಕ್ರೀಡಾ–ಕೂಟಕ್ಕೆ ಹಾಸನ ಜಿಲ್ಲೆಯ ಎಲ್ಲ ಶಾಸಕರು, ಜಿಲ್ಲೆಯ ಎಲ್ಲ ವರ್ಗದ ಸರ್ಕಾರಿ ಅಧಿಕಾರಿಗಳು ಹಾಗೂ ಹಾಸನ ಕಾರ್ಯನಿರತ ಪತ್ರಕರ್ತರ ಸಂಘದ ಎಲ್ಲ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದ ಅವರು, ಈ ಎರಡು ದಿನಗಳ ಕ್ರೀಡಾಕೂಟ ಯಶಸ್ವಿಗೊಳಿಸಲು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಹಿರಿಯ ಪತ್ರಕರ್ತರಾದ ಧ್ಯಾನ್ ಪೂಣಚ್ಚ, ಗಿರೀಶ್ ಗರಗ, ಭಾರತಿ ರಾಜನ್, ವಿಶ್ವನಾಥ್ ಸುವರ್ಣ ಅವರು ಉಪಸ್ಥಿತರಿದ್ದರು.

# ಡಿವೈಡರ್‌ಗೆ ಕಾರು ಡಿಕ್ಕಿ : ನಾಲ್ವರ ದುರ್ಮರಣ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.10: ನೆಲಮಂಗಲ ತಾಲೂಕಿನ ಡಾಬಸ್ ಪೇಟೆ ಬಳಿ ಕಾರೊಂದು ಡಿವೈಡರ್ ಗೆ ಕಾರು ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದಾರೆ.

ಇಂದು ಬೆಂಗಳೂರು – ತುಮಕೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ಅಪಘಾತ ಸಂಭವಿಸಿದ್ದು, ಮೃತರನ್ನು ಕಾರು ಚಾಲಕ ಗೋಪಾಲ್(45), ಗೋಪಾಲ್ (60), ಶಶಿಕಲಾ (55) ಮತ್ತು ದೀಪಿಕಾ (35) ಎಂದು ಗುರುತಿಸಲಾಗಿದೆ. ಬೆಂಗಳೂರಿನಿಂದ ತುಮಕೂರು ಕಡೆಗೆ ತೆರಳುತ್ತಿದ್ದ ಕಾರು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್?ಗೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ಕಾರಿನಲ್ಲಿದ್ದ ನಾಲ್ವರು ಮೃತಪಟ್ಟಿದ್ದಾರೆ ಮತ್ತು ಮಕ್ಕಳಿಬ್ಬರು ಗಾಯಗೊಂಡಿದ್ದು, ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಾರಿನಲ್ಲಿದ್ದವರು ತುಮಕೂರಿನ ಸಂಬಂಧಿಗಳ ಮನೆಯಲ್ಲಿ ನಾಮಕರಣ ಕಾರ್ಯಕ್ರಮಕ್ಕೆ ತೆರಳುತಿದ್ದರು ಎಂದು ತಿಳಿದು ಬಂದಿದೆ. ಅಪಘಾತದಿಂದಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೆಲಕಾಲ ಟ್ರಾಫಿಕ್ ಜಾಮ್ ಉಂಟಾಗಿದ್ದು, ನೆಲಮಂಗಲ ಸಂಚಾರಿ ಪೊಲೀಸರು ಸಂಚಾರ ಸುಗಮಗೊಳಿಸಿದರು.

ಬೆಂಗಳೂರು ಗ್ರಾಮಾಂತರ ವಿಭಾಗದ ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ.ಬಾಬಾ ಅವರು ಅಪಘಾತದ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.